ಕೊಪ್ಪಳ-ಗದಗ-ವಿಜಯನಗರ-ಹಾವೇರಿ-ಯಾದಗಿರಿ-ರಾಯಚೂರು-ದಾವಣಗೇರೆ-ಧಾರವಾಡದಿಂದ ಏಕಕಾಲಕ್ಕೆ ಪ್ರಕಟಗೊಳ್ಳುವ ಪ್ರಾದೇಶಿಕ ದಿನಪತ್ರಿಕೆ

POSTAL REG NO : KPL/L/RNP/04/24-26

PRGINo:KARKAN/2023/89022

21/08/2026
Friday
Vol.–03
Issue–262
Rs.02/–

# ಕರುನಾಡ ಬೆಳಗು
KARUNADA BELAGU
ಕೊಪ್ಪಳ ಆವೃತ್ತಿ
KANNADA DAILY NEWSPAPER
ಕೊಪ್ಪಳ ಜಿಲ್ಲೆಯ ಪ್ರಥಮ ಪ್ರಾದೇಶಿಕ ಕನ್ನಡ ದಿನಪತ್ರಿಕೆ

21/08/2026
ಶುಕ್ರವಾರ
ಸಂಪುಟ–03
ಸಂಚಿಕೆ–262
ಬೆಲೆ ರೂ.02/–

ಸಂಪಾದಕರು : ಸಂತೋಷ ದೇಶಪಾಂಡೆ
Editor: Santosh Deshpande
E-mail:karunadabelagu@gmail.com
ಮೊ.9880088367

## ಬರ ಪರಿಹಾರ ಘೋಷಣೆಗೆ ರೈತರ ಆಗ್ರಹ



ಕೊಪ್ಪಳ, 20– ಬರ ಪರಿಹಾರ ಘೋಷಣೆ ಮಾಡುವಂತೆ ಆಗ್ರಹಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ(ವಿ.ಆರ್.ನಾರಾಯಣರೆಡ್ಡಿ) ನೇತೃತ್ವದಲ್ಲಿ ರೈತರು ನಗರದ ಜಿಲ್ಲಾಡಳಿತ ಭವನದ ಮುಂದೆ ಬುಧವಾರ ಪ್ರತಿಭಟನೆ ನಡೆಸಿದರು.

ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು. ರಾಜ್ಯದ 178 ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಿ, ಅಗತ್ಯ ಬರ ಪರಿಹಾರವನ್ನು ಒದಗಿಸಬೇಕು. ರಾಷ್ಟ್ರೀಕೃತ ಬ್ಯಾಂಕ್‌ಗಳು ಹಾಗೂ ಸಹಕಾರಿ ಸಂಘಗಳಲ್ಲಿ ರೈತರು ಪಡೆದಿರುವ ಸಂಪೂರ್ಣ ಸಾಲವನ್ನು ಮನ್ನಾ ಮಾಡಬೇಕು. 2025–26ನೇ ಸಾಲಿನ ಎಲ್ಲ ಬೆಳೆಗಳ ವಿಮಾ ಪರಿಹಾರವನ್ನು ಮಂಜೂರು ಮಾಡಬೇಕು ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಎಲ್ಲ ಬೆಳೆಗಳಿಗೆ ವರ್ಷಪೂರ್ತಿ ಬೆಂಬಲ ಬೆಲೆ ಘೋಷಿಸಬೇಕು. ಗೊಬ್ಬರ ಉತ್ಪಾದಕ ಕಂಪನಿಗಳು ಯಾವುದೇ ಅಂಕ್ ಪದ್ಧತಿಯಿಲ್ಲದೆ ಸಹಕಾರಿ ಸಂಘಗಳು ಮತ್ತು ರಸಗೊಬ್ಬರ ಅಂಗಡಿಗಳಿಗೆ ಗೊಬ್ಬರ ಸರಬರಾಜು ಮಾಡುವಂತೆ ಜಿಲ್ಲಾಧಿಕಾರಿಗಳು ಹಾಗೂ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಸೂಕ್ತ ಸೂಚನೆ ನೀಡಬೇಕು. ವಿದ್ಯುತ್ ಖಾಸಗೀಕರಣವನ್ನು ರದ್ದುಗೊಳಿಸಬೇಕು. ಎಲ್ಲ ಕಂಪನಿಗಳ ರಾಸಾಯನಿಕ ಗೊಬ್ಬರವನ್ನು ಯಾವುದೇ ಅಂಕ್ ಪದ್ಧತಿಯಿಲ್ಲದೆ ರೈತರಿಗೆ ವಿತರಿಸಬೇಕು ಎಂದು ರೈತರು ಒತ್ತಾಯಿಸಿದರು.

ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ರಾಜ್ಯ ಉಪಾಧ್ಯಕ್ಷ ಅಂದಪ್ಪ ಹುರುಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಜೀರಸಾಬ್ ತಳಕಲ್, ಸಂಘಟನಾ ಕಾರ್ಯದರ್ಶಿ ರಾಮು ಕೌದಿ, ಚಿಕ್ಕಬಳ್ಳಾಪುರ ಜಿಲ್ಲಾಧ್ಯಕ್ಷ ಗೋವಿಂದರೆಡ್ಡಿ, ದೇವಪ್ಪ ಸೋಭಾನದ, ಗಂಗಮ್ಮ ಹುಡೇದ್, ಶರಣಪ್ಪ ಚಂಡೂರು, ಹನುಮಪ್ಪ ಮರಡಿ, ಶಿವು ಬಗ್ಗಿ, ಬಸಪ್ಪ ಮಂಡಲಗೇರಿ, ಮರ್ತುಜಾಸಾಬ್ ತಳಕಲ್, ಶಿವಪ್ಪ ಗುಳಗಣ್ಣನವರ, ಈಶಪ್ಪ ಸಬರದ್, ಮುತ್ತು ಇದ್ದರು.

**ಪ್ರತಿಭಟನಾ ಮೆರವಣಿಗೆ, ಡಿಸಿಗೆ ಮನವಿ**

ಬರ ಪರಿಹಾರ ಘೋಷಣೆಗೆ ಆಗ್ರಹಿಸಿ ನಗರದ ಪ್ರಮುಖ ಬೀದಿಗಳಲ್ಲಿ ರೈತರು ಪ್ರತಿಭಟನಾ ಮೆರವಣಿಗೆ ನಡೆಸಿದರು. ನಗರದ ತಾಲ್ಲೂಕು ಕ್ರೀಡಾಂಗಣದಿಂದ ಆರಂಭವಾದ ರೈತರ ಪ್ರತಿಭಟನಾ ಮೆರವಣಿಗೆಯು ಅಶೋಕ ವೃತ್ತ, ಮುಂಡರಗಿಯ ಭೀಮರಾಯ ವೃತ್ತ, ಬಸವೇಶ್ವರ ವೃತ್ತದ ಮೂಲಕ ಹೊಸಪೇಟೆ ರಸ್ತೆಯ ಮಾರ್ಗವಾಗಿ ಜಿಲ್ಲಾಡಳಿತ ಭವನದ ವರೆಗೂ ಸಾಗಿತು. ಇದರೊಂದಿಗೆ ಟ್ರ್ಯಾಕ್ಟರ್ ಮತ್ತು ಕ್ರೂಸರ್ ವಾಹನಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದವು. ಬಳಿಕ ಬರ ಪರಿಹಾರ ಘೋಷಣೆ ಸೇರಿ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ(ವಿ.ಆರ್.ನಾರಾಯಣರೆಡ್ಡಿ)ಯ ಪದಾಧಿಕಾರಿಗಳು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಮನವಿ ಸಲ್ಲಿಸಿದರು. ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

## ಶೀಘ್ರ ಎಲೆಕ್ಟ್ರಿಕ್ ಬಸ್ ಸೌಲಭ್ಯ

### ಸಾರಿಗೆ ನಿಗಮದ ಅಧ್ಯಕ್ಷ ಅರುಣ

ಕೊಪ್ಪಳ, 20– ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ (ಕೆಕೆಆರ್‌ಟಿಸಿ) ಒಟ್ಟಾರೆ 400 ನೂತನ ಬಸ್‌ಗಳು ಮಂಜೂರಾಗಿದ್ದು, ಶೀಘ್ರದಲ್ಲೇ 'ಪಿಎಂ ಇ–ಬಸ್ ಸೇವಾ' (PM E-Bus Seva) ಯೋಜನೆಯಡಿ ಪರಿಸರ ಸ್ನೇಹಿ ಎಲೆಕ್ಟ್ರಿಕ್ ಬಸ್‌ಗಳು ನಿಗಮಕ್ಕೆ ಸೇರ್ಪಡೆಗೊಳ್ಳಲಿವೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಅರುಣ ಕುಮಾರ ಪಾಟೀಲ್ ಹೇಳಿದರು.

ಆಗಸ್ಟ್ 20 ರಂದು ಕೊಪ್ಪಳ ಜಿಲ್ಲೆಗೆ ಭೇಟಿ ನೀಡಿದ ಅವರು, ನಗರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳು ಹಾಗೂ ಸಾರಿಗೆ ಸೌಲಭ್ಯಗಳ ಪರಿಶೀಲನೆ ನಡೆಸಿದರು.



**ಸಂಸದರೊಂದಿಗೆ ಚರ್ಚೆ:** ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಅಧ್ಯಕ್ಷರು, ಕೊಪ್ಪಳ ಜಿಲ್ಲಾ ಭೇಟಿಯ ವೇಳೆ ಕೊಪ್ಪಳ ಸಂಸದರಾದ ರಾಜಶೇಖರ ಹಿಟ್ನಾಳ ಅವರನ್ನು ಭೇಟಿ ಮಾಡಿ ಚರ್ಚಿಸಿದರು. ಈ ಸಂದರ್ಭದಲ್ಲಿ ಸಂಸದರು ಕೊಪ್ಪಳ ಜಿಲ್ಲೆಯ ಸಾರ್ವಜನಿಕರಿಗೆ ಹಾಗೂ ಗ್ರಾಮೀಣ ಭಾಗದ ಜನರಿಗೆ ಇನ್ನಷ್ಟು ಹೆಚ್ಚಿನ ಸಾರಿಗೆ ಸೌಲಭ್ಯ ಒದಗಿಸುವಂತೆ ಅಧ್ಯಕ್ಷರಲ್ಲಿ ಮನವಿ ಮಾಡಿದರು.

**ಕೇಂದ್ರೀಯ ಬಸ್ ನಿಲ್ದಾಣ ಪರಿಶೀಲನೆ:** ನಂತರ ಕೊಪ್ಪಳ ಕೇಂದ್ರೀಯ ಬಸ್ ನಿಲ್ದಾಣಕ್ಕೆ ಭೇಟಿ ನೀಡಿದ ಅಧ್ಯಕ್ಷರು, ಅಲ್ಲಿನ ಮೂಲಭೂತ ಸೌಕರ್ಯಗಳು, ದ್ವಿಚಕ್ರ ವಾಹನ ನಿಲುಗಡೆ (ಪಾರ್ಕಿಂಗ್) ವ್ಯವಸ್ಥೆ, ಶೌಚಾಲಯ ಹಾಗೂ ಮೂತ್ರಾಲಯಗಳ ಸ್ವಚ್ಛತೆ ನಿರ್ವಹಣೆಯನ್ನು ಖುದ್ದಾಗಿ ಪರಿಶೀಲಿಸಿದರು. ಜೊತೆಗೆ ಬಸ್ ಪಾಸ್ ವಿತರಣಾ ಕೌಂಟರ್‌ಗೆ ತೆರಳಿ, ವಿದ್ಯಾರ್ಥಿಗಳಿಗೆ ಹಾಗೂ ಪ್ರಯಾಣಿಕರಿಗೆ ಪಾಸ್ ವಿತರಣೆ ಸಮರ್ಪಕವಾಗಿ ನಡೆಯುತ್ತಿದೆಯೇ ಎಂಬ ವಾಸ್ತವಿಕ ಸ್ಥಿತಿಗತಿಯನ್ನು ಪರಿಶೀಲಿಸಿದರು.

**ಎಲೆಕ್ಟ್ರಿಕ್ ಬಸ್ ಘಟಕ ನಿರ್ಮಾಣಕ್ಕೆ ಸೂಚನೆ:** ಜಿಲ್ಲಾಧಿಕಾರಿಗಳ ಅನುಮೋದನೆಯಂತೆ ಕೆಕೆಆರ್‌ಟಿಸಿಗೆ ಮಂಜೂರಾಗಿರುವ 5 ಎಕರೆ ಖಾಲಿ ನಿವೇಶನಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಲ್ಲದೆ, ಕೊಪ್ಪಳ ವಿಭಾಗೀಯ ಕಚೇರಿಯ ಪಕ್ಕದಲ್ಲಿರುವ ಹಳೆಯ ವಸತಿ ಗೃಹಗಳನ್ನು ತೆರವುಗೊಳಿಸಿದ ಸ್ಥಳವನ್ನು ವೀಕ್ಷಿಸಿ, ಅಲ್ಲಿ ಶೀಘ್ರವಾಗಿ ಎಲೆಕ್ಟ್ರಿಕ್ ಬಸ್ ಘಟಕ (Electric Bus Unit) ನಿರ್ಮಾಣ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಪ್ರಗತಿ ಪರಿಶೀಲನಾ ಸಭೆ & ದೇವರಾಜ ಅರಸು ಜಯಂತಿ:** ವಿಭಾಗೀಯ ಕಚೇರಿಯಲ್ಲಿ ದಿವಂಗತ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ಜನ್ಮದಿನಾಚರಣೆಯನ್ನು ಆಚರಿಸಲಾಯಿತು. ಬಳಿಕ ವಿಭಾಗೀಯ ನಿಯಂತ್ರಣಾಧಿಕಾರಿಗಳು, ಎಲ್ಲಾ ಶಾಖಾ ಮುಖ್ಯಸ್ಥರು ಹಾಗೂ ಘಟಕ ವ್ಯವಸ್ಥಾಪಕರೊಂದಿಗೆ ಸಭೆ ನಡೆಸಿ, ವಿಭಾಗದ ಭೌತಿಕ ಮತ್ತು ಆರ್ಥಿಕ ಪ್ರಗತಿಯನ್ನು ಪರಿಶೀಲಿಸಿ ಅಧಿಕಾರಿಗಳ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಸಾರ್ವಜನಿಕರಿಗೆ ಉತ್ತಮ ಹಾಗೂ ಗುಣಮಟ್ಟದ ಸಾರಿಗೆ ಸೇವೆ ಒದಗಿಸಲು ಸಿಬ್ಬಂದಿ ಬದ್ಧರಾಗಿರಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕೊಪ್ಪಳ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಜಿ.ಶಿನಿಯ್ಯ ಸೇರಿದಂತೆ ಘಟಕ ವ್ಯಾವಸ್ಥಾಪಕರು, ಶಾಖಾ ಮುಖ್ಯಸ್ಥರು ಹಾಗೂ ಇತರೆ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಅರಸು ಅವರ ತತ್ವ ಅಳವಡಿಸಿಕೊಳ್ಳಿ– ಡಿಸಿ



ಗದಗ, 20– ಕರ್ನಾಟಕ ಕಂಡ ಅಪ್ರತಿಮ ನಾಯಕ, ಹಿಂದುಳಿದ ವರ್ಗಗಳ ಏಳಿಗೆಗೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಸಾಮಾಜಿಕ ಕ್ರಾಂತಿಯ ಹರಿಕಾರ ದೀನದಲಿತರ ಆಶಾಕಿರಣ, ಹಿಂದುಳಿದವರ ಏಳಿಗೆಗೆ ಅರಸು ಅವರ ಕೊಡುಗೆ ರಾಜ್ಯಕ್ಕೆ ಅಪಾರ, ದಿ॥ ಡಿ. ದೇವರಾಜ ಅರಸು ಅವರ ಆದರ್ಶಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಿ ಸಾಮಾಜಿಕ ಸಮಾನತೆಗೆ ಭದ್ರ ಬುನಾದಿ ಹಾಕಿದವರು ಅರಸರು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರುಗಳ ಸಹಯೋಗದಲ್ಲಿ ಶೋಷಿತರ ಸಮಗ್ರ ಅಭಿವೃದ್ಧಿಯ ಸಾಮಾಜಿಕ ಕ್ರಾಂತಿಯ ಹರಿಕಾರ ನೊಂದವರ ನಂದಾದೀಪ, ಸಾಧನೆಗಳ ಸರದಾರ, ಧೀಮಂತ ನಾಯಕ ಹಾಗೂ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿ ದಿ ॥ ಡಿ. ದೇವರಾಜ ಅರಸುರವರ 111 ನೇ ಜನ್ಮದಿನಾಚರಣೆ ಸಮಾರಂಭ ಕಾರ್ಯಕ್ರಮ ನಗರದ ಮುಳಗುಂದ ರೋಡ್ ಕನಕ ಭವನದಲ್ಲಿ ಗುರುವಾರ ಆಗಸ್ಟ್ (20) ರಂದು ದಿ ॥ ಡಿ. ದೇವರಾಜ ಅರಸುರವರ 111 ನೇ ಜನ್ಮದಿನಾಚರಣೆ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹೊಸ ಚಿಗುರು–ಹಳೆ ಬೇರು ಎಂಬ ತತ್ವದಂತೆ, ಅರಸು ಅವರು ತಮ್ಮ ಅಧಿಕಾರದ ಅವಧಿಯಲ್ಲಿ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಸಿಗಬೇಕೆಂಬ ದೂರದೃಷ್ಟಿಯಿಂದ ಶ್ರಮಿಸಿದರು.

ಉಳುವವನೇ ಭೂಮಿಯ ಒಡೆಯ' ಎಂಬ ಭೂ ಸುಧಾರಣೆ ಕಾಯ್ದೆಯನ್ನು ಅರಸು ಅವರು ಜಾರಿಗೆ ತಂದರು. 'ಉಳುವವನೇ ಭೂಮಿಯ ಒಡೆಯ' ಕಾಯ್ದೆಯು ರಾಜ್ಯದ ಇತಿಹಾಸದಲ್ಲೇ ಮಹತ್ವದ ಮೈಲಿಗಲ್ಲು. ಅಂದು ಬಡ ರೈತರಿಗೆ ಭೂಮಿಯ ಒಡೆತನ ಸಿಕ್ಕಿದ್ದರಿಂದ ಇಂದು ರಾಜ್ಯದ ಶೇ. 30 ಕ್ಕಿಂತ ಹೆಚ್ಚು ರೈತರು ಸ್ವಂತ ಭೂಮಿಯಲ್ಲಿ ಸಾಗುವಳಿ ಮಾಡುತ್ತಿದ್ದಾರೆ. ಒಂದೇ ರಾತ್ರಿಯಲ್ಲಿ ಲಕ್ಷಾಂತರ ಬಡ ಕುಟುಂಬಗಳು ಜಮೀನಿನ ಒಡೆಯರಾಗುವಂತೆ ಮಾಡಿದ ಕ್ರಾಂತಿಕಾರಿ ಹೆಜ್ಜೆ ಇದಾಗಿತ್ತು ಎಂದರು.

ಹಿಂದುಳಿದ ವರ್ಗಗಳಿಗೆ ಸಾಮಾಜಿಕ ಸ್ಥಾನಮಾನ ಹಾಗೂ ಉದ್ಯೋಗಗಳಲ್ಲಿ ಶಿಕ್ಷಣದಲ್ಲಿ ನ್ಯಾಯಯುತ ಪಾಲು ಸಿಗಬೇಕೆಂಬ ಉದ್ದೇಶದಿಂದ ಶರಣರ, ಹಿಂದುಳಿದವರ ಸಮೀಕ್ಷೆ ನಡೆಸಿ ಬಿಸಿಆರ್ (ಃಅಖ) ಸಾಮಾಜಿಕ ನ್ಯಾಯ ಹಾಗೂ ಮೀಸಲಾತಿಯನ್ನು ಜಾರಿಗೆ ತಂದರು. ಮಂಡಲ್ ಕಮಿಷನ್ ಬರುವ ಮುನ್ನವೇ ರಾಜ್ಯದಲ್ಲಿ ಶೇ. 70 ರಷ್ಟು ಮೀಸಲಾತಿ ಕಲ್ಪಿಸಿದ ಹೆಗ್ಗಳಿಕೆ ಅವರದ್ದು ಎಂದು ಹೇಳಿದರು.

ಇದೇ ಸಂಧರ್ಭದಲ್ಲಿ ಜನಪದ ಕಲಾವಿದ ವೀರಣ್ಣ ಅಂಗಡಿ ಮತ್ತು ಸಂಗಡಿಗರು ನಾಡಗೀತೆ ಪ್ರಸ್ತುತ ಪಡಿಸಿದರು. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಮೆಹಬೂಬ.ಎಮ್. ತುಂಬರಮಟ್ಟಿ ಸರ್ವರನ್ನು ಸ್ವಾಗತಿಸಿದರು. ತಾಲೂಕು ಹಿಂದುಳಿದ ವರ್ಗಗಳ ವಿಸ್ತಣಾಧಿಕಾರಿ ಜಿ .ಎನ್. ಮಲ್ಲೂರು ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯದ ನಿಲಯ ಪಾಲಕ ಡಿ.ಎಚ್. ವಸ್ತಾದ

## ಕ್ಷಯ ಮುಕ್ತ ಜಿಲ್ಲೆಗೆ ಕೈಜೋಡಿಸಿ

### ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ. ಭಾಸ್ಕರ್



ವಿಜಯನಗರ (ಹೊಸಪೇಟೆ), 20– ಕ್ಷಯ–ರೋಗ ನಿರ್ಮೂಲನೆಗೆ ಆರೋಗ್ಯ ಇಲಾಖೆಯೊಂದಿಗೆ ಪ್ರತಿಯೊಬ್ಬರೂ ಕೈಜೋಡಿಸುವ ಮೂಲಕ ಕ್ಷಯ ಮುಕ್ತ ವಿಜಯನಗರ ಜಿಲ್ಲೆ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ. ಭಾಸ್ಕರ್ ಕರೆ ನೀಡಿದರು.

ನಗರದ ವಿಜಯನಗರ ಕಾಲೇಜಿನಲ್ಲಿ ಗುರುವಾರ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮ ಹಾಗೂ ಕ್ಷಯ ಮುಕ್ತ ಭಾರತ ಅಭಿಯಾನದ ಅಂಗವಾಗಿ ಎನ್‌ಸಿಸಿ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ಷಯರೋಗವು ಮೈಕೋಬ್ಯಾಕ್ಟೀರಿಯಂ ಟ್ಯೂಬರ್‌ಕ್ಯುಲೋಸಿಸ್ ಎಂಬ ಬ್ಯಾಕ್ಟೀರಿಯಾದಿಂದ ಉಂಟಾಗುವ ಸಾಂಕ್ರಾಮಿಕ ಕಾಯಿಲೆಯಾಗಿದ್ದು, ಮುಖ್ಯವಾಗಿ ಶ್ವಾಸಕೋಶಕ್ಕೆ ತಗುಲುತ್ತದೆ. ಸೋಂಕಿತ ವ್ಯಕ್ತಿ ಕೆಮ್ಮಿದಾಗ ಅಥವಾ ಸೀನಿದಾಗ ಹೊರಬರುವ ಸೂಕ್ಷ್ಮ ತುಂತುರುಗಳ ಮೂಲಕ ರೋಗಾಣುಗಳು ಗಾಳಿಯಲ್ಲಿ ಹರಡಿ ಇತರರಿಗೆ ಸೋಂಕು ತಗುಲಬಹುದು. ಶ್ವಾಸಕೋಶದ ಹೊರತಾಗಿ ದೇಹದ ಇತರ ಅಂಗಗಳಿಗೂ ಕ್ಷಯರೋಗ ಬರುವ ಸಾಧ್ಯತೆ ಇದ್ದು, ಇದನ್ನು ಶ್ವಾಸಕೋಶೇತರ ಕ್ಷಯ ಎಂದು ಕರೆಯಲಾಗುತ್ತದೆ ಎಂದು ತಿಳಿಸಿದರು.

ಚಿಕಿತ್ಸೆ ಪಡೆಯದ ಸಾಂಕ್ರಾಮಿಕ ಕ್ಷಯರೋಗಿಯೊಬ್ಬರು ವರ್ಷಕ್ಕೆ ಸುಮಾರು 10 ರಿಂದ 15 ಮಂದಿಗೆ ಸೋಂಕು ಹರಡುವ ಸಾಧ್ಯತೆ ಇದೆ. ಆದ್ದರಿಂದ ರೋಗವನ್ನು ಆರಂಭಿಕ ಹಂತದಲ್ಲೇ ಪತ್ತೆಹಚ್ಚಿ ಸಂಪೂರ್ಣ ಚಿಕಿತ್ಸೆ ಪಡೆಯಬೇಕು. ಎಚ್‌ಐವಿ ಸೋಂಕು ಸೇರಿದಂತೆ ರೋಗನಿರೋಧಕ ಶಕ್ತಿ ಕುಂಠಿತವಾಗಿರುವವರಲ್ಲಿ ಕ್ಷಯರೋಗದ ಅಪಾಯ ಹೆಚ್ಚಿರುತ್ತದೆ ಎಂದರು.

ಎನ್‌ಸಿಸಿ ವಿದ್ಯಾರ್ಥಿಗಳ ಸೇವೆ ಬಳಸಿಕೊಳ್ಳಲು ಕ್ರಮ : ಭಾರತ ಸರ್ಕಾರದ ಮಾರ್ಗಸೂಚಿಯಂತೆ ಕ್ಷಯ ಮುಕ್ತ ಭಾರತ ಅಭಿಯಾನದಲ್ಲಿ ಎನ್‌ಸಿಸಿ ವಿದ್ಯಾರ್ಥಿಗಳನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳಲಾಗುತ್ತಿದೆ. ವಿದ್ಯಾರ್ಥಿಗಳಿಗೆ ಕ್ಷಯರೋಗದ ಕುರಿತು ಆರೋಗ್ಯ ಶಿಕ್ಷಣ ನೀಡುವುದು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಕ್ಷಯರೋಗಿಗಳ ನಿಯಮಿತ ತಪಾಸಣೆ ಹಾಗೂ ಔಷಧೋಪಚಾರ ಮುಂದುವರಿಸಲು ಉತ್ತೇಜಿಸುವುದು ಮತ್ತು ಪೌಷ್ಟಿಕ ಆಹಾರದ ಮಹತ್ವದ ಬಗ್ಗೆ ಮಾಹಿತಿ ನೀಡುವ ಕಾರ್ಯಗಳಲ್ಲಿ ಅವರ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದೆ ಎಂದು ಡಾ. ಭಾಸ್ಕರ್ ತಿಳಿಸಿದರು.

ರೋಗ ಲಕ್ಷಣ ಕಂಡರೆ ನಿರ್ಲಕ್ಷಿಸಬೇಡಿ : ಎರಡು ವಾರ ಅಥವಾ ಅದಕ್ಕಿಂತ ಹೆಚ್ಚು ಕಾಲ ನಿರಂತರ ಕೆಮ್ಮು, ಸಂಜೆ ವೇಳೆಯಲ್ಲಿ ಹೆಚ್ಚಾಗುವ ಜ್ವರ, ಎದೆನೋವು, ತೂಕ ಇಳಿಕೆಯಾಗುವುದು, ಹಸಿವು ಕಡಿಮೆಯಾಗುವುದು ಹಾಗೂ ಕಫದಲ್ಲಿ ರಕ್ತ ಕಾಣಿಸಿಕೊಳ್ಳುವುದು ಮುಂತಾದ ಲಕ್ಷಣಗಳು ಕಂಡುಬಂದರೆ ತಕ್ಷಣವೇ ಸಮೀಪದ ಆರೋಗ್ಯ ಕೇಂದ್ರ ಅಥವಾ ಕ್ಷಯರೋಗ ಪರೀಕ್ಷಾ ಕೇಂದ್ರದಲ್ಲಿ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಂ.ಪಿ. ದೊಡಮನಿ ತಿಳಿಸಿದರು.

ಕಾರ್ಯಕ್ರಮದಲ್ಲಿ ವಿಜಯನಗರ ಕಾಲೇಜಿನ ಪ್ರಾಚಾರ್ಯ ಪ್ರಭುಸ್ವಾಮಿ, ಪ್ರಾಧ್ಯಾಪಕರಾದ ಶಿವಕುಮಾರ್, ರವಿಕಿರಣ್, ಎನ್‌ಸಿಸಿ ವಿದ್ಯಾರ್ಥಿಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

## ಮಕ್ಕಳ ಮೇಲಿನ ದೌರ್ಜನ್ಯ ತಡೆಗೆ ಜಾಗೃತಿ ಅಗತ್ಯ: ಯಮನಮ್ಮ



ಕೊಪ್ಪಳ, 20– ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ, ಬಾಲ್ಯವಿವಾಹ ಹಾಗೂ ಇತರ ಅಪರಾಧಗಳನ್ನು ತಡೆಗಟ್ಟಲು ಮಕ್ಕಳ ಹಕ್ಕುಗಳು, ಕಾನೂನುಗಳು ಮತ್ತು ಸುರಕ್ಷತೆ ಕುರಿತು ಗ್ರಾಮ ಮಟ್ಟದಲ್ಲಿ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಮಾಜ ಕಾರ್ಯಕರ್ತೆ ಯಮನಮ್ಮ ಹೇಳಿದರು.

ಗಂಗಾವತಿ ತಾಲ್ಲೂಕಿನ ವಡ್ಡರಹಟ್ಟಿಯ ಕೆಎಲ್‌ಇ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರ(ಆ.19) ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಕೆಎಲ್‌ಇ ಪದವಿ ಪೂರ್ವ ಕಾಲೇಜಿನ ಸಹಯೋಗದಲ್ಲಿ ಆಯೋಜಿಸಿದ್ದ 'ಮಕ್ಕಳ ಮೇಲಿನ ದೌರ್ಜನ್ಯ ತಡೆಗಾಗಿ ಜನಸಂಪರ್ಕ ಸಂವಾದ ಕಾರ್ಯಕ್ರಮ'ದಲ್ಲಿ ಅವರು ಮಾತನಾಡಿದರು.

18 ವರ್ಷದೊಳಗಿನ ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳನ್ನು ತಡೆಯಲು ಪೋಕ್ಸೊ ಕಾಯ್ದೆ ಜಾರಿಯಲ್ಲಿದ್ದು, ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ. ಮಕ್ಕಳಿಗೆ ಲೈಂಗಿಕ ಕಿರುಕುಳ ನೀಡುವುದು, ಪ್ರಚೋದಿಸುವುದು, ಸಹಾಯ ಮಾಡುವುದು ಅಥವಾ ಅಂತಹ ಕೃತ್ಯಕ್ಕೆ ಪ್ರಯತ್ನಿಸುವುದು ಕೂಡ ಶಿಕ್ಷಾರ್ಹ ಅಪರಾಧವಾಗಿದೆ ಎಂದು ತಿಳಿಸಿದರು. ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ವಿವಾಹ ಮಾಡುವುದು, ಅದರಲ್ಲಿ ಭಾಗವಹಿಸುವುದು ಅಥವಾ ಪ್ರೋತ್ಸಾಹಿಸುವುದು ಕಾನೂನುಬಾಹಿರವಾಗಿದೆ. ಬಾಲ್ಯವಿವಾಹದಿಂದ ತಾಯಿ ಮತ್ತು ಶಿಶು ಮರಣ, ಅಪೌಷ್ಟಿಕತೆ ಸೇರಿದಂತೆ ಹಲವು ಸಮಸ್ಯೆಗಳು ಉಂಟಾಗುವ ಸಾಧ್ಯತೆ ಇರುವುದರಿಂದ ಬಾಲ್ಯವಿವಾಹ ತಡೆಗೆ ಎಲ್ಲರೂ ಸಹಕರಿಸಬೇಕು ಎಂದು ಹೇಳಿದರು.

ಮಕ್ಕಳ ಸಹಾಯವಾಣಿ 1098ಕ್ಕೆ ಕರೆ ಮಾಡಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ಸಹಾಯವಾಣಿ ಸಂಯೋಜಕ ಶರಣಪ್ಪ ಮಾತನಾಡಿ, ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ, ಮಕ್ಕಳ ಭಿಕ್ಷಾಟನೆ, ಲೈಂಗಿಕ ದೌರ್ಜನ್ಯ, ಕಾಣೆಯಾದ ಮಗು, ಬಿಸಾಡಿದ ಮಗು ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳ ಕುರಿತು ಮಾಹಿತಿ ದೊರೆತರೆ 1098 ಅಥವಾ 112ಕ್ಕೆ ಕರೆ ಮಾಡಿ ಮಾಹಿತಿ ನೀಡಬಹುದು. ಮಾಹಿತಿ ನೀಡಿದವರ ವಿವರಗಳನ್ನು ಗೌಪ್ಯವಾಗಿರಿಸಿ, ವಿವಿಧ ಇಲಾಖೆಗಳ ಸಹಯೋಗದಲ್ಲಿ ಮಗುವಿನ ರಕ್ಷಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯ ಎಎಸ್‌ಐ ಚಂದಪ್ಪ ಅವರು ಪೊಲೀಸ್ ಠಾಣೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ವಿಶೇಷ ಪೊಲೀಸ್ ಘಟಕದ ಕಾರ್ಯವೈಖರಿ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೆಎಲ್‌ಇ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲೆ ಡಾ. ಮಾನಸ ವಹಿಸಿದ್ದರು. ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಸನ್ನ, ನಾಗರತ್ನ, ಚೈತ್ರ, ಶರಣಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು. ಸಹಶಿಕ್ಷಕ ಚಂದ್ರಶೇಖರಪ್ಪ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### 9.48 ಲಕ್ಷ ರೂ ಮೌಲ್ಯದ

## ಅವಧಿ ಮುಗಿದ ಮದ್ಯ ನಾಶ



ಯಾದಗಿರಿ, 20– ಯಾದಗಿರಿಯ ಕರ್ನಾಟಕ ರಾಜ್ಯ ಪಾನೀಯ ನಿಗಮ ನಿಯಮಿತದ ಮದ್ಯಮಳಿಗೆಯಲ್ಲಿದ್ದ ಸುಮಾರು 9,48,999 ರೂ. ಮೌಲ್ಯದ ಅವಧಿ ಮುಗಿದ ಮದ್ಯದ ದಾಸ್ತಾನನ್ನು ದಿನಾಂಕ 19–08–2026 ರಂದು ಯಶಸ್ವಿಯಾಗಿ ನಾಶಪಡಿಸಲಾಗಿದೆ.

ಶಹಾಪುರ ಉಪ ವಿಭಾಗದ ಅಬಕಾರಿ ಉಪ ಅಧೀಕ್ಷಕರಾದ ಹರ್ಷರಾಜ್ ಬಿ ಅವರ ಸಮ್ಮುಖದಲ್ಲಿ ಪರಿಸರಕ್ಕೆ ಯಾವುದೇ ಹಾನಿಯಾಗದಂತೆ ಸುರಕ್ಷಿತ ಸ್ಥಳದಲ್ಲಿ ಈ ಕಾರ್ಯಾಚರಣೆ ನಡೆಸಲಾಯಿತು. ಒಟ್ಟು 383 ಪೆಟ್ಟಿಗೆಗಳು ಹಾಗೂ 24 ಬಿಡಿ ಬಾಟಲಿಗಳಲ್ಲಿದ್ದ ವಿವಿಧ ಂಡ್‌ನ ಬಿಯರ್ ಹಾಗೂ ಪಾನೀಯಗಳನ್ನು ನಾಶಗೊಳಿಸಲಾಗಿದೆ.

ಬ್ರೀಜರ್ ಎಕ್ಸೋಟಿಕ್ ಜಮೈಕನ್ ಪ್ಯಾಷನ್ ಫ್ಲೇವರ್ (275 ಎಂಎಲ್): 09 ಪೆಟ್ಟಿಗೆ, ಬ್ಲ್ಯಾಕ್ ಫೋರ್ಟ್ ಸೂಪರ್ ಸ್ಟ್ರಾಂಗ್ ಬಿಯರ್ (650 ಎಂಎಲ್): 10 ಪೆಟ್ಟಿಗೆ, ಅಮಸ್ಟೆಲ್ ಬಿರ್ ಗ್ರಾಂಡ್ ಸುಪ್ರೀಮ್ (650 ಎಂಎಲ್): 98 ಪೆಟ್ಟಿಗೆ, 11 ಬಾಟಲಿ, ಅಮಸ್ಟೆಲ್ ಬಿರ್ ಗ್ರಾಂಡ್ ಸುಪ್ರೀಮ್ ಕ್ಯಾನ್ (500 ಎಂಎಲ್): 21 ಪೆಟ್ಟಿಗೆ, ಬುಲೆಟ್ ಸೂಪರ್ ಸ್ಟ್ರಾಂಗ್ ಬಿಯರ್ ಕ್ಯಾನ್ (500 ಎಂಎಲ್): 88 ಪೆಟ್ಟಿಗೆ, ಕಿಂಗ್ ಫಿಷರ್ ಅಲ್ಟ್ರಾ ಮ್ಯಾಕ್ಸ್ ಪ್ರೀಮಿಯಮ್ ಸ್ಟ್ರಾಂಗ್ ಬಿಯರ್ ಕ್ಯಾನ್ (500 ಎಂಎಲ್): 44 ಪೆಟ್ಟಿಗೆ, ಬುಲೆಟ್ ಸೂಪರ್ ಸ್ಟ್ರಾಂಗ್ ಬಿಯರ್ (330 ಎಂಎಲ್): 83 ಪೆಟ್ಟಿಗೆ, ನಾಕ್ ಔಟ್ ಹೈ ಪಂಚ್ ಸ್ಟ್ರಾಂಗ್ ಬಿಯರ್ (300 ಎಂಎಲ್): 30 ಪೆಟ್ಟಿಗೆ ಹಾಗೂ ಕಿಂಗ್ ಫಿಷರ್ ಸ್ಟ್ರಾಂಗ್ ಪ್ರೀಮಿಯಮ್ ಬಿಯರ್ (330 ಎಂಎಲ್): 13 ಬಾಟಲಿ ನಾಶಪಡಿಸಲಾಗಿರುತ್ತದೆ.

ಈ ಸಂದರ್ಭದಲ್ಲಿ ಯಾದಗಿರಿ ತಾಲೂಕು ತಹಸೀಲ್ದಾರ್ ಕಾರ್ಯಾಲಯದ ಶಿರಸ್ತೇದಾರ್ ವೆಂಕಟೇಶ್, ಅಬಕಾರಿ ನಿರೀಕ್ಷಕಿ ರಮಾ, ಮದ್ಯಮಳಿಗೆ ವ್ಯವಸ್ಥಾಪಕ ಹೆಚ್. ಎಸ್. ಪಾಟೀಲ್, ಅಬಕಾರಿ ಪೇದೆ ಮಾರುತಿ ಪವಾರ್ ಸೇರಿದಂತೆ ಸಂಬಂಧಪಟ್ಟ ಮದ್ಯದ ಕಂಪನಿಯ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಡಿ.ದೇವರಾಜ ಅರಸು ರವರು ಸಾಮಾಜಿಕ ಪರಿವರ್ತನೆಯ ಹರಿಕಾರ

### ಕೊಪ್ಪಳ ಶಾಸಕ ಹಿಟ್ನಾಳ ಅಭಿಮತ



ಕೊಪ್ಪಳ, 20–ಸಾಮಾಜಿಕ ಪರಿವರ್ತನೆಯ ಹರಿಕಾರ ಹಾಗೂ ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ರವರು, ರಾಜ್ಯದ ಶೋಷಿತರ, ದೀನದಲಿತರ ಮತ್ತು ಹಿಂದುಳಿದ ವರ್ಗಗಳ ಸಬಲೀಕರಣಕ್ಕೆ ಭದ್ರ ಬುನಾದಿ ಹಾಕಿದ ಧೀಮಂತ ನಾಯಕರಾಗಿದ್ದಾರೆ ಎಂದು ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 20 ರಂದು ನಗರದ ಸಾಹಿತ್ಯ ಭವನದಲ್ಲಿ ಆಯೋಜಿಸಲಾದ ಹಿಂದುಳಿದ ವರ್ಗಗಳ ಧೀಮಂತ ನಾಯಕ, ಸಾಮಾಜಿಕ ಪರಿವರ್ತನೆಯ ಹರಿಕಾರ ಹಾಗೂ ಕರ್ನಾಟಕ ರಾಜ್ಯದ ಮಾಜಿ ಮುನ್ಯಮಂತ್ರಿಗಳಾದ ದಿವಂಗತ ಡಿ.ದೇವರಾಜ ಅರಸು ರವರ 111ನೇ ಜನ್ಮ ದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಸುದೀರ್ಘ ವರ್ಷಗಳ ಕಾಲ ಆಡಳಿತ ನಡೆಸಿದ ಅರಸು ರವರು ಐತಿಹಾಸಿಕ ಸುಧಾರಣೆಗಳನ್ನು ತಂದರು. ಹಿಂದುಳಿದ ವರ್ಗಗಳಿಗೆ ಶೈಕ್ಷಣಿಕ, ಆರ್ಥಿಕ ಹಾಗೂ ರಾಜಕೀಯ ಶಕ್ತಿಯನ್ನು ತುಂಬಿದರು. 'ಉಳುವವನೇ ಭೂಮಿಯ ಒಡೆಯ' ಕಾಯ್ದೆಯ ಮೂಲಕ ಸುಮಾರು 21 ಲಕ್ಷಕ್ಕೂ ಹೆಚ್ಚು ಎಕರೆ ಭೂಮಿಯನ್ನು ಬಡವರಿಗೆ ಹಂಚಿದ ಕೀರ್ತಿ ಅವರದ್ದಾಗಿದೆ. ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವಸತಿ ನಿಲಯಗಳನ್ನು ಪ್ರಾರಂಭಿಸಿದ ಹೆಗ್ಗಳಿಕೆ ಅವರಿಗೆ ಸಲ್ಲುತ್ತದೆ. ರಾಜ್ಯದ ಅನೇಕ ಯುವ ನಾಯಕರನ್ನು ಗುರುತಿಸಿ ಮುಖ್ಯವಾಹಿನಿಗೆ ತರುವಲ್ಲಿ ಅರಸು ರವರು ಪ್ರಮುಖ ಪಾತ್ರ ವಹಿಸಿದ್ದರು ಎಂದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯ ಹಾಗೂ ಅರಸು ರವರ 'ಸರ್ವರಿಗೂ ಸಮಪಾಲು, ಸಮಬಾಳು' ತತ್ವದಂತೆ ನಮ್ಮ ಸರ್ಕಾರವು ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಅವುಗಳ ಲಾಭವನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪಿಸುತ್ತಿದೆ. ಮುಖ್ಯ ಮಂತ್ರಿಗಳಾದ ಡಿ.ಕೆ. ಶಿವಕುಮಾರ ಅವರ ನೇತೃತ್ವದ ನಮ್ಮ ಸರ್ಕಾರವು ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ್ ಬಸ್ ಪಾಸ್ ಸೌಲಭ್ಯವನ್ನು ಜಾರಿಗೊಳಿಸಿದೆ. ಇದಲ್ಲದೇ ಯುವಜನತೆಗಾಗಿ ಜಾರಿಗೆ ತಂದ ಮಹತ್ವಾಕಾಂಕ್ಷಿ ಯೋಜನೆಯಾದ 'ಭಾರತ್ ಜೋಡೋ ಯುವಕ ಸಂಘ'ಕ್ಕೆ 16 ರಿಂದ 35 ವರ್ಷದೊಳಗಿನ ಎಲ್ಲಾ ಯುವಕ–ಯುವತಿಯರು ಕಡ್ಡಾಯವಾಗಿ ಸೇರ್ಪಡೆಗೊಳ್ಳಬೇಕು. ಇದರಿಂದ ಯುವಜನತೆಯಲ್ಲಿ ನಾಯಕತ್ವ ಗುಣಗಳು, ವೃತ್ತಿಪರ ಕೌಶಲ್ಯಗಳು ಹಾಗೂ ವ್ಯಕ್ತಿತ್ವ ವಿಕಸನಗೊಳ್ಳಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಮಾತನಾಡಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಲ್ಲಿ ಸೌಲಭ್ಯ ಪಡೆದ ವಿದ್ಯಾರ್ಥಿಗಳು ಉತ್ತಮ ಅಂಕ ಹಾಗೂ ಸಾಧನೆಯೊಂದಿಗೆ ತಮ್ಮ ವೃತ್ತಿಜೀವನ ರೂಪಿಸಿಕೊಳ್ಳುವ ಮೂಲಕ ಸಾಮಾಜಿಕ ಪರಿವರ್ತನೆಯ ಹರಿಕಾರ ದಿವಂಗತ ಡಿ. ದೇವರಾಜ ಅರಸು ಅವರಿಗೆ ಗೌರವ ಸಲ್ಲಿಸಬೇಕು. ಹಾಸ್ಟೆಲ್ ಸೌಲಭ್ಯ ಪಡೆದ ವಿದ್ಯಾರ್ಥಿಗಳು ಕೇವಲ ಉತ್ತೀರ್ಣರಾಗುವುದಷ್ಟೇ ಅಲ್ಲದೆ ಸರಾಸರಿಗಿಂತ ಹೆಚ್ಚಿನ ಸಾಧನೆ ಮಾಡಬೇಕು. ಸೌಲಭ್ಯಗಳನ್ನು ಬಳಸಿಕೊಂಡು ಸರಿಯಾಗಿ ಓದದೆ ಹೋದರೆ ಅದು ತಮಗೆ, ಕುಟುಂಬಕ್ಕೆ ಹಾಗೂ ಇಲಾಖೆಗೆ ಮಾಡುವ ಅನ್ಯಾಯವಾಗುತ್ತದೆ ಎಂದು ಕಿವಿಮಾತು ಹೇಳಿದರು.

(2ನೇ ಪುಟಕ್ಕೆ)

# 1937 ರಂತೆ ಇಂದಿಗೂ ಒಡೆದು ಆಳುವ ನೀತಿ: ವಂದೇ ಮಾತರಂ ಗೀತೆಗೆ ಕಾಂಗ್ರೆಸ್ ಅಪಮಾನ ಮಾಡಿದೆ ಎಂದ ಅಮಿತ್ ಶಾ



ನವದೆಹಲಿ, 20– ವಂದೇ ಮಾತರಂಗೀತೆಯನ್ನು ಸಂಪೂರ್ಣವಾಗಿ ಹಾಡದಿರಲು ನಿರ್ಣಯ ಕೈಗೊಂಡಿರುವ ಕಾಂಗ್ರೆಸ್ ಪಕ್ಷದ ವಿರುದ್ಧ ಕೇಂದ್ರ ಗೃಹ ಸಚಿವ ಅಮಿತ್ ಶಾ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಕಾಂಗ್ರೆಸ್‌ನ ಈ ನಿರ್ಧಾರವು "ದೇಶವಿರೋಧಿ ಹಾಗೂ ಕೇವಲ ಮತ ಬ್ಯಾಂಕ್‌ಗಾಗಿ ಮಾಡುತ್ತಿರುವ ತುಷ್ಟೀಕರಣ ರಾಜಕೀಯ" ಎಂದು ಅವರು ಕಟುವಾಗಿ ಟೀಕಿಸಿದ್ದಾರೆ. ತಮಿಳುನಾಡಿನ ಚೆಂಗಲ್ಪಟ್ಟುವಿನಲ್ಲಿ ನಡೆದ ದಕ್ಷಿಣ ವಲಯ ಮಂಡಳಿ ಸಭೆಯ ಸಂದರ್ಭದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನಿಲುವನ್ನು ತೀವ್ರವಾಗಿ ಖಂಡಿಸಿದರು.

1937 ರಲ್ಲಿ ವಂದೇ ಮಾತರಂನ ಕೇವಲ ಮೊದಲ ಎರಡು ಚರಣಗಳನ್ನು ಮಾತ್ರ ಹಾಡುವ ನಿರ್ಣಯವನ್ನು ಅಂಗೀಕರಿಸುವ ಮೂಲಕ ಕಾಂಗ್ರೆಸ್ ದೇಶ ವಿಭಜನೆಗೆ ಅಡಿಪಾಯ ಹಾಕಿತ್ತು. ಇಂದು ರಾಹುಲ್ ಗಾಂಧಿ ನೇತೃತ್ವದಲ್ಲಿ ಕಾಂಗ್ರೆಸ್ ಮತ್ತದೇ ತಪ್ಪನ್ನು ಮಾಡುತ್ತಿದೆ ಎಂದು ಶಾ ಕಿಡಿಕಾರಿದ್ದಾರೆ.

ಸ್ವಾತಂತ್ರ್ಯ ಹೋರಾಟಗಾರರಿಗೆ ಅಪಮಾನ: ಸಂಪೂರ್ಣ ಆರು ಚರಣಗಳ ವಂದೇ ಮಾತರಂ ಗೀತೆಯನ್ನು ಹಾಡಲು ನಿರಾಕರಿಸುವ ಮೂಲಕ, ಗೀತೆ ರಚಿಸಿದ ಬಂಕಿಮ್ ಚಂದ್ರ ಚಟರ್ಜಿ ಹಾಗೂ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಾಣ ತ್ಯಾಗ ಮಾಡಿದ ಲಕ್ಷಾಂತರ ವೀರರಿಗೆ ಕಾಂಗ್ರೆಸ್ ಅವಮಾನ ಮಾಡಿದೆ ಎಂದು ಆರೋಪಿಸಿದರು.

ಸಂಸತ್ತಿನ ಕಾನೂನಿಗೆ ಅಗೌರವ: ರಾಷ್ಟ್ರೀಯ ಗೀತೆಗೆ ಅಗೌರವ ತೋರುವುದನ್ನು ತಡೆಯಲು ಮತ್ತು ಅಧಿಕೃತ ಕಾರ್ಯಕ್ರಮಗಳಲ್ಲಿ ಸಂಪೂರ್ಣ ಗೀತೆ ಹಾಡುವುದನ್ನು ಕಡ್ಡಾಯಗೊಳಿಸಲು ಮೋದಿ ಸರ್ಕಾರ ಕಾನೂನು ಚೌಕಟ್ಟು ತಂದಿದ್ದರೂ ಕಾಂಗ್ರೆಸ್ ಅದನ್ನು ಧಿಕ್ಕರಿಸುತ್ತಿದೆ ಎಂದಿದ್ದಾರೆ.

ಕಾಂಗ್ರೆಸ್ ಕಾರ್ಯಕಾರಿ ಸಮಿತಿಯ ನಿರ್ಧಾರ ಎರಡು ಚರಣಗಳಿಗೆ ಸೀಮಿತ: ಕಾಂಗ್ರೆಸ್ ಕಾರ್ಯಕಾರಿ ಸಮಿತಿಯು 1937 ರ ಐತಿಹಾಸಿಕ ನಿಲುವಿಗೆ ಬದ್ಧವಾಗಿ ವಂದೇ ಮಾತರಂನ ಮೊದಲ ಎರಡು ಚರಣಗಳನ್ನು ಮಾತ್ರ ಹಾಡುವ ನಿರ್ಧಾರವನ್ನು ಮುಂದುವರಿಸಲು ನಿರ್ಣಯ ಅಂಗೀಕರಿಸಿದೆ. ದೇಶವು ಒಮ್ಮೆ ವಂದೇ ಮಾತರಂ ಅನ್ನು ವಿಭಜಿಸಿ ಭಾರೀ ಬೆಲೆ ತೆತ್ತಿದೆ. ಇನ್ನು ಮುಂದೆ ದೇಶ ಇಂತಹ ಓಲೈಕೆಯ ರಾಜಕೀಯವನ್ನು ಸಹಿಸುವುದಿಲ್ಲ ಎಂದು ಗೃಹ ಸಚಿವರು ಎಚ್ಚರಿಸಿದ್ದಾರೆ.

ಬಂಕಿಮ್ ಚಂದ್ರರ 'ಆನಂದಮಠ': ಬಂಕಿಮ್ ಚಂದ್ರ ಚಟರ್ಜಿ ಅವರು ರಚಿಸಿದ 'ವಂದೇ ಮಾತರಂ' ಭಾರತೀಯ ಸ್ವಾತಂತ್ರ್ಯ ಚಳವಳಿಗೆ ಮಹಾನ್ ಪ್ರೇರಣೆ–ಯಾಗಿತ್ತು. 1937ರಲ್ಲಿ ಮುಸ್ಲಿಂ ಲೀಗ್‌ನ ಆಕ್ಷೇಪದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಮೊದಲ ಎರಡು ಚರಣಗಳನ್ನು ಮಾತ್ರ ರಾಷ್ಟ್ರೀಯ ಗೀತೆಯಾಗಿ ಅಳವಡಿಸಿಕೊಂಡಿತ್ತು.

ಕಾನೂನು ಸಂರಕ್ಷಣೆ: ಅಧಿಕೃತ ಕಾರ್ಯಕ್ರಮಗಳಲ್ಲಿ ರಾಷ್ಟ್ರಗೀತೆ ಮತ್ತು ರಾಷ್ಟ್ರೀಯ ಗೀತೆಗಳ ಗೌರವ ಕಾಪಾಡಲು ಇತ್ತೀಚೆಗೆ ನಿಯಮಾವಳಿಗಳನ್ನು ಬಿಗಿಗೊಳಿಸಲಾಗಿದ್ದು, ಈ ವಿಚಾರವು ರಾಷ್ಟ್ರಮಟ್ಟದಲ್ಲಿ ಆಡಳಿತ ಮತ್ತು ವಿರೋಧ ಪಕ್ಷಗಳ ನಡುವೆ ಭಾರೀ ರಾಜಕೀಯ ವಾಕ್ಸಮರಕ್ಕೆ ಕಾರಣವಾಗಿದೆ.

# KPSC ಕರ್ಮಕಾಂಡ: ಇಡಿ ತನಿಖೆ ವೇಳೆ ಬಯಲಾಯ್ತು ಮತ್ತಷ್ಟು ಸ್ಫೋಟಕ ವಿಚಾರ



ಬೆಂಗಳೂರು,20– ಕರ್ನಾಟಕ ಲೋಕಸೇವಾ ಆಯೋಗದ ಕರ್ಮಕಾಂಡಗಳು ಒಂದೊಂದೇ ಬಯಲಾಗುತ್ತಿದ್ದು, ಉದ್ಯೋಗಾಕಾಂಕ್ಷಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡಿರುವ ವಿಚಾರಗಳು ತನಿಖೆವೇಳೆ ಗೊತ್ತಾಗಿವೆ. ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಬೃಹತ್ ಅಕ್ರಮ ಹಾಗೂ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಕರ್ನಾಟಕದ 21ಕ್ಕೂ ಹೆಚ್ಚು ಸ್ಥಳಗಳಲ್ಲಿ ಏಕಕಾಲಕ್ಕೆ ಬೃಹತ್ ಶೋಧ ಕಾರ್ಯಾಚರಣೆ ನಡೆಸಿತ್ತು. ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಸೇರಿದಂತೆ ಹಲವರ ಮನೆಗಳ ಮೇಲೆ ದಾಳಿ ನಡೆಸಿದ್ದ ವೇಳೆ ಸ್ಫೋಟಕ ಮಾಹಿತಿಗಳು ಅಧಿಕಾರಿಗಳಿಗೆ ಸಿಕ್ಕಿವೆ.

ಏಕಖಅ ನೇಮಕಾತಿ ಸಂಬಂಧ ಪ್ರಶ್ನೆ ಪತ್ರಿಕೆ ಲೀಕ್ ಮಾಡಿದ್ದಲ್ಲದೆ, ಅಭ್ಯರ್ಥಿಗಳಿಗೆ ರೆಸಾರ್ಟ್ ಒಂದರಲ್ಲಿ ತರಬೇತಿ ನೀಡಲಾಗಿತ್ತು.

ಹೀಗಾಗಿ ಸಿಸಿ ಟಿವಿ ದೃಶ್ಯಗಳನ್ನು ಸಂಗ್ರಹಿಸಲು ರೆಸಾರ್ಟ್ ಮೇಲೆಯೂ ಇಡಿ ದಾಳಿ ನಡೆಸಿತ್ತು. ರೆಸಾರ್ಟ್‌ನಲ್ಲಿ ಪರೀಕ್ಷೆಗೂ ಮೊದಲೇ ಅಭ್ಯರ್ಥಿಗಳಿಗೆ ಪ್ರಶ್ನೆಗಳನ್ನು ತಿಳಿಸಿದ್ದಲ್ಲದೆ, ಪರೀಕ್ಷೆಗೆ ಅಗತ್ಯ ತಯಾರಿಯನ್ನೂ ಮಾಡಲಾಗಿತ್ತು ಎಂಬ ಮಾಹಿತಿ ಹಿನ್ನೆಲೆ ಅಭ್ಯರ್ಥಿಗಳ ಸಮೇತ ಹೋಟೆಲ್ ಮತ್ತು ರೆಸಾರ್ಟ್ ಮೇಲೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ ಎನ್ನಲಾಗಿದೆ.

ಆದರೆ ಯಾವ ಪರೀ–ಕ್ಷೆ ಸಂಬಂಧ ಪ್ರಶ್ನೆಗಳು ಲೀಕ್ ಆಗಿದ್ದವು ಮತ್ತು ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗಿತ್ತು ಎಂಬ ಬಗ್ಗೆ ಇನ್ನೂ ಸ್ಪಷ್ಟ ಉತ್ತರ ಸಿಕ್ಕಿಲ್ಲ.

ಏಕಖಅ ಕಚೇರಿ ಸೇರಿ, ವಿವಿಧೆಡೆ ಏಕಕಾಲಕ್ಕೆ ಇಡಿ ಅಧಿಕಾರಿಗಳು ಶೋಧ ನಡೆಸಿದ್ದರು. ಕೆಪಿಎಸ್ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಪ್ಲಾಟ್, ಏಕಖಅ ಸದಸ್ಯೆ ಶಾಂತಾ ಹೊಸಮನಿ ಮನೆ ಮೇಲೂ ರೇಡ್ ನಡೆದಿತ್ತು. ಮಧ್ಯವರ್ತಿಗಳಿಗೂ ಶಾಕ್ ಕೊಟ್ಟಿದ್ದ ಅಧಿಕಾರಿಗಳು, ಪಶುವೈದ್ಯಾಧಿಕಾರಿ ಹುದ್ದೆಗೆ ಆಯ್ಕೆಯಾದವರ ಮನೆಗಳ ಮೇಲೂ ದಾಳಿ ಮಾಡಿ ಶೋಧ ನಡೆಸಿದ್ದರು. ಪಶುವೈದ್ಯಾಧಿಕಾರಿ ನೇಮಕಾತಿಯಲ್ಲಿ ಅಕ್ರಮ ನಡೆದಿದ್ದು, ಅಭ್ಯರ್ಥಿಗಳಿಂದ 70–80 ಲಕ್ಷ ಲಂಚ ಪಡೆದಿರೋ ಆರೋಪ ಕೇಳಿಬಂದಿತ್ತು. ಮಧ್ಯವರ್ತಿಗಳ ಲಂಚದ ಬೇಡಿಕೆ ಕುರಿತು 4 ಈಖಖ ಕೂಡ ದಾಖಲಾಗಿತ್ತು. ಈ ಸಂಬಂಧ ಇಡಿ ನಡೆಸಿದ್ದ ದಾಳಿಯ ವೇಳೆ ಮತ್ತಷ್ಟು ಸ್ಫೋಟಕ ವಿಚಾರಗಳು ಬಯಲಾಗಿದ್ದು, ಪ್ರಕರಣದ ತನಿಖೆ ಮುಂದುವರಿದಿದೆ.

# ದಕ್ಷಿಣ ವಲಯ ಮಂಡಳಿ ಸಭೆ: ತಮಿಳುನಾಡು ಸಿಎಂ ವಿಜಯ್ ಮುಂದೆಯೇ ಕಾವೇರಿ ವಿಚಾರ ಪ್ರಸ್ತಾಪಿಸಿದ ಮುಖ್ಯಮಂತ್ರಿ ಡಿಕೆ ಶಿವಕುಮಾರ್



ಮಹಾಬಲಿಪುರಂ,20– "ಕರ್ನಾಟಕ ಬಲಿಷ್ಠವಾದಾಗ ದಕ್ಷಿಣ ಭಾರತ ಮತ್ತಷ್ಟು ಬಲಿಷ್ಠವಾಗುತ್ತದೆ. ದಕ್ಷಿಣ ಭಾರತ ಬಲಿಷ್ಠವಾದರೆ ಭಾರತವೂ ಬಲಿಷ್ಠವಾಗುತ್ತದೆ. ದೇಶದ ಅಭಿವೃದ್ಧಿಗೆ ಶೇ.33ರಷ್ಟು ಜಿಡಿಪಿ ಕೊಡುಗೆ ನೀಡುವ ದಕ್ಷಿಣ ಭಾರತಕ್ಕೆ ಅನುದಾನ ಮತ್ತು ಸಂಪನ್ಮೂಲ ಹಂಚಿಕೆಯಲ್ಲಿ ಸೂಕ್ತ ನ್ಯಾಯ ಸಿಗಬೇಕು" ಎಂದು ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರತಿಪಾದಿಸಿದ್ದಾರೆ. ತಮಿಳುನಾಡಿನ ಮಹಾಬಲಿಪುರಂನಲ್ಲಿ ಗುರುವಾರ ನಡೆದ 31ನೇ ದಕ್ಷಿಣ ವಲಯ ಮಂಡಳಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಇನ್ನು ಈ ಸಭೆಯಲ್ಲಿ ತಮಿಳುನಾಡು ಸಿಎಂ ವಿಜಯ್ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಕೂಡ ಭಾಗವಹಿಸಿದರು. ಅವರ ಮುಂದೆಯೇ ನೀರಿನ ಬಗ್ಗೆ ಹಾಗೂ ಕರ್ನಾಟಕದ ಪರವಾಗಿ ಮಾತನಾಡಿದ್ದಾರೆ.

ಈ ಸಭೆಯಲ್ಲಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಹಲವು ಪ್ರಮುಖ ಅಂಶಗಳನ್ನು ಎತ್ತಿದ್ದಾರೆ. ದಕ್ಷಿಣದ 5 ರಾಜ್ಯಗಳು ದೇಶದ ಒಟ್ಟು ಜಿಡಿಪಿಗೆ ಶೇ.33ರಷ್ಟು ಕೊಡುಗೆ ನೀಡುತ್ತಿದ್ದು, ದೇಶದ ಆರ್ಥಿಕತೆಯ ಎಂಜಿನ್‌ನಂತೆ ಕೆಲಸ ಮಾಡುತ್ತಿವೆ. ಭಾರತದ ಸಾಫ್ಟ್‌ವೇರ್ ರಫ್ತಿನಲ್ಲಿ ಕರ್ನಾಟಕದ್ದು ಶೇ. 42 ರಷ್ಟು ಪಾಲು. ದೇಶದ ಜಿಡಿಪಿಗೆ ಕರ್ನಾಟಕ ಶೇ. 9 ರಷ್ಟು ಕೊಡುಗೆ ನೀಡುತ್ತದೆ. ಆದ–ರೆ, 15ನೇ ಹಣಕಾಸು ಆಯೋಗದಲ್ಲಿ ಕರ್ನಾಟಕದ ಪಾಲು ಶೇ. 4.7 ರಿಂದ ಶೇ. 3.6 ಕ್ಕೆ ಇಳಿಕೆಯಾಗಿದ್ದು, 6 ವರ್ಷಗಳಲ್ಲಿ 65,000 ಕೋಟಿ ರೂ. ನಷ್ಟವಾಗಿದೆ. ಶಿಫಾರಸು ಮಾಡಿದ್ದ 11,495 ಕೋಟಿ ರೂ. ವಿಶೇಷ ಅನುದಾನವೂ ಬಂದಿಲ್ಲ ಎಂದು ಹೇಳಿದ್ದಾರೆ.

ಲೋಕಸಭಾ ಕ್ಷೇತ್ರಗಳ ಪುನರ್ವಿಂಗಡಣೆ ಸಮಯದಲ್ಲಿ ದಕ್ಷಿಣ ಭಾರತದ ರಾಜಕೀಯ ಪ್ರಾತಿನಿಧ್ಯ ಮತ್ತು ಧ್ವನಿ ಕಡಿಮೆಯಾಗಬಾರದು. ದೇಶದ ಕರೆಯನ್ನು ಸ್ವೀಕರಿಸಿ ಜನಸಂಖ್ಯೆಯನ್ನು ಶಿಸ್ತುಬದ್ಧವಾಗಿ ನಿಯಂತ್ರಿಸಿದ್ದೇ ದಕ್ಷಿಣ ಭಾರತದ ಧ್ವನಿ ದುರ್ಬಲಗೊಳ್ಳಲು ಕಾರಣವಾಗಬಾರದು. 1971ರ ಜನಸಂಖ್ಯಾ ಆಧಾರವನ್ನೇ ಗೌರವಿಸಬೇಕು. ಮುಂದಿನ ಜನಗಣತಿವರೆಗೆ ಕಾಯದೆ, ಹಾಲಿ ಇರುವ ಲೋಕಸಭಾ ಸ್ಥಾನಗಳ ಸಂಖ್ಯೆಯಲ್ಲೇ ಮಹಿಳಾ ಮೀಸಲಾತಿಯನ್ನು ತಕ್ಷಣವೇ ಜಾರಿಗೆ ತರಬೇಕು ಎಂದು ಸಭೆಯಲ್ಲಿ ನಿರ್ಣಯ ಕೈಗೊಳ್ಳಲು ಒತ್ತಾಯಿಸಿದರು.

"ನೀರು ನಮ್ಮನ್ನು ಒಗ್ಗೂಡಿಸಬೇಕು, ವಿಭಜಿಸಬಾರದು" ಎಂದ ಸಿಎಂ, ಕರ್ನಾಟಕವು ಅಂತಾರಾಜ್ಯ ಜಲ ವಿವಾದಗಳನ್ನು ಸಹಕಾರ ಮತ್ತು ಸಮಾನತೆಯ ಆಧಾರದ ಮೇಲೆ ಬಗೆಹರಿಸಿಕೊಳ್ಳುವ 'ಕರ್ನಾಟಕ ಮಾದರಿ'ಯನ್ನು ಅನುಸರಿಸುತ್ತಿದೆ ಎಂದರು. ರಾಜ್ಯಗಳ ಖನಿಜ ತೆರಿಗೆ ಹಕ್ಕನ್ನು ಕಸಿಯುವ ಒಟಟಿಢ & ಒಟಿ–ಜಡಿಚಿಟಂಥಿಣ, 2026 ಕಾಯ್ದೆಯನ್ನು ಕೇಂದ್ರ ಸರ್ಕಾರ ಮರುಪರಿಶೀಲಿಸಬೇಕು. ಮಾದಕ ವಸ್ತುಗಳ ಕಳ್ಳಸಾಗಣೆ ತಡೆಯಲು ಕಠಿಣ ಕಾನೂನು ಬೆಂಬಲ ನೀಡಬೇಕೆಂದು ಮನವಿ ಮಾಡಿದರು.

ವಿಜಯ್– ಅಮಿತ್ ಶಾ ಮುಂದೆ ನೀರಿನ ಬಗ್ಗೆ ಪ್ರಸ್ತಾಪಿಸಿದ ಸಿಎಂ ಡಿಕೆಶಿ: ಕಾವೇರಿ, ಕೃಷ್ಣಾ, ತುಂಗಭದ್ರಾ, ಪೆನ್ನಾರ್ ಮತ್ತು ಪಾಲಾರ್ ನದಿಗಳು ದಕ್ಷಿಣ ಪರ್ಯಾಯ ದ್ವೀಪದ ಜೀವನಾಡಿಗಳಾಗಿವೆ. ನದಿಗಳು ಯಾವುದೇ ರಾಜಕೀಯ ಗಡಿಗಳನ್ನು ಗುರುತಿಸುವುದಿಲ್ಲ.

ನೀರು ರಾಜ್ಯಗಳನ್ನು ಒಗ್ಗೂಡಿಸಬೇಕೇ ಹೊರತು ವಿಭಜಿಸಬಾರದು. ಜೂನ್ 25 ರಂದು ಕೇಂದ್ರ ಜಲಶಕ್ತಿ ಸಚಿವರ ಉಪಸ್ಥಿತಿಯಲ್ಲಿ ಆಂಧ್ರಪ್ರದೇಶ ಹಾಗೂ ತೆಲಂಗಾಣದ ಮುಖ್ಯಮಂತ್ರಿಗಳ ಜೊತೆ ನಡೆಸಿದ ಜಂಟಿ ಸಭೆಯನ್ನು ಉದಾಹರಿಸಿದ ಕರ್ನಾಟಕ, "ನಾವು ಸ್ಪರ್ಧಿಗಳಾಗಿ ಅಲ್ಲ, ಪಾಲುದಾರರಾಗಿ ಕುಳಿತು ಚರ್ಚಿಸಿದ್ದೇವೆ" ಎಂದು ಪ್ರತಿಪಾದಿಸಿತು. ಜಲ ಹಂಚಿಕೆ ವಿಷಯದಲ್ಲಿ ಸಮಾನತೆ, ಪಾರದರ್ಶಕತೆ ಮತ್ತು ಸಹಕಾರ ಎಂಬ 3 ಸೂತ್ರಗಳನ್ನು ಕರ್ನಾಟಕ ಅನುಸರಿಸುತ್ತದೆ.

ನೆರೆ ರಾಜ್ಯಗಳ ಹಕ್ಕುಗಳನ್ನು ಗೌರವಿಸುವಂತೆಯೇ, ನ್ಯಾಯಮಂಡಳಿಗಳ ತೀರ್ಪಿನಂತೆ ಕರ್ನಾಟಕಕ್ಕೆ ದೊರೆಯಬೇಕಾದ ಕಾನೂನುಬದ್ಧ ನೀರಿನ ಪಾಲು ಹಾಗೂ ನೀರಾವರಿ ಯೋಜನೆಗಳ ಸಮಯೋಚಿತ ಅನುಷ್ಠಾನಕ್ಕೆ ಸಹಕಾರ ಕೋರಲಾಯಿತು. ಕೃಷ್ಣಾ ನದಿ ವಿವಾದ, ಮೇಲ್ದಂಡೆ ಭದ್ರಾ ಯೋಜನೆ ಹಾಗೂ ನದಿಗಳ ಜೋಡಣೆ ವಿಷಯದಲ್ಲಿ ಕರ್ನಾಟಕದ ನಿಲುವನ್ನು ಸ್ಪಷ್ಟಪಡಿಸಲಾಯಿತು.

# ಪೋಷಕರಿಗೆ ದೂರು ನೀಡಿದ್ದಕ್ಕೆ ಶಿಕ್ಷಕಿಯನ್ನು 27 ಬಾರಿ ಇರಿದು ಕೊಂದ 10ನೇ ತರಗತಿ ವಿದ್ಯಾರ್ಥಿಗಳು





ನಲ್ಗೊಂಡ.20– ಕೇವಲ ಪೋಷಕರಿಗೆ ದೂರು ಕೊಟ್ಟಿದ್ದಕ್ಕೆ 10ನೇ ತರಗತಿ ವಿದ್ಯಾರ್ಥಿಗಳು ಶಿಕ್ಷಕಿಯನ್ನು ಹತ್ಯೆಮಾಡಿರುವ ಆಘಾತಕಾರಿ ಘಟನೆ ತೆಲಂಗಾಣದ ನಲ್ಗೊಂಡ ಜಿಲ್ಲೆಯ ಕೊಂಡಮಲ್ಲೇಪಲ್ಲಿಯಲ್ಲಿಯ ಖಾಸಗಿ ಶಾಲೆಯಲ್ಲಿ ನಡೆದಿದೆ. ವಿದ್ಯಾರ್ಥಿಗಳು ಶಾಲೆಯ ಮುಖ್ಯೋಪಾಧ್ಯಾಯರನ್ನೇ ಹತ್ಯೆ ಮಾಡಿದ್ದಾರೆ.

ದುಬಾರಿ ಜೀವನಶೈಲಿ ಮತ್ತು ದುಂದುವೆಚ್ಚವನ್ನು ಪ್ರಶ್ನಿಸಿ ಪೋಷಕರಿಗೆ ದೂರು ನೀಡುವುದಾಗಿ ಎಚ್ಚರಿಸಿದ್ದಕ್ಕೆ, ಅದೇ ಶಾಲೆಯ 10ನೇ ತರಗತಿಯ ಇಬ್ಬರು ಅಪ್ರಾಪ್ತ ವಿದ್ಯಾರ್ಥಿಗಳು ಶಿಕ್ಷಕಿಯ ಮನೆಗೆ ನುಗ್ಗಿ ಬರೋಬ್ಬರಿ 27 ಬಾರಿ ಚಾಕುವಿನಿಂದ ಇರಿದು ಭೀಕರವಾಗಿ ಹತ್ಯೆ ಮಾಡಿದ್ದಾರೆ. ಹತ್ಯೆಯ ನಂತರ ಮನೆಯಲ್ಲಿದ್ದ ನಗದು ಮತ್ತು ಮೊಬೈಲ್ ದೋಚಿಕೊಂಡು ಪರಾರಿಯಾಗಿದ್ದ ಇಬ್ಬರೂ ಬಾಲಕರನ್ನು ಪೊಲೀಸರು ಬಂಧಿಸಿದ್ದಾರೆ.

ದುಬಾರಿ ಶೋಕಿ ಮತ್ತು ಯೂಟ್ಯೂಬ್ ಮಾರ್ಗ: ಒಂದೇ ಹಾಸ್ಟೆಲ್ ಕೊಠಡಿಯಲ್ಲಿದ್ದ ಇಬ್ಬರು ವಿದ್ಯಾರ್ಥಿಗಳು ಐಫೋನ್, ಬೈಕ್ ಮತ್ತು ಐಷಾರಾಮಿ ಜೀವನದ ಆಸೆಗೆ ಬಿದ್ದಿದ್ದರು. ಸುಲಭವಾಗಿ ಹಣ ಸಂಪಾದಿಸಲು ಯೂಟ್ಯೂಬ್ ಮತ್ತು ಸೋಷಿಯಲ್ ಮೀಡಿಯಾದಲ್ಲಿ ಮಾರ್ಗಗಳನ್ನು ಹುಡುಕುತ್ತಿದ್ದರು.

ಹಾಸ್ಟೆಲ್ ತಪಾಸಣೆ ವೇಳೆ ಬ್ಯಾಗ್‌ನಲ್ಲಿ ಅಕ್ರಮವಾಗಿ ಇಟ್ಟುಕೊಂಡಿದ್ದ ಹಣ ಮತ್ತು ಮೊಬೈಲ್ ಸಿಕ್ಕಿಬಿದ್ದಾಗ ರೂಪಾ ರೆಡ್ಡಿ ಅವರು ಇಬ್ಬರನ್ನೂ ತೀವ್ರವಾಗಿ ತರಾಟೆ–ಗೆ ತೆಗೆದುಕೊಂಡಿದ್ದರು. ಪೋಷಕರಿಗೆ ತಿಳಿಸುವುದಾಗಿ ಎಚ್ಚರಿಕೆ ನೀಡಿದ್ದೇ ಕೊಲೆ ಸಂಚಿಗೆ ಕಾರಣವಾಯಿತು.

ಒಂದು ವಾರ ಮುಂಚಿತವಾಗಿಯೇ ಪ್ರಾಂಶುಪಾಲೆಯ ಮನೆಯ ಸುತ್ತ ಕಣ್ಗಾವಲಿರಿಸಿದ್ದ ಬಾಲಕರು, ಚಾಕು, ಮುಖವಾಡ ಮತ್ತು ಕೈಗವಸುಗಳನ್ನು ಖರೀದಿಸಿ ಹಿಂಬಾಗಿಲಿನಿಂದ ಮನೆಗೆ ನುಗ್ಗಿದ್ದರು. ರೂಪಾ ರೆಡ್ಡಿ ಅವರ ಫೋನ್ ಸ್ವಿಚ್ ಆಫ್ ಆಗುವ ಮುನ್ನ ಅವರು ತಮ್ಮ ಚಿಕ್ಕಮ್ಮನೊಂದಿಗೆ ಮಾತನಾಡುತ್ತಿದ್ದರು. ಆಗ ಅವರು ಆಡಿದ ಕೊನೆಯ ಮಾತು ಬಾಬು ಎಂದಾಗಿತ್ತು. ಶಾಲೆಯಲ್ಲಿ ವಿದ್ಯಾರ್ಥಿಗಳನ್ನು ಪ್ರೀತಿಯಿಂದ ಬಾಬು ಎಂದು ಕರೆಯುತ್ತಿದ್ದ ಕಾರಣ, ಪೊಲೀಸರು ತಮ್ಮ ತನಿಖೆಯನ್ನು ಶಾಲಾ ವಿದ್ಯಾರ್ಥಿಗಳ ಮೇಲೆಯೇ ಕೇಂದ್ರೀಕರಿಸಿದರು.

ಡೊನಿಯಾಲ ಎಕ್ಸ್–ರೋಡ್ ಬಳಿ ಬೈಕ್‌ನಲ್ಲಿ ಸಂಚರಿಸುತ್ತಿದ್ದ ಇಬ್ಬರು ಬಾಲಕರನ್ನು ತಡೆದು ತಪಾಸಣೆ ನಡೆಸಿದಾಗ, ಅವರ ಬಳಿಯಿದ್ದ ನೋಟುಗಳ ಮೇಲೆ ರಕ್ತದ ಕಲೆಗಳು ಪತ್ತೆಯಾದವು. ಪೊಲೀಸರು ಆರೋಪಿಗಳಿಂದ 1.54 ಲಕ್ಷ ರೂ. ನಗದು, ರಕ್ತಸಿಕ್ತ ಚಾಕು, ಕೈಗವಸುಗಳು ಹಾಗೂ ಕದ್ದ ಹಣದಲ್ಲಿ 60 ಸಾವಿರ ರೂ. ನೀಡಿ ಖರೀದಿಸಿದ್ದ ಹೊಸ ಐಫೋನ್ ಅನ್ನು ವಶಪಡಿಸಿಕೊಂಡಿದ್ದಾರೆ.

ನಲ್ಗೊಂಡ ಎಸ್‌ಪಿ ಶರತ್ ಚಂದ್ರ ಪವಾರ್ ನೇತೃತ್ವದಲ್ಲಿ 5 ವಿಶೇಷ ತನಿಖಾ ತಂಡಗಳು 30 ಕಿ.ಮೀ ವ್ಯಾಪ್ತಿಯ 70ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾಗಳನ್ನು ಪರಿಶೀಲಿಸಿ 80ಕ್ಕೂ ಹೆಚ್ಚು ಜನರನ್ನು ವಿಚಾರಣೆ ನಡೆಸಿದ ನಂತರ ಈ ಜಾಲ ಬಯಲಾಯಿತು.

ಹೆಚ್ಚುತ್ತಿರುವ ಅಪ್ರಾಪ್ತರ ಕ್ರೈಂ: ಹದಿಹರೆಯದ ಶಾಲಾ ಮಕ್ಕಳಲ್ಲಿ ಮೊಬೈಲ್ ಮತ್ತು ದುಬಾರಿ ವಸ್ತುಗಳಿಗಾಗಿ ಹಿಂಸಾತ್ಮಕ ದಾರಿ ತುಳಿಯುವ ಪ್ರವೃತ್ತಿ ಹೆಚ್ಚುತ್ತಿರುವುದು ಪೋಷಕರು ಹಾಗೂ ಶಿಕ್ಷಣ ತಜ್ಞರಲ್ಲಿ ತೀವ್ರ ಕಳವಳ ಮೂಡಿಸಿದೆ.

# ಡಿ.ದೇವರಾಜ ಅರಸು ರವರ 111ನೇ ಜನ್ಮ ದಿನಾಚರಣೆ

(ಮೊದಲನೇ ಪುಟದಿಂದ)

ರಾಜ್ಯ ಸರ್ಕಾರವು ಜಾರಿಗೆ ತಂದ 'ಭಾರತ್ ಜೋಡೋ ಯುವಕ ಸಂಘ'ಕ್ಕೆ 16 ರಿಂದ 35 ವರ್ಷದೊಳಗಿನ ಎಲ್ಲಾ ಯುವಕ–ಯುವತಿಯರು ಕಡ್ಡಾಯವಾಗಿ ಸೇರ್ಪಡೆಗೊಳ್ಳಬೇಕು. ಕೇವಲ 10 ರೂಪಾಯಿ ನೋಂದಣಿ ಶುಲ್ಕ ಹಾಗೂ ಆಧಾರ್ ಕಾರ್ಡ್ ವಿವರಗಳನ್ನು ನೀಡಿ ಮೊಬೈಲ್ ಮೂಲಕ ಸುಲಭವಾಗಿ ನೋಂದಣಿ ಮಾಡಿಕೊಳ್ಳಬಹುದು. ಹಾಸ್ಟೆಲ್ ವಾರ್ಡನ್‌ಗಳ ಮೂಲಕ ಎಲ್ಲರೂ ತಪ್ಪದೇ ನೋಂದಣಿ ಮಾಡಿಸಿಕೊಳ್ಳುವಂತೆ ಮತ್ತು ತಮ್ಮ ಸ್ನೇಹಿತರು ಹಾಗೂ ಕುಟುಂಬದ ಯುವಕರನ್ನೂ ಪ್ರೇರೇಪಿಸುವಂತೆ ತಿಳಿಸಿದರು.

ಯಲಬುರ್ಗಾ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಶಂಕ್ರಯ್ಯ ಅಬ್ಬಿಗೇರಿಮಠ ಅವರು ಡಿ. ದೇವರಾಜ ಅರಸು ರವರ ಕುರಿತು ವಿಶೇಷ ಉಪನ್ಯಾಸ ನೀಡಿ, ರಾಜ್ಯದ ದೀನದಲಿತರು, ಹಿಂದುಳಿದ ವರ್ಗಗಳು ಹಾಗೂ ಶೋಷಿತರ ಬದುಕಿನಲ್ಲಿ ಕ್ರಾಂತಿಕಾರಿ ಬದಲಾವಣೆ ತಂದ ಸಾಮಾಜಿಕ ನ್ಯಾಯದ ಹರಿಕಾರ, ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರ ಚಿಂತನೆಗಳು ಸದಾ ಪ್ರಸ್ತುತವಾಗಿವೆ. ಅವರು 1974ರಲ್ಲಿ ಜಾರಿಗೆ ತಂದ ಭೂಸುಧಾರಣಾ ಕಾಯ್ದೆಯ ಮೂಲಕ 'ಉಳುವವನೇ ಭೂಮಿಯ ಒಡೆಯ' ಪರಿಕಲ್ಪನೆಯನ್ನು ಸಾಕಾರಗೊಳಿಸಿ ಲಕ್ಷಾಂತರ ಕೃಷಿ ಕಾರ್ಮಿಕರು ಹಾಗೂ ಗೇಣಿದಾರರಿಗೆ ಭೂಮಿಯ ಹಕ್ಕು ಕೊಡಿಸಿದ್ದರು. ರಾಜ್ಯದಲ್ಲಿ ಜೀತ ಪದ್ಧತಿ ನಿಷೇಧ, ಮಲ ಹೊರುವ ಅನಿಷ್ಟ ಪದ್ಧತಿ ರದ್ದತಿ, ಬಡವರ ಸಾಲಮನ್ನಾ (ಋಣಮುಕ್ತ ಕಾಯ್ದೆ) ಹಾಗೂ ಬಡ ಕುಟುಂಬಗಳಿಗೆ 'ಭಾಗ್ಯಜ್ಯೋತಿ' ಯೋಜನೆಯಡಿ ಉಚಿತ ವಿದ್ಯುತ್ ನೀಡುವ ಐತಿಹಾಸಿಕ ಕಾರ್ಯಕ್ರಮಗಳನ್ನು ಅರಸು ರವರು ಜಾರಿಗೆ ತಂದರು ಎಂದರು.

ಕಾರ್ಯಕ್ರಮದಲ್ಲಿ ಕೊಪ್ಪಳ ನಗರಸಭೆಯ ಮಾಜಿ ಅಧ್ಯಕ್ಷರಾದ ಅಮಜದ್ ಪಟೇಲ್, ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಎಸ್.ಎಂ ಕಾಂಬ್ಳೆ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜಪ್ಪ ಸೊಗಲದ, ತಾ.ಪಂ ಇಓ ದುಂಡಪ್ಪ ತುರಾದಿ, ಬಿಇಓ ಹೊರಪೇಟಿ, ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಕೆ.ಹೆಚ್ ಭೋವಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕಾಧಿಕಾರಿಗಳಾದ ನಾಗರತ್ನ ಹಾಗೂ ಶಿವಶಂಕರ ಕರಡಕಲ್, ತಾಲ್ಲೂಕು ವಿಸ್ತರಣಾಧಿಕಾರಿ ಅಮರೇಶ ಹುಬ್ಬಳ್ಳಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಕಛೇರಿಯ ಮೇಲ್ವಿಚಾರಕಿ ಸುಧಾ ಮುದುಕಣ್ಣನವರ್, ಪತ್ರಾಂಕಿತ ವ್ಯವಸ್ಥಾಪಕಿ ಉಷಾ ಮುಜುಮದಾರ, ಲೆಕ್ಕ ಅಧೀಕ್ಷಕ ರೋಹಿತ್ ಪಾಟೀಲ್, ಪ್ರ.ದ.ಸ ಮನೋಜ್ ಕುಮಾರ್ ಮತ್ತು ವಿರೂಪನಗೌಡ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ಹಾಸ್ಟೆಲ್ ವಾರ್ಡನ್‌ಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 750 ಕಿ.ಮೀ ವಾಯುಪ್ರದೇಶ ಮುಚ್ಚಿದ ಪಾಕ್: ಫತಾಹ್ ಸರಣಿಯ ಹೊಸ ಕ್ಷಿಪಣಿ ಪರೀಕ್ಷೆಗೆ ಸಜ್ಜಾಯಿತೇ ಪಾಕಿಸ್ತಾನ



ಇಸ್ಲಾಮಾಬಾದ್, 20– ವಾಯುಪ್ರದೇಶ ಮುಚ್ಚಲು ಪಾಕಿಸ್ತಾನಯಾವುದೇ ಅಧಿಕೃತ ಕಾರಣ ನೀಡಿಲ್ಲವಾದರೂ, ಇಷ್ಟು ವಿಶಾಲ ವ್ಯಾಪ್ತಿಯ ನಿರ್ಬಂಧವು ದೇಶವು ತನ್ನ ಮುಂದುವರಿದ 'ಫತಾಹ್' ಸರಣಿಯ ದೀರ್ಘ–ಶ್ರೇಣಿಯ ಕ್ಷಿಪಣಿ ಅಥವಾ ಗೈಡೆಡ್ ರಾಕೆಟ್ ವ್ಯವಸ್ಥೆಯನ್ನು ಪರೀಕ್ಷಿಸಲು ಸಜ್ಜಾಗಿದೆ ಎಂಬ ಬಲವಾದ ಅನುಮಾನಗಳಿಗೆ ಕಾರಣವಾಗಿದೆ.

750 ಕಿ.ಮೀ ವಾಯುಪ್ರದೇಶ ನಿರ್ಬಂಧವೇಕೆ ಮುಖ್ಯ? ಸಾಮಾನ್ಯವಾಗಿ ಸಣ್ಣ ಮಿಲಿಟರಿ ತಾಲೀಮುಗಳಿಗೆ ಇಷ್ಟು ದೊಡ್ಡ ಪ್ರಮಾಣದ ವಾಯುಪ್ರದೇಶವನ್ನು ಮುಚ್ಚುವುದಿಲ್ಲ. 750ಕಿ.ಮೀ ನಷ್ಟು ವಿಸ್ತಾರವಾದ ಪ್ರದೇಶವನ್ನು ನಿರ್ಬಂಧಿಸಿರುವುದು ದೀರ್ಘ ಶ್ರೇಣಿಯ ಕ್ಷಿಪಣಿ ಪರೀಕ್ಷೆಯ ಸೂಚನೆಯಾಗಿದೆ.

ಫತಾಹ್ ಸರಣಿಯ ಸಾಮರ್ಥ್ಯ: ಪಾಕಿಸ್ತಾನವು ಈಗಾಗಲೇ ಫತಾಹ್–1 ಮತ್ತು ಫತಾಹ್–2 ಕ್ಷಿಪಣಿ ವ್ಯವಸ್ಥೆಯನ್ನು ಹೊಂದಿದೆ. ಪ್ರಸ್ತುತ ಹೊಸದಾದ ಫತಾಹ್–3 ಅಥವಾ ಫತಾಹ್–4 ಆವೃತ್ತಿಯ ಪರೀಕ್ಷಾರ್ಥ ಉಡಾವಣೆ ನಡೆಯುವ ಸಾಧ್ಯತೆಯಿದೆ ಎಂದು ರಕ್ಷಣಾ ವಿಶ್ಲೇಷಕರು ಅಂದಾಜಿಸಿದ್ದಾರೆ.

ಯುದ್ಧ ವಿಮಾನಗಳ ಮೇಲಿನ ಅವಲಂಬನೆ ಕಡಿಮೆ ಮಾಡಿ, ನೆಲದಿಂದಲೇ ನಿಖರವಾಗಿ ಗುರಿ ತಲುಪುವ ಸಾಂಪ್ರದಾಯಿಕ ಕ್ಷಿಪಣಿ ಬಲವನ್ನು ಹೆಚ್ಚಿಸಿಕೊಳ್ಳಲು ಪಾಕ್ ಸೇನೆಯು ಈ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುತ್ತಿದೆ.

ಅಮೆರಿಕ ರಾಯಭಾರಿಯ ಕಾಶ್ಮೀರ ಹೇಳಿಕೆ ಮತ್ತು ಪಾಕ್ ಆಕ್ರೋಶ ಕಾಶ್ಮೀರ ಭಾರತದ ಪ್ರಮುಖ ಭಾಗ: ಭಾರತ–ಕ್ಕೆ ಅಮೆರಿಕದ ರಾಯಭಾರಿಯಾಗಿರುವ ಸೆರ್ಗಿಯೊ ಗೋರ್ ಅವರು ಶ್ರೀನಗರಕ್ಕೆ ಭೇಟಿ ನೀಡಿ, ಜಮ್ಮು–ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರನ್ನು ಭೇಟಿಯಾದ ಸಂದರ್ಭದಲ್ಲಿ, "ಕಾಶ್ಮೀರ ಭಾರತದ ಪ್ರಮುಖ ಮತ್ತು ಸುಂದರ ಭಾಗ" ಎಂದು ಹೇಳಿಕೆ ನೀಡಿದ್ದರು.

ಪಾಕಿಸ್ತಾನದಿಂದ ಸಮನ್ಸ್: ಈ ಹೇಳಿಕೆಯಿಂದ ತೀವ್ರ ಕಂಗಾಲಾದ ಪಾಕಿಸ್ತಾನದ ವಿದೇಶಾಂಗ ಸಚಿವಾಲಯವು ಇಸ್ಲಾಮಾಬಾದ್‌ನಲ್ಲಿರುವ ಯುಎಸ್ ರಾಯಭಾರ ಕಚೇರಿಯ ಅಧಿಕಾರಿಗಳಿಗೆ ಸಮನ್ಸ್ ಜಾರಿ ಮಾಡಿ ತೀವ್ರ ಪ್ರತಿಭಟನೆ ದಾಖಲಿಸಿದೆ. ಅಮೆರಿಕದ ಈ ರಾಜತಾಂತ್ರಿಕ ಹೇಳಿಕೆಯ ಬೆನ್ನಲ್ಲೇ ಪಾಕಿಸ್ತಾನ ಬೃಹತ್ ವಾಯುಪ್ರದೇಶ ನಿರ್ಬಂಧಿಸಿರುವುದು ಜಾಗತಿಕ ಮಟ್ಟದಲ್ಲಿ ತನ್ನ ಸೇನಾ ಶಕ್ತಿ ಪ್ರದರ್ಶಿಸುವ ತಂತ್ರವೇ ಎಂಬ ಚರ್ಚೆ ಹುಟ್ಟುಹಾಕಿದೆ.

ಫತಾಹ್ ಕ್ಷಿಪಣಿಯ ವಿಶೇಷತೆ: ಪಾಕಿಸ್ತಾನದ ಫತಾಹ್ ವ್ಯವಸ್ಥೆಯು ಬಹು–ಉಡಾವಣಾ ರಾಕೆಟ್ ವ್ಯವಸ್ಥೆಯಾಗಿದ್ದು ಶತ್ರುಪಡೆಯ ರಕ್ಷಣಾ ಕವಚಗಳನ್ನು ತಪ್ಪಿಸಿ ನಿಖರ ಗುರಿಯನ್ನು ಧ್ವಂಸ ಮಾಡುವ ಸಾಮರ್ಥ್ಯ ಹೊಂದಿದೆ ಎಂದು ಹೇಳಿಕೊಳ್ಳಲಾಗಿದೆ.

ಭಾರತೀಯ ಸೇನೆಯ ಹದ್ದಿನ ಕಣ್ಣು: ಪಾಕಿಸ್ತಾನದ ಗಡಿ ಭಾಗ ಹಾಗೂ ವಾಯುಪ್ರದೇಶದಲ್ಲಿ ನಡೆಯುತ್ತಿರುವ ಪ್ರತಿಯೊಂದು ಚಲನವಲನಗಳು ಮತ್ತು ಸಂಭಾವ್ಯ ಕ್ಷಿಪಣಿ ಪರೀಕ್ಷೆಗಳ ಮೇಲೆ ಭಾರತೀಯ ವಾಯುಪಡೆ ಹಾಗೂ ಗುಪ್ತಚರ ರೇಡಾರ್‌ಗಳು ತೀವ್ರ ನಿಗಾ ಇರಿಸಿವೆ.

# `A DATE' ಚಿತ್ರದ ಬ್ಯಾಡ್ ಗೈ ಆಂಥಮ್ ಸಾಂಗ್ ಬಿಡುಗಡೆ!



ಒಂದಕ್ಕಿಂತ ಒಂದು ವಿಭಿನ್ನವಾದ ಪ್ರಯೋಗಶೀಲ ಪ್ರಯತ್ನಗಳಲ್ಲಿಯೇ ಚಿತ್ರರಂಗದ ಜೀವಂತಿಕೆ ಅಡಗಿದೆ. ಅಂಥದ್ದೇ ವಿಶಿಷ್ಟ ಕಥನದೊಂದಿಗೆ ಪ್ರೇಕ್ಷಕರ ಮುಂದೆ ಬರಲು ಸಜ್ಜಾಗಿರುವ ಕನ್ನಡ ಸಿನಿಮಾ ‘೦ ಆಂಖಇ’. ಮಹಾನಗರಿ ಬೆಂಗಳೂರಿನಲ್ಲಿ ಒಂದೇ ದಿನದ ಅವಧಿಯಲ್ಲಿ ನಡೆಯುವ, ಎರಡು ಪ್ರಮುಖ ಪಾತ್ರಗಳ ಸುತ್ತ ಸಾಗುವ ಈ ಚಿತ್ರಕ್ಕೆ ವಿಮಲ್ ರಾಜ್ ಎನ್ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿದ್ದಾರೆ. ಚಿತ್ರೀಕರಣ ಮತ್ತು ನಂತರದ ತಾಂತ್ರಿಕ ಕಾರ್ಯಗಳನ್ನು ಪೂರ್ಣಗೊಳಿಸಿರುವ ಚಿತ್ರತಂಡ ಇದೀಗ ಬಿಡುಗಡೆಯ ಹೊಸ್ತಿಲಲ್ಲಿರುವಾಗಲೇ, ಬ್ಯಾಡ್ ಗೈ ಆಂಥಮ್ ಎಂಬ ಹೊಸಾ ಆವೇಗದ ಹಾಡೊಂದನ್ನು ಬಿಡುಗಡೆಗೊಳಿಸಿದೆ.

ಈಗಿನ ಯುವ ಸಮುದಾಯಕ್ಕೆ ನೇರವಾಗಿ ತಲುಪಿಕೊಳ್ಳುವ ರ್ಯಾಪ್ ಶೈಲಿಯಲ್ಲಿರುವ ಈ ಹಾಡಿಗೆ ಸುಜನಿತ್ ಶೆಟ್ಟಿ ಹಾಗೂ ವಿಮಲ್ ರಾಜ್ ಎನ್ ಸಾಹಿತ್ಯ ಬರೆದಿದ್ದಾರೆ. ಮೋಕ್ಷ ಬೀಟ್ಸ್ ಸಂಗೀತ ಸಂಯೋಜನೆಯಿರುವ ಈ ಹಾಡಿನ ಮೂಲಕ ದ ಡೇಟ್ನತ್ತ ಪ್ರೇಕ್ಷಕರು ಕುತೂಹಲದ ದೃಷ್ಟಿ ಹಾಯಿಸುವ ಭರವಸೆ ಚಿತ್ರತಂಡಕ್ಕಿದೆ. ಮೂಲತಃ ಐಟಿ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸಿರುವ ವಿಮಲ್ ರಾಜ್ ಎನ್, ಯೂಟ್ಯೂಬ್ನಲ್ಲಿ ಹಲವು ಕಿರುಚಿತ್ರಗಳನ್ನು ನಿರ್ಮಿಸಿ, ನಿರ್ದೇಶಿಸುವ ಮೂಲಕ ತಮ್ಮದೇ ಆದ ಪ್ರೇಕ್ಷಕವರ್ಗವನ್ನು ಹೊಂದಿದ್ದಾರೆ. ಕಿರುಚಿತ್ರಗಳ ಮೂಲಕ ಕಥೆ ಹೇಳುವ ತಮ್ಮದೇ ಶೈಲಿಯನ್ನು ರೂಪಿಸಿಕೊಂಡಿರುವ ಅವರು, ಇದೀಗ `A DATE' ಮೂಲಕ ಪೂರ್ಣಪ್ರಮಾಣದ ನಿರ್ದೇಶಕರಾಗಿ, ಹಿರಿತೆರೆ-ಯ ಮೂಲಕ ಪ್ರೇಕ್ಷಕರನ್ನು ಮುಖಾಮುಖಿಯಾಗುತ್ತಿದ್ದಾರೆ.

ಬೆಂಗಳೂರು ನಗರದಲ್ಲಿ ಅನಿರೀಕ್ಷಿತವಾಗಿ ಭೇಟಿಯಾಗುವ ಉತ್ತರ ಭಾರತದ ಯುವತಿ ಮತ್ತು ದಕ್ಷಿಣ ಭಾರತದ ಯುವಕನ ಸುತ್ತ ಚಿತ್ರದ ಕಥೆ ಸಾಗುತ್ತದೆ. ಭಯ, ಕುತೂಹಲ, ಹಿಂಜರಿಕೆ, ನಂಬಿಕೆ ಮತ್ತು ಭಾವನಾತ್ಮಕ ಸಂಘರ್ಷಗಳ ನಡುವೆ ಅವರ ಒಂದು ದಿನದ ಪಯಣ ಹೇಗೆ ಹೊಸ ತಿರುವು ಪಡೆದುಕೊಳ್ಳುತ್ತದೆ ಎಂಬುದು ಚಿತ್ರದ ಕಥಾಹಂದರ. ಇಂದಿನ ನಗರ ಜೀವನ, ಬದಲಾಗುತ್ತಿರುವ ಸಂಬಂಧಗಳು ಹಾಗೂ ವಿಭಿನ್ನ ಭಾಷೆ ಮತ್ತು ಸಂಸ್ಕೃತಿಗಳಿಗೆ ಸೇರಿದ ಇಬ್ಬರ ನಡುವಿನ ಮಾನವೀಯ ಸಂಪರ್ಕವನ್ನು ರೊಮ್ಯಾಂಟಿಕ್ ಡ್ರಾಮಾ ಶೈಲಿಯಲ್ಲಿ ಚಿತ್ರ ತೆರೆದಿಡುತ್ತದೆ. ಸುಜನಿತ್ ಶೆಟ್ಟಿ ಮತ್ತು ಅಶ್ವಿನಿ ಶೆಣೈ ಚಿತ್ರದ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ಕೇವಲ ಎರಡು ಪ್ರಧಾನ ಪಾತ್ರಗಳ ಮೂಲಕ ಕಥೆಯನ್ನು ಕಟ್ಟಿಕೊಟ್ಟಿರುವುದು ಚಿತ್ರದ ವಿಶೇಷತೆ. ಪಿವಿಆರ್ ಐನಾಕ್ಸ್ ಸಂಸ್ಥೆ ವಿತರಣೆ-ಯ ಜವಾಬ್ದಾರಿ ವಹಿಸಿಕೊಂಡಿದೆ.

ಬೆಂಗಳೂರಿನ ಐವತ್ತೈದಕ್ಕೂ ಹೆಚ್ಚು ನೈಜ ಸ್ಥಳಗಳಲ್ಲಿ ಚಿತ್ರೀಕರಣ ನಡೆಸಲಾಗಿದ್ದು, ನಗರವೂ ಚಿತ್ರದ ಪ್ರಮುಖ ಪಾತ್ರವೊಂದರಂತೆ ಮೂಡಿಬಂದಿದೆ. ವೀಕೆಂಡ್ ಶಾರ್ಟ್ಸ್ ಸ್ಟುಡಿಯೋ ಬ್ಯಾನರ್ನಡಿ ಸಮಾನ ಮನಸ್ಕರ ತಂಡ ಈ ಚಿತ್ರವನ್ನು ನಿರ್ಮಿಸಿದೆ. ಚಿತ್ರಕ್ಕೆ ಮೋಕ್ಷ ಬೀಟ್ಸ್ ಸಂಗೀತ, ವಡ್ಡೆ ದೇವೇಂದ್ರ ರೆಡ್ಡಿ ಛಾಯಾಗ್ರಹಣ, ವಿಮಲ್ ರಾಜ್ ಎನ್ ಸಂಕಲನ ಹಾಗೂ ಸುಜನಿತ್ ಶೆಟ್ಟಿ ಮತ್ತು ವಿಮಲ್ ರಾಜ್ ಎನ್ ಸಾಹಿತ್ಯವಿದೆ. ಶೀಘ್ರದಲ್ಲಿಯೇ `A DATE' ಚಿತ್ರ ಬಿಡುಗಡೆ ದಿನಾಂಕ ಜಾಹೀರಾಗಲಿದೆ.

# ‘ಬಾಹುಬಲಿ’ ಸಿಂಹಾಸನದ ಮೆರವಣಿಗೆಗೆ ವಿರಾಮ



ಬಾಕ್ಸ್ ಆಫೀಸ್ ಕಿಂಗ್, ಪ್ಯಾನ್ ಇಂಡಿಯಾ ಸ್ಟಾರ್ ಪ್ರಭಾಸ್ ಅಂದ್ರೇನೇ ಸಿಲ್ವರ್ ಸ್ಕ್ರೀನ್ ಮೇಲೆ ಸುನಾಮಿ. ಕಳೆದ 7 ವರ್ಷಗಳಿಂದ ಡಿಜಿಟಲ್ ಲೋಕದಲ್ಲಿ ತಮ್ಮ ಸಾಮ್ರಾಜ್ಯದ ಮುದ್ರೆಯಂತಿದ್ದ ‘ಬಾಹುಬಲಿ’ಯ ಐಕಾನಿಕ್ ಪ್ರೊಫೈಲ್ ಪಿಕ್ಚರ್ ಅನ್ನು ಅಂತಿಮವಾಗಿ ಬದಲಾಯಿಸುವ ಮೂಲಕ ಪ್ರಭಾಸ್ ಹೊಸ ಇತಿಹಾಸಕ್ಕೆ ನಾಂದಿ ಹಾಡಿದ್ದಾರೆ! ಮುಂಬರುವ ಬಹುನಿರೀಕ್ಷಿತ ‘ಫೌಜಿ’ ಚಿತ್ರದ ರಗಡ್ ಮತ್ತು ಪವರ್‌ಫುಲ್ ಹೊಸ ಲುಕ್‌ನೊಂದಿಗೆ ತಮ್ಮ ಸೋಶಿಯಲ್ ಮೀಡಿಯಾ ಅಕೌಂಟ್‌ಗಳನ್ನು ರಿಫ್ರೆಶ್ ಮಾಡಿದ್ದು, ಕ್ಷಣಮಾತ್ರದಲ್ಲಿ ಇಂಟರ್ನೆಟ್ ಜಗತ್ತಿನಲ್ಲಿ ಬಿರುಗಾಳಿ ಎದ್ದಿದೆ.

ಅದರಲ್ಲೂ ಸ್ವಾತಂತ್ರ್ಯ ಮಾಸದ ಆರಂಭದಲ್ಲೇ ಈ ಬಿಗ್ ಅಪ್‌ಡೇಟ್ ಹೊರಬಂದಿರುವುದು ಸಿನಿಪ್ರಿಯರ ರೋಮಾಂಚನವನ್ನು ಡಬಲ್ ಮಾಡಿದೆ. ‘ಫೌಜಿ’ ಚಿತ್ರದ ದೇಶಭಕ್ತಿಯ ಹಿನ್ನೆಲೆಗೆ ಈ ಲುಕ್ ಅಚ್ಚುಕಟ್ಟಾಗಿ ಕನೆಕ್ಟ್ ಆಗಿದ್ದು, ಇದು ಕೇವಲ ಪ್ರೊಫೈಲ್ ಬದಲಾವಣೆ ಅಲ್ಲ... ಬಾಹುಬಲಿ ಯುಗದ ನಂತರ ಮತ್ತೊಂದು ಬ್ರಹ್ಮಾಂಡ ಯಶಸ್ಸಿನ ಮೈಲಿಗಲ್ಲು ಆರಂಭವಾಗುವುದರ ಸ್ಪಷ್ಟ ಮುನ್ಸೂಚನೆ ಎಂದು ಕೋಟ್ಯಂತರ ಅಭಿಮಾನಿಗಳು ಕೊಂಡಾಡುತ್ತಿದ್ದಾರೆ.

ಪ್ರಭಾಸ್ ಅವರ ಈ ಕಿಲ್ಲರ್ ಲುಕ್ ನೋಡುತ್ತಿದ್ದಂತೆ ಸೋಶಿಯಲ್ ಮೀಡಿಯಾದಲ್ಲಿ ಅಭಿಮಾನಿಗಳು ಹಬ್ಬದ ವಾತಾವರಣ ಸೃಷ್ಟಿಸಿದ್ದಾರೆ. ‘ಫೌಜಿ’ ಸಿನಿಮಾದ ಮೇಕಿಂಗ್, ಸ್ಕೇಲ್ ಮತ್ತು ಪ್ರಭಾಸ್ ಅವರ ಈ ಮಾಸ್ ಡೆಫಿನೇಷನ್ ಯಾವ ಮಟ್ಟಿಗಿರಲಿದೆ ಎಂಬುದಕ್ಕೆ ಈ ಡಿಪಿಯೇ ಸಾಕ್ಷಿ ಎಂದು ಗಾಸಿಪ್ ಗಲ್ಲಿಯಿಂದ ಹಿಡಿದು ದೊಡ್ಡ ದೊಡ್ಡ ಟ್ರೇಡ್ ಅನಲಿಸ್ಟ್‌ಗಳವರೆಗೆ ಎಲ್ಲರೂ ಮಾತನಾಡಿಕೊಳ್ಳುತ್ತಿದ್ದಾರೆ.

ಪ್ರಪಂಚದಾದ್ಯಂತ ಇರುವ ಕೋಟ್ಯಂತರ ಫ್ಯಾನ್ಸ್‌ಗೆ ಎಂದೆಂದಿಗೂ ನಂಬರ್ ಒನ್ ಹೀರೊ ಆಗಿರುವ ಪ್ರಭಾಸ್, ಈಗ ‘ಫೌಜಿ’ಯಾಗಿ ಕಣಕ್ಕಿಳಿಯಲು ಕೌಂಟ್‌ಡೌನ್ ಶುರು ಮಾಡಿದ್ದು, ಈ ಹೊಸ ಚಾಪ್ಟರ್ ಇಂಡಿಯನ್ ಸಿನಿಮಾರಂಗದ ಬಾಕ್ಸ್ ಆಫೀಸ್ ಲೆಕ್ಕಾಚಾರವನ್ನೇ ಬದಲಿಸುವುದು ಖಚಿತ!

# ‘ಖಲೀಫಾ’ ಟ್ರೈಲರ್ ಬಂತು ಈ ವಾರ ಚಿತ್ರ ಬಿಡುಗಡೆ




ಬಹುನಿರೀಕ್ಷಿತ ಮಲಯಾಳಂ ಚಿತ್ರ ‘ಖಲೀಫಾ’ದ ಟ್ರೈಲರ್ ಆಗಸ್ಟ್ 16ರಂದು ಬಿಡುಗ-ಡೆಯಾಗಿದ್ದು, ಬಿಡುಗ-ಡೆಯಾದ ಕೆಲವೇ ಗಂಟೆಗಳಲ್ಲಿ ಪ್ರೇಕ್ಷಕರಿಂದ ಭರ್ಜರಿ ಪ್ರತಿಕ್ರಿಯೆಯನ್ನು ಪಡೆದುಕೊಳ್ಳುತ್ತಿದೆ. ಪೃಥ್ವಿರಾಜ್ ಸುಕುಮಾರನ್ ಅವರ ಪವರ್‌ಫುಲ್ ಸ್ಕ್ರೀನ್ ಪ್ರೆಸೆನ್ಸ್, ಹೈ-ವೋಲ್ಟೇಜ್ ಆ್ಯಕ್ಷನ್ ಹಾಗೂ ಚಿತ್ರದ ಅದ್ದೂರಿ ಮೇಕಿಂಗ್‌ಗೆ ಪ್ರೇಕ್ಷಕರು ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ.

ಪೃಥ್ವಿರಾಜ್ ಸುಕುಮಾರನ್ ಪ್ರಮುಖ ಪಾತ್ರದಲ್ಲಿ ನಟಿಸಿರುವ ‘ಖಲೀಫಾ’ ಒಂದು ಹೈ-ಆ್ಯಕ್ಷನ್ ಥ್ರಿಲ್ಲರ್ ಆಗಿದ್ದು, ಶಕ್ತಿ, ಪ್ರತೀಕಾರ ಮತ್ತು ಸಂಘರ್ಷದ ಸುತ್ತ ಕಥೆ ಸಾಗಲಿದೆ. ಟ್ರೈಲರ್‌ನಲ್ಲಿ ಕಾಣಿಸಿಕೊಂಡಿರುವ ಭರ್ಜರಿ ಆ್ಯಕ್ಷನ್ ದೃಶ್ಯಗಳು, ತೀವ್ರ ಮುಖಾಮುಖಿಗಳು ಹಾಗೂ ಪೃಥ್ವಿರಾಜ್ ಅವರ ವಿಭಿನ್ನ ಅವತಾರ ಚಿತ್ರದ ಮೇಲಿನ ನಿರೀಕ್ಷೆಯನ್ನು ಮತ್ತಷ್ಟು ಹೆಚ್ಚಿಸಿದೆ.

ಚಿತ್ರದ ವಿಶೇಷ ಆಕರ್ಷಣೆಯಾಗಿರುವ ಮಲಯಾಳಂ ಸೂಪರ್‌ಸ್ಟಾರ್ ಮೋಹನ್‌ಲಾಲ್ ಅವರ ಉಪಸ್ಥಿತಿಯೂ ಪ್ರೇಕ್ಷಕರ ಕುತೂಹಲವನ್ನು ಮತ್ತಷ್ಟು ಹೆಚ್ಚಿಸಿದೆ. ಪೃಥ್ವಿರಾಜ್ ಸುಕುಮಾರನ್ ಮತ್ತು ಮೋಹನ್‌ಲಾಲ್ ಅವರ ಕಾಂಬಿನೇಷನ್ ಚಿತ್ರದ ಪ್ರಮುಖ ಹೈಲೈಟ್‌ಗಳಲ್ಲಿ ಒಂದಾಗಿದ್ದು, ಇಬ್ಬರು ಸ್ಟಾರ್‌ಗಳನ್ನು ಒಂದೇ ಸಿನಿಮಾದಲ್ಲಿ ಕಣ್ತುಂಬಿಕೊಳ್ಳಲು ಅಭಿಮಾನಿಗಳು ಕಾತುರರಾಗಿದ್ದಾ-ರೆ.

ಚಿತ್ರಕ್ಕೆ ಜೇಕ್ಸ್ ಬಿಜಾಯ್ ಸಂಗೀತ ಸಂಯೋಜಿಸಿದ್ದು, ಅದ್ದೂರಿ ತಾಂತ್ರಿಕ ಮೌಲ್ಯ ಮತ್ತು ಭರ್ಜರಿ ಆ್ಯಕ್ಷನ್ ದೃಶ್ಯಗಳೊಂದಿಗೆ ‘ಖಲೀಫಾ’ ಪ್ರೇಕ್ಷಕರಿಗೆ ದೊಡ್ಡ ಪರದೆಯ ಥ್ರಿಲ್ ನೀಡುವ ನಿರೀಕ್ಷೆಯಿದೆ.

ಕರ್ನಾಟಕದ ಪ್ರೇಕ್ಷಕರಿಗೆ ವಿಶೇಷವಾಗಿ, VK Film ‘ಖಲೀಫಾ’ ಚಿತ್ರದ ಕರ್ನಾಟಕ ಥಿಯೇಟ್ರಿಕಲ್ ವಿತರಣೆ-ಯ ಜವಾಬ್ದಾರಿಯನ್ನು ವಹಿಸಿಕೊಂಡಿದೆ. ಇದರ ಮೂಲಕ ಚಿತ್ರವು ಕರ್ನಾಟಕದಾದ್ಯಂತ ದೊಡ್ಡ ಮಟ್ಟದಲ್ಲಿ ತೆರೆಕಾಣಲಿದೆ.

ಆಗಸ್ಟ್ 16ರಂದು ಬಿಡುಗಡೆ-ಯಾದ ಟ್ರೈಲರ್‌ಗೆ ದೊರೆತಿರುವ ಭರ್ಜರಿ ಪ್ರತಿಕ್ರಿಯೆ ಚಿತ್ರದ ಮೇಲಿನ ನಿರೀಕ್ಷೆಯನ್ನು ಮತ್ತಷ್ಟು ಹೆಚ್ಚಿಸಿದೆ. ಇದೀಗ ಆಗಸ್ಟ್ 20ರಂದು ‘ಖಲೀಫಾ’ ಚಿತ್ರವನ್ನು ಚಿತ್ರಮಂದಿರಗಳಲ್ಲಿ ಕಣ್ತುಂಬಿಕೊಳ್ಳಲು ಪ್ರೇಕ್ಷಕರು ಕಾತುರರಾಗಿದ್ದಾರೆ.

# “ನೀ ನಂಗೆ ಅಲ್ಲವಾ” ಹಾಡು ಬಿಡುಗಡೆ




ಸುರಮ್ ಮೂವೀಸ್ ಲಾಂಛನದಲ್ಲಿ ಜಯರಾಮ ದೇವಸಮುದ್ರ ನಿರ್ಮಿಸಿರುವ,

ಮನೋಜ್ ಪಿ ನಡಲುಮನೆ ನಿರ್ದೇಶನದ ರಾಹುಲ್ ಅರ್ಕಟ್, ಕಾಶಿ ಮಾ ನಾಯಕ - ನಾಯಕಿಯಾಗಿ ನಟಿಸಿರುವ “ನೀ ನಂಗೆ ಅಲ್ಲವಾ” ಚಿತ್ರದ ಮೊದಲ ಹಾಡು “ನೋ ನೋ” ಇತ್ತೀಚೆಗೆ ಬಿಡುಗಡೆಯಾಯಿತು. ಸೂರಜ್ ಜೋಯಿಸ್ ಸಂಗೀತ ಸಂಯೋಜಿರುವ ಈ ಹಾಡನ್ನು ನಿರ್ದೇಶಕ ಮನೋಜ್ ಪಿ ನಡಲುಮನೆ ಅವರೆ ಬರೆದು, ಹಾಡಿರುವುದು ವಿಶೇಷ. ಖ್ಯಾತ ನಟಿಯರಾದ ಸಂಜನಾ ಆನಂದ್ ಹಾಗೂ ರಾಶಿಕಾ ಈ ಹಾಡನ್ನು ಬಿಡುಗಡೆ ಮಾಡಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ಸರಿಗಮ ಯೂಟ್ಯೂಬ್ ಚಾನಲ್ ಮೂಲಕ ಈ ಹಾಡು ಬಿಡುಗಡೆ-ಯಾಗಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುವುದರ ಜೊತೆಗೆ ಅಪಾರ ಮೆಚ್ಚುಗೆ ಕೂಡ ವ್ಯಕ್ತವಾಗುತ್ತಿದೆ.

“ನೀ ನಂಗೆ ಅಲ್ಲವಾ” ಚಿತ್ರದ ಮೊದಲ ಹಾಡು ಬಿಡುಗಡೆಯಾಗಿದೆ. ಇದನ್ನು ಒನ್ ಸೈಡ್ ಲವ್ ಸಾಂಗ್ ಎನ್ನಬಹುದು.

ನಾಯಕಿಯ ಪ್ರೀತಿಗೆ ಕಾಯುತ್ತಿರುವ ಪ್ರೇಮಿ ತನ್ನ ಪ್ರೇಮವನ್ನು ಈ ಹಾಡಿನ ಮೂಲಕ ವ್ಯಕ್ತ ಪಡಿಸುತ್ತಾನೆ. ನಾನೇ ಈ ಹಾಡನ್ನು ಬರೆದು... ಹಾಡಿದ್ದೇನೆ.. ಸೂರಜ್ ಜೋಯಿಸ್ ಅವರ ಸಂಗೀತ ನಿರ್ದೇಶನ ಹಾಡಿನ ತೂಕವನ್ನು ಮತ್ತಷ್ಟು ಹೆಚ್ಚಿಸಿದೆ. ಅಭಿಷೇಕ್ ಮಾಸ್ಟರ್ ನೃತ್ಯ ನಿರ್ದೇಶನ ಮಾಡಿದ್ದಾರೆ. ಈ ಸಂದರ್ಭದಲ್ಲಿ ನಾನು ನನ್ನ ಇಡೀ ತಂಡಕ್ಕೆ, ನಿರ್ಮಾಪಕರಿಗೆ ಹಾಗೂ ಸಂಜನಾ ಆನಂದ್, ರಶಿಕಾ ಅವರಿಗೆ ಧನ್ಯವಾದ ತಿಳಿಸುತ್ತೇನೆ ಎಂದರು ನಿರ್ದೇಶಕ ಮನೋಜ್ ಪಿ ನಡಲುಮನೆ. ಈ ತಂಡದ ಜೊತೆಗೆ ಸಿನಿಮಾ ಮಾಡಿದ್ದು ಬಹಳ ಸಂತೋಷವಾಗಿದೆ. ನಾನು ಬಂಡವಾಳ ಹಾಕಿದ್ದು ಬಿಟ್ಟರೆ ಬೇರೆ ಎಲ್ಲಾ ಕೆಲಸವನ್ನು ನನ್ನ ತಂಡವೇ ಮಾಡಿದೆ. ಇನ್ನೂ, ಬಿಡುಗಡೆಯಾಗಿರುವ ನಮ್ಮ ಚಿತ್ರದ ಮೊದಲ ಹಾಡು ಸೂಪರ್ ಹಿಟ್ ಆಗಲಿದೆ. ಈ ಚಿತ್ರದ ಪ್ರತಿಯೊಂದು ಹಾಡು ಚೆನ್ನಾಗಿದೆ. ಯಾವ ಹಾಡನ್ನು ಮೊದಲು ರಿಲೀಸ್ ಮಾಡಬೇಕೆಂದು ನಮ್ಮಲ್ಲೇ ಪೈಪೋಟಿ ಆಯಿತು.

ಹಾಗೆ, ಒಂದಕ್ಕಿಂತ ಒಂದು ಹಾಡು ಚೆನ್ನಾಗಿದೆ. ಒಳ್ಳೆಯ ಹಾಡುಗಳನ್ನು ಕೊಟ್ಟಿರುವ ಸಂಗೀತ ನಿರ್ದೇಶಕ ಸೂರಜ್ ಜೋಯಿಸ್ ಹಾಗೂ ತಂಡಕ್ಕೆ ಧನ್ಯವಾದ. ಇತ್ತೀಚೆಗೆ ಈ ಸಿನಿಮಾ ನೋಡಿದೆ ಬಹಳ ಚೆನ್ನಾಗಿ ಬಂದಿದೆ. ನಿಮ್ಮೆಲ್ಲರಿಗೂ ಇಷ್ಟವಾಗುವ ಭರವಸೆ ಇದೆ. ಮುಂದೆ ಕೂಡ ನಮ್ಮ ಸುರಮ್ ಮೂವೀಸ್ ಮೂಲಕ ಅನೇಕ ಸದಭಿರುಚಿಯ ಚಿತ್ರಗಳನ್ನು ನಿರ್ಮಾಣ ಮಾಡುತ್ತೇವೆ ಎಂದು ನಿರ್ಮಾಪಕ ಜಯರಾಮ್ ದೇವಸಮುದ್ರ ಹೇಳಿದರು.

“ನೋ ನೋ” ಹಾಡಿನ ಬಗ್ಗೆ ಸೂರಜ್ ಜೋಯಿಸ್ ಮಾಹಿತಿ ನೀಡಿದರು. ಹಾಡಿನ ಚಿತ್ರೀಕರಣದ ಅನುಭವವನ್ನು ನಾಯಕ ರಾಹುಲ್ ಅರ್ಕಟ್ ಹಾಗೂ ನಾಯಕಿ ಕಾಶಿ ಮಾ ಹಂಚಿಕೊಂಡರು. ಚಿತ್ರದಲ್ಲಿ ನಟಿಸಿರುವ ಆರತಿ ಪಡುಬಿದ್ರಿ, ತಾರಕ್ ಮಾಸ್ಟರ್, ಭಾವನ ಚಂದ್ರ, ರೋಹಿತ್, ಛಾಯಾಗ್ರಾಹಕ ಉದಯ್ ಲೀಲಾ, ನೃತ್ಯ ನಿರ್ದೇಶಕ ಅಭಿಷೇಕ್ ಮುಂತಾದವರು ಚಿತ್ರದ ಕುರಿತು ಮಾತನಾಡಿದರು. ಸಂಕಲನಕಾರ ನಾಗೇಂದ್ರ ಉಜ್ಜನಿ ಸಮಾರಂಭದಲ್ಲಿ ಉಪಸ್ಥಿತರಿದ್ದರು.

# ನವೆಂಬರ್ 6ಕ್ಕೆ “ರಾಜನಿವಾಸ” ತೆರೆಗೆ




ಕೆನೋಪಸ್ ಸಿನಿಮಾಸ್ ಪ್ರೊಡಕ್ಷನ್ ಹಾಗೂ ತಂಬೂರಿ ಫಿಲಂಸ್ ಅರ್ಪಿಸಿರುವ ಡಿ.ಪಿ.ಆಂಜನಪ್ಪ ನಿರ್ಮಿಸಿರುವ ಹಾಗೂ ಲೋಕೇಶ್ ಗೌಡ ಸಹ ನಿರ್ಮಾಣವಿರುವ “ರಾಜನಿವಾಸ” ಚಿತ್ರ ನವೆಂಬರ್ 6ರಂದು ತೆರೆಕಾಣಲಿದೆ.

ಈ ಚಿತ್ರದ ಬಿಡುಗ-ಡೆ ದಿನಾಂಕವನ್ನು ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ನಾರಾಯಣಗೌಡ ಪ್ರಕಟಿಸಿದರು.

ಮಿಥುನ್ ಸುವರ್ಣ ಅವರ ನಿರ್ದೇಶನದ ರಾಜನಿವಾಸ ಚಿತ್ರದಲ್ಲಿ ರಾಘವ್ ನಾಯಕ್, ಕೃತಿಕಾ ರವೀಂದ್ರ ಪ್ರಮುಖ ಪಾತ್ರಗಳಲ್ಲಿ ಹಾಗೂ ಶ್ರೀನಗರ ಕಿಟ್ಟಿ ವಿಶೇಷ ಪಾತ್ರದಲ್ಲಿ ನಟಿಸಿದ್ದಾರೆ. ಈವೇಳೆ ಕರವೇ ರಾಜ್ಯ ಮಹಿಳಾ ಘಟಕದ ಅಶ್ವಿನಿಗೌಡ ಕೂಡ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ನಿರ್ದೇಶಕ ಮಿಥುನ್ ಸುವರ್ಣ ಮಾತನಾಡಿ

ನಮ್ಮ ಸಿನಿಮಾ ನ.6 ರಂದು ತೆ-ರೆಕಾಣುತ್ತಿದೆ ಅದೇದಿನ ರಾಮಾಯಣ ಕೂಡ ಬರುತ್ತಿದೆ ಅಂತ ತಿಳಿಯಿತು. ನಮ್ಮ ಚಿತ್ರದ ಕಂಟೆಂಟ್ ಚೆನ್ನಾಗಿದೆ, ಜನ ಬರ್ತಾರೆ, ನಿಂತೇ ನಿಲ್ಲುತ್ತೆ ಅಂತ ನಮಗೆ ಸಂಪೂರ್ಣ ಭರವಸೆಯಿದೆ. ಇತ್ತೀಚೆಗೆ ಕೆಲವರು ಥೇಟರಿಗೆ ಜನ ಬರ್ತಿಲ್ಲ ಅಂತ ಬೇಸರದಿಂದ ಹೇಳಿಕೊಳ್ಳುತ್ತಿದ್ದಾರೆ. ಇದನ್ನು ನಾನು ಒಪ್ಪಲ್ಲ, ಒಳ್ಳೆ ಚಿತ್ರಗಳನ್ನು ಪ್ರೇಕ್ಷಕರು ಯಾವತ್ತೂ ಗೆಲ್ಲಿಸುತ್ತಲೇ ಬಂದಿದ್ದಾರೆ. ಕನ್ನಡ ಸೇರಿದಂತೆ ದಕ್ಷಿಣದ ನಾಲ್ಕು ಭಾಷೆಗಳಲ್ಲಿ ರಾಜನಿವಾಸ ಬಿಡುಗಡೆಯಾಗಲಿದೆ. ನಮ್ಮ ಚಿತ್ರದ ಕಂಟೆಂಟ್, ಮೌತ್ ಪಬ್ಲಿಸಿಟಿಯಿಂದ ಗೆಲ್ಲುತ್ತೆ ಅಂತ ನಿರ್ಮಾಪಕರಿಗೆ ಹೇಳಿದ್ದೇನೆ ಎಂದರು.

ವೇದಿಕೆಯಲ್ಲಿ ನಾರಾಯ-ಣಗೌಡ ಮಾತನಾಡುತ್ತ ರಾಜ್ಯೋತ್ಸವದ ದಿನಗಳಲ್ಲಿ ಚಿತ್ರ ಬಿಡುಗಡೆಯಾಗುತ್ತಿದೆ. ಕಥೆ ನಿರೂಪಣೆ ಚೆನ್ನಾಗಿದ್ರೆ ಜನ ಖಂಡಿತ ಬರ್ತಾರೆ ಅಂತ ಹೇಳಿದ್ದಾರೆ. ನಿರ್ಮಾಪಕ ಆಂಜನಪ್ಪ ಅವರು 35 ವರ್ಷಗಳಿಂದ ಕನ್ನಡಪರ ಕೆಲಸ ಮಾಡಿಕೊಂಡು ಬರುತ್ತಿದ್ದಾರೆ. ಅವರು ಸಿನಿಮಾಗೆ ಹಾಕಿರುವ ಬಂಡವಾಳವನ್ನು ಲ್ಯಾಂಡ್ ಮೇಲೆ ಹಾಕಿದ್ದರೆ ಒಳ್ಳೆ ಲಾಭ ಗಳಿಸುತ್ತಿದ್ದರು. ಅದೇನೋ ಸಿನಿಮಾ ಮಾಡಲೇಬೇಕೆಂಬ ಆಸೆಯಿಂದ ಚಿತ್ರದ ಮೇಲೆ ಹಾಕಿದ್ದಾರೆ. ನಾನೂ ಕೆಲ ದೃಶ್ಯಗಳನ್ನು ನೋಡಿದ್ದೇನೆ. ತುಂಬಾ ಚೆನ್ನಾಗಿ ಮೂಡಿ ಬಂದಿದೆ. ಹೊಸ ಪ್ರತಿಭೆಗಳನ್ನು ಪ್ರೋತ್ಸಾಹಿಸಿದರೆ ಇಂಡಸ್ಟ್ರಿ ಬೆಳೆಯುತ್ತೆ. ಹೋರಾಟಗಾರ ಆಂಜನಪ್ಪ ಅವರ ಜತೆ ನಮ್ಮ ತಂಬೂರಿ ಫಿಲಂಸ್ ಯಾವಾಗಲೂ ಇರುತ್ತೆ.ಲಕ್ಷಾಂತರ ಕರವೇ ಕಾರ್ಯಕರ್ತರು ನಿಮ್ಮಜತೆ ಇರ್ತಾರೆ, ಚಿತ್ರ ಗೆದ್ದೇಗೆಲ್ಲುತ್ತೆ ಎಂದರು.

ಚಿತ್ರದ ನಿರ್ಮಾಪಕ ಆಂಜನಪ್ಪ, ಸಹ ನಿರ್ಮಾಪಕ ಲೋಕೇಶ್ ಗೌಡ, ಹಾಸ್ಯನಟ ವಿಜಯ್ ಚೆಂಡೂರು ಮಾತನಾಡಿದರು.A2 ಮ್ಯೂಸಿಕ್ ಯೂಟ್ಯೂಬ್ ಚಾನಲ್ ನಲ್ಲಿ ಈ ಚಿತ್ರದ ಹಾಡುಗಳು, ಟ್ರೇಲರ್ ಬಿಡುಗಡೆ-ಯಾಗಿದೆ.

# “ರನ್ ರನ್” ಹಾಡು. “




“ಅಮೇರಿಕಾ ಅಮೇರಿಕಾ “. ನಾಗತಿಹಳ್ಳಿ ಚಂದ್ರಶೇಖರ ನಿರ್ದೇಶನದಚಿತ್ರ..

ಅನಿವಾಸಿ ಭಾರತೀಯ ಮನೋಮೂರ್ತಿ ಎಂಬ ಸಂಗೀತ ನಿರ್ದೇಶಕನ ಉದಯವಾಗಿತ್ತು

“ಅಮೇರಿಕಾ ಅಮೇರಿಕಾ” ದಿಂದ “ಒಲವೇ ಜೀವನ ಲೆಕ್ಕಾಚಾರ” ದ ತನಕ ನಾಗತಿಹಳ್ಳಿ ಅವರ ಆರು ಚಿತ್ರಗಳಿಗೆ ಮನೋಮೂರ್ತಿ ಸಂಗೀತ ನೀಡಿದ್ದಾರೆ. ಅಮೇರಿಕಾ ಅಮೇರಿಕಾ 2” ಈ ಜೋಡಿಯ ಕಾಂಬಿನೇಶನ್ ನಲ್ಲಿ ಬರುತ್ತಿರುವ ಏಳನೇ ಚಿತ್ರ. “ಅಮೇರಿಕಾ ಅಮೇರಿಕಾ 2” ಚಿತ್ರದ ಮೊದಲ ಗೀತೆ “ರನ್ ರನ್” ಹಾಡು ಬಿಡುಗಡೆಯಾಗಿದೆ. ನಾಗತಿಹಳ್ಳಿ ಚಂದ್ರಶೇಖರ್ ಅವರೆ ಬರೆದಿರುವ ಈ ಹಾಡನ್ನು ಶಂಕರ್ ಮಹದೇವನ್ ಹಾಗೂ ಶ್ರೇಯಾ ಘೋಷಾಲ್ ಹಾಡಿದ್ದಾರೆ. ಜೋಗಿ ಅವರು ಈ ಹಾಡನ್ನು ಅನಾವರಣ ಮಾಡಿ ಚಿತ್ರಕ್ಕೆ ಯಶಸ್ಸನ್ನು ಕೋರಿದರು. ಹಾಡು ಬಿಡುಗಡೆಗೂ ಮುನ್ನ ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್ ಹಾಗೂ ಸಂಗೀತ ನಿರ್ದೇಶಕ ಮನೋಮೂರ್ತಿ ತಮ್ಮ ಸ್ನೇಹ – ಸಂಗೀತಪಯಣದ ಮೆಲುಕು ಹಾಕಿದರು. ಅವರಿಬ್ಬರ ಕಾಂಬಿನೇಶನ್ ನಲ್ಲಿ ಬಂದಿರುವ ಏಳು ಚಿತ್ರಗಳ ಸೂಪರ್ ಹಿಟ್ ಹಾಡುಗಳ ವಿಶೇಷತೆಯನ್ನು ವಿವರಿಸಿದರು.

ಹಾಡು ಬಿಡುಗಡೆಯ ಜೊತೆಗೆ ಚಿತ್ರ ಬಿಡುಗಡೆಯ ದಿನಾಂಕವನ್ನು ಇದೇ ಸಂದರ್ಭದಲ್ಲಿ ಘೋಷಿಸಲಾಯಿತು. ಮೈಸೂರು ಸ್ಯಾಂಡಲ್ ಸೋಪ್ ಸಂಸ್ಥೆಯ ಮುಖ್ಯಸ್ಥ ಪ್ರಶಾಂತ್ ಚಿತ್ರದ ಬಿಡುಗ-ಡೆಯ ದಿನಾಂಕ ರಿವಿಲ್ ಮಾಡಿದರು. “ಅಮೇರಿಕಾ ಅಮೇರಿಕಾ 2” ಚಿತ್ರದ ನಾಯಕನಟರಲೊಬ್ಬರಾದ ಪೃಥ್ವಿ ಅಂಬರ್, ನಾಯಕಿ ಶಾನ್ವಿ ಶ್ರೀವಾಸ್ತಪಸ್ಥಿತರಿದ್ದರು

# ”NH66” ಚಿತ್ರದಲ್ಲಿ ಪ್ರಮೋದ್ ಶೆಟ್ಟಿ ಮಿಂಚಿಂಗ್

ರಾಯ ಫಿಲಂಸ್ ಲಾಂಛನದಲ್ಲಿ ಮಂಜುನಾಥ್ ಟಿ.ಆರ್ ನಿರ್ಮಿಸಿ, ನಿರ್ದೇಶಿಸಿರುವ ಹಾಗೂ ಪ್ರಮೋದ್ ಶೆಟ್ಟಿ, ಶೃತಿ ಹರಿಹರನ್, ರಾಜೇಶ್ ನಟ-ರಂಗ ಪ್ರಮುಖಪಾತ್ರದಲ್ಲಿ ನಟಿಸಿರುವ “ಓಊ 66” ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದೆ. ಪೋಸ್ಟ್ ಪ್ರೊಡಕ್ಷನ್ ವರ್ಕ್ ಸಹ ಪೂರ್ಣವಾಗಿದೆ. ಇತ್ತೀಚಿಗೆ ಈ ಚಿತ್ರದ ಪ್ರಮುಖಪಾತ್ರಧಾರಿ ಪ್ರಮೋದ್ ಶೆಟ್ಟಿ ಅವರ ಫಸ್ಟ್ ಲುಕ್ ಅನಾವರಣವಾಗಿದೆ. ಫಸ್ಟ್ ಲುಕ್ ವಿಶೇಷವಾಗಿದ್ದು, ಕುತೂಹಲ ಮೂಡಿಸಿದೆ. “NH 66” ಚಿತ್ರದ ಹೆಸರೇ ಹೇಳುವಂತೆ ಒಂದು ಸಂಚಾರದ ಕಥೆ. ಮಂಗಳೂರಿನಿಂದ ಮುಂಬೈಗೆ ಹೋಗುವ ಮಧ್ಯೆ ನಡೆಯುವ ಎರಡು ದಿನಗಳ ಕಥೆ. ಈ ಚಿತ್ರದಲ್ಲಿ ಪ್ರಮೋದ್ ಶೆಟ್ಟಿ ಕ್ಯಾಬ್ ಡ್ರೈವರ್ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಗುರುರಾಯರ ಪರಮಭಕ್ತರಾದ ನಿರ್ಮಾಪಕ – ನಿರ್ದೇಶಕ ಟಿ.ಆರ್ ಮಂಜುನಾಥ್ ರಾಯರ ಸನ್ನಿಧಿಯಲ್ಲೇ ಈ ಚಿತ್ರವನ್ನು ಆರಂಭಿಸಿದ್ದರು. ರಾಯರ ಕರುಣೆಯಿಂದಲೇ ಚಿತ್ರ ಅಂದುಕೊಂಡ ಹಾಗೆ ಆಗಿದೆ ಎನ್ನುತ್ತಾರೆ ಟಿ.ಆರ್. ಮಂಜುನಾಥ್. ನಿರ್ದೇಶಕರೆ ಚಿತ್ರ-ಕ್ಕೆ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ಬರೆದಿದ್ದಾರೆ. ಸುನೀತ್ ಹಲಗೇರಿ ಅವರ ಛಾಯಾಗ್ರಹಣವಿರುವ “ಓಊ 66” ಚಿತ್ರಕ್ಕೆ ಸ್ವಾಮಿನಾಥನ್ ಅವರ ಸಂಗೀತ ನಿರ್ದೇಶನವಿದೆ.

# ‘ಡಿಯರ್ ಹಸ್ಬೆಂಡ್’ ಚಿತ್ರಕ್ಕೆ ಪಾವನಾ ಗೌಡ

**ವರದಿ:**
**ಚಂದ್ರಿಕಾ.ಜಿ,ಬೆಂಗಳೂರು**

ಗ್ಲಾಮರಸ್ ಮತ್ತು ಟ್ರೆಡೀಷನಲ್ ಪಾತ್ರಗಳಲ್ಲಿ ಹೆಚ್ಚಾಗಿ ಮಿಂಚಿದ್ದ ನಟಿ ಪಾವನಾ ಗೌಡ, ಇದೀಗ ರಗಡ್ ಪಾತ್ರದ ಮೂಲಕ ಪ್ರೇಕ್ಷಕರ ಮುಂದೆ ಬರುವ ತಯಾರಿಯಲ್ಲಿದ್ದಾರೆ.

ಈಗ ಉತ್ತರ ಕರ್ನಾಟಕದ ಖಡಕ್ ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.

ಪಾವನಾ ಗೌಡ ಇದೇ ಮೊದಲ ಬಾರಿಗೆ ಇಂಥದ್ದೊಂದು ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿರುವುದು

‘ಜಿ9 ಕಮ್ಯುನಿಕೇಶನ್ ಅಂಡ್ ಮೀಡಿಯಾ’ ಸಂಸ್ಥೆಯ ಅಡಿಯಲ್ಲಿ ನಿರ್ಮಾಣವಾಗುತ್ತಿರುವ, ಗುರುರಾಜ ಕುಲಕರ್ಣಿ (ನಾಡಗೌಡ) ನಿರ್ದೇಶನದ ‘ಡಿಯರ್ ಹಸ್ಬೆಂಡ್’ ಚಿತ್ರದ ತೆರೆ ಹಿಂದಿನ ಕೆಲಸಗಳು ಭರದಿಂದ ನಡೆಯುತ್ತಿದೆ. ಮೂರನೇ ಹಂತದ ಚಿತ್ರೀಕರಣಕ್ಕೆ ತಯಾರಿ ಮಾಡಿಕೊಳ್ಳುವ ನಡುವೆಯೇ ಪಾವನಾ ಗೌಡ ಅಧಿಕೃತವಾಗಿ ‘ಡಿಯರ್ ಹಸ್ಬೆಂಡ್’ ಚಿತ್ರಕ್ಕೆ ಸೇರ್ಪಡೆಯಾಗಿದ್ದಾರೆ.

‘ನಾನು ಇಲ್ಲಿಯವರೆಗೆ ಮಾಡಿರುವ ಪಾತ್ರಗಳಿಗಿಂತ ಸಂಪೂರ್ಣ ವಿಭಿನ್ನವಾಗಿರುವಂತ ಪಾತ್ರ ಇದಾಗಿದೆ.



ಒಬ್ಬ ಜವಾಬ್ದಾರಿಯುತ ಮಹಿಳಾ ಪೊಲೀಸ್ ಅಧಿಕಾರಿ ಹೇಗಿರುತ್ತಾಳೆ? ಅವಳಿಗೆ ಏನೇನು ಸವಾಲುಗಳಿರುತ್ತವೆ? ತನ್ನ ಕೆಲಸವನ್ನು ಹೇಗೆ ನಿಭಾಯಿಸುತ್ತಾಳೆ? ಎಂಬುದನ್ನು ನನ್ನ ಪಾತ್ರ ತೋರಿಸುತ್ತದೆ. ಇದು ನನಗಂತೂ ಇದೊಂದು ಚಾಲೆಂಜಿಂಗ್ ಆಗಿರುವಂಥ ಪಾತ್ರ. ಖಡಕ್ ಡೈಲಾಗ್ಸ್ ಜೊತೆಗಕ್ಷನ್ಸ್ ಕೂಡ ಈ ಪಾತ್ರದಲ್ಲಿ ನನಗಿದೆ’ ಎಂದು ಪಾತ್ರ ಪರಿಚಯ ಮಾಡಿಕೊಟ್ಟಿದ್ದಾರೆ.

‘ಡಿಯರ್ ಹಸ್ಬೆಂಡ್’ ಚಿತ್ರದಲ್ಲಿ ಪಾವನಾ ಅವರ ಪಾತ್ರದ ಬಗ್ಗೆ ಮಾತನಾಡಿಚಿತ್ರದ ನಿರ್ದೇಶಕ ಗುರುರಾಜ ಕುಲಕರ್ಣಿ (ನಾಡಗೌಡ), ‘ಇದೊಂದು ತುಂಬ ಪ್ರಮುಖವಾದ ಪಾತ್ರ ಸಾಕಷ್ಟು ಹುಡುಕಾಟದ ನಂತರ ಈ ಪಾತ್ರಕ್ಕೆ ಅಂತಿಮವಾಗಿ ಪಾವನಾ ಅವರನ್ನು ಆಯ್ಕೆ ಮಾಡಿಕೊಂಡಿದ್ದೇವೆ. ಅವರು ಕೂಡ ಖುಷಿಯಿಂದ ಈ ಪಾತ್ರ ಮಾಡಲಿದ್ದಾರೆ ಎಂದರು.

’ ಚಿತ್ರದಲ್ಲಿ ನಟರಾದ ಸೂರಜ್ ಗೌಡ, ಪ್ರವೀಣ್, ಕುಮಾರ ಬಂಗಾರಪ್ಪ ಮೊದಲಾದ ಕಲಾವಿದರು ಮುಖ್ಯಭೂಮಿಕೆಂiಲ್ಲಿ ಅಭಿನಯಿಸುತ್ತಿದ್ದಾರೆ. ಚಿತ್ರದ ಹಾಡುಗಳಿಗೆ ವೀರ್ ಸಮರ್ಥ್ ಸಂಗೀತ ಸಂಯೋಜಿಸುತ್ತಿದ್ದಾರೆ. ಪ್ರಮೋದ ಮರವಂತೆ ಸಾಹಿತ್ಯ, ರಘು ನಿಡುವಳ್ಳಿ ಸಂಭಾಷಣೆ ಚಿತ್ರಕ್ಕಿದೆ. ಪಿಕೆಹೆಚ್ ದಾಸ್ ಛಾಯಾಗ್ರಹಣ, ಬಿ. ಎಸ್. ಕೆಂಪರಾಜ್ ಚಿತ್ರಕ್ಕೆ ಸಂಕಲನ ಕಾರ್ಯ ನಿರ್ವಹಿಸುತ್ತಿದ್ದಾರೆ.

ಬೆಂಗಳೂರು, ಮಂಡ್ಯ, ಗೋವಾ ಮತ್ತಿತರ ಕಡೆಗಳಲ್ಲಿ ಚಿತ್ರದ ಚಿತ್ರೀಕರಣ ನಡೆಸುವ ಯೋಜನೆ ಇದೆ.

# ‘ಭಾವಾಂತರ’ ಬಿಡುಗಡೆಗೆ ಮುನ್ನ ಪೋಸ್ಟರ್ ಬಂತು

ಕಾರ್ತಿಕ್ ಶರ್ಮ ‘ಭಾವಾಂತರ’ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿದ್ದಾರೆ. ಬಿಡುಗಡೆಗೆ ಸಜ್ಜಾಗಿರುವ ಈ ಚಿತ್ರದ ಹೊಸ ಪೋಸ್ಟರ್ ಬಿಡುಗಡೆಯಾಗಿದೆ.

ಯುವತಿಯೊಬ್ಬಳು ಟ್ರಾನ್ಸ್‌ಜೆಂಡರ್ ಪಾತ್ರಕ್ಕೆ ಮುತ್ತಿಕ್ಕುವ ಭಂಗಿಯಲ್ಲಿರುವ ಪೋಸ್ಟರ್ ಬಿಡುಗಡೆಯಾಗಿದ್ದು, ಚಿತ್ರದ ಕಥಾಹಂದರದ ಕುರಿತು ಪ್ರೇಕ್ಷಕರಲ್ಲಿ ತೀವ್ರ ಚರ್ಚೆ ಮತ್ತು ಕುತೂಹಲ ಹುಟ್ಟುಹಾಕಿದೆ.

ನೈಜ ಘಟನೆಯನ್ನು ಆಧರಿಸಿ ತಯಾರಾಗಿರುವ ಈ ಚಿತ್ರಕ್ಕೆ ಕಾರ್ತಿಕ್ ಶರ್ಮ ಅವರೇ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡುವುದರ ಜೊತೆಗೆ ಸಂಗೀತ ಸಂಯೋಜಿಸಿ ಪ್ರಮುಖ ಪಾತ್ರದಲ್ಲೂ



ಕಾಣಿಸಿಕೊಂಡಿದ್ದಾರೆ.

ತಮ್ಮ ಚೊಚ್ಚಲ ನಿರ್ದೇಶನದ ಬಗ್ಗೆ ಮಾತನಾಡಿದ ಕಾರ್ತಿಕ್ ಶರ್ಮ, “ದಕ್ಷಿಣ ಭಾರತದಲ್ಲೇ ಈ ರೀತಿಯ ಅಪರೂಪದ ಕಥಾಹಂದರ ಈವರೆಗೂ ಬಂದಿಲ್ಲ.

ಚಿತ್ರದಲ್ಲಿ ಒಟ್ಟು ಐದು ಹಾಡುಗಳಿದ್ದು, ಪ್ರತಿಷ್ಠಿತ ‘ಹೊಂಬಾಳೆ ಮ್ಯೂಸಿಕ್’ ಸಂಸ್ಥೆ ಆಡಿಯೋ ಹಕ್ಕನ್ನು ಪಡೆದುಕೊಂಡಿದೆ. ಪ್ರೇಕ್ಷಕರ ಪ್ರೋತ್ಸಾಹ ಹೀಗೆಯೇ ಮುಂದುವರಿಯಲಿ” ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಚಿತ್ರದಲ್ಲಿ ಕಾರ್ತಿಕ್ ಶರ್ಮ ಜೊತೆಗೆ ತನ್ವಿ ರಾವ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ.

ಉಳಿದಂತೆ ಪ್ರಣವ್ ಶ್ರೀಧರ್, ಶ್ರೀವೈಷ್ಣವ್, ವೇದ ರಾವ್ ಹಾಗೂ ಭಾನು ತಾರಾಗಣದಲ್ಲಿದ್ದಾರೆ. ‘ಕಿಕ್ ಮೀಡಿಯಾ’ ಸಂಸ್ಥೆ ನಿರ್ಮಿಸಿರುವ ಈ ಚಿತ್ರಕ್ಕೆ ಸಾಗರ್ ಅದ್ಕರ್ ಛಾಯಾಗ್ರಹಣ ಹಾಗೂ ಆಶೀಷ್ ಹುಲಕುಂದ್ ಸಂಕಲನವಿದೆ. ಚಿತ್ರ ಸದ್ಯದಲ್ಲೇ ತೆರೆಗೆ ಬರಲಿದೆ.

# ‘ಹುಬ್ಬಳ್ಳಿ ಹಂಟರ್ಸ್’ ಡಬ್ಬಿಂಗ್ ಪೂರ್ಣ

ಸಂತೋಷ್ ಕುಮಾರ್ ನಿರ್ಮಾಣದ ‘ಹುಬ್ಬಳ್ಳಿ ಹಂಟರ್ಸ್’ ಸಿನಿಮಾ ಇದೀಗ ಪೋಸ್ಟ್ ಪ್ರೊಡಕ್ಷನ್ ಹಂತ ತಲಪಿದೆ.

ಚಿತ್ರದ ಡಬ್ಬಿಂಗ್ ಕೆಲಸಗಳು ಕೂಡ ಪೂರ್ಣಗೊಂಡಿವೆ. ನಿರ್ದೇಶಕ ಸಮರ್ಥ್ ಬಿ. ಕಡಕೊಳ್ ಈ ಚಿತ್ರಕ್ಕೆ ಆ್ಯಕ್ಷನ್ ಕಟ್ ಹೇಳುತ್ತಿದ್ದಾರೆ.

ಪಕ್ಕಾ ಉತ್ತರ ಕರ್ನಾಟಕದ ಸೊಗಡನ್ನು ಒಳಗೊಂಡಿರುವ ವಿಭಿನ್ನ ಕಥಾಹಂದರ ಈ ಚಿತ್ರದ್ದು.. ಮೊದಲ ಹಂತದಲ್ಲಿ ಹುಬ್ಬಳ್ಳಿ ಶಿರಸಿ, ಧಾರವಾಡಗಳಲ್ಲಿ ಚಿತ್ರೀಕರಣ ನಡೆಸಿದೆ. ಸ್ಥಳೀಯ ಪರಿಸರ ಹಾಗೂ ಕಥೆಯ ನೈಜತೆಗೆ ತಕ್ಕಂತೆ ನೈಜ ತಾಣಗಳಲ್ಲಿ ಚಿತ್ರೀಕರಣ ನಡೆದಿದೆ




ಚೇತನ್ ಮಾರಂಬೀಡ್, ಪವನ್ ಕುಲಕರ್ಣಿ, ಸುಮಿತ್ ಸಂಕೋಜಿ, ನಮನ್ ಅರೋರ, ದೀಪಕ್ ರಾವ್, ಶಿವು ಗುಂಡಣ್ಣನವರ್, ವಿನಯ್ ದೊಡ್ಡಮನಿ, ಧನ್ಯ ಸುಜೀತ್, ನಟ–ರಾದ ಪ್ರಮೋದ್ ಶೆಟ್ಟಿ, ಅಚ್ಯುತ್ ಕುಮಾರ್ ಮತ್ತು ಕೃಷ್ಣ ಹೆಬ್ಬಾಳೆ ಇದ್ದಾರೆ. ಬಹುತೇಕ ಸೋಷಿಯಲ್ ಮೀಡಿಯಾದ ಜನಪ್ರಿಯ ಕಂಟೆ–ಂಟ್ ಕ್ರಿಯೇಟರ್ಸ್ ಕೂಡ ಬಣ್ಣ ಹಚ್ಚಿರುವುದು ಚಿತ್ರದ ಮತ್ತೊಂದು ವಿಶೇಷತೆಯಾಗಿದೆ.

# ನಟ ನಾಗಭೂಷಣ್ ಹುಟ್ಟುಹಬ್ಬಕ್ಕೆ ಹೊಸ ಸಿನಿಮಾ

ನ ಟ ನಾ ಗ ಭ ೂ ಷ ಣ್ ಜನ್ಮದಿನದ ಪ್ರಯುಕ್ತ ಅವರ ಹೊಸ ಚಿತ್ರದ ಘೋಷಣೆಯಾಗಿದೆ. ಕಸ್ತೂರಿ ಟಾಕೀಸ್ ಬ್ಯಾನರ್‌ನಡಿ ನಿರ್ಮಾಪಕ ಎಸ್. ಕೆ. ಸಂತೋಷ್ ಅವರು ನಿರ್ಮಿಸುತ್ತಿರುವ, ‘ಪ್ರೊಡಕ್ಷನ್ ನಂ. 2’ ಎಂದು ತಾತ್ಕಾಲಿಕವಾಗಿ ಹೆಸರಿಡಲಾಗಿರುವ ಈ ಚಿತ್ರವನ್ನು ಜಗದೀಶ್ ಎನ್. ಕೋಲಾರ ನಿರ್ದೇಶಿಸುತ್ತಿದ್ದಾರೆ.

, ಇದೊಂದು 90ರ ದಶಕದ ಹಿನ್ನೆಲೆಯಲ್ಲಿ ಸಾಗುವ ಅಪ್ಪಟ ಕೌಟುಂಬಿಕ ಕಥಾಹಂದರ ಚಿತ್ರಕಥೆ ಅಂತಿಮ ಸ್ವರೂಪ



ಪಡೆಯುತ್ತಿದೆ

ಎರಡು ತಿಂಗಳೊಳಗೆ ಚಿತ್ರದ ಮುಹೂರ್ತ ನೆರವೇರಿಸಿ ಶೂಟಿಂಗ್ ಆರಂಭಿಸುವ ಯೋಜನೆ ಇದೆ ಎನ್ನುತ್ತಾರೆ ನಿರ್ದೇಶಕರು.

ಜಗದೀಶ್ ಎನ್. ಕೋಲಾರ ಅವರಿಗೆ ಇದು ಚೊಚ್ಚಲ ನಿರ್ದೇಶನದ ಸಿನಿಮ.

# `Adate’ ಚಿತ್ರದ ಟ್ರೈಲರ್ ಬಿಡುಗಡೆ!

ಹೊಸತನದ ಕಥನದ ಸುಳಿವಿನೊಂದಿಗೆ ಕಳೆದ ಒಂದಷ್ಟು ದಿನಗಳಿಂದ ಸುದ್ದಿಯಲ್ಲಿರುವ ಚಿತ್ರ ‘೦ ಜಚಿಣಜ’. ಈಗಾಗಲೇ ಸಾಕಷ್ಟು ಕಿರುಚಿತ್ರಗಳ ಮೂಲಕ ತನ್ನದೇ ಆದ ಪ್ರೇಕ್ಷಕ ವರ್ಗವನ್ನು ಸೃಷ್ಟಿಸಿಕೊಂಡಿರುವ ವಿಮಲ್ ರಾಜ್ ಎನ್ ನಿರ್ದೇಶನದಲ್ಲಿ ಮೂಡಿ ಬಂದಿರುವ ಈ ಚಿತ್ರ ಇದೇ ಸೆಪ್ಟೆಂಬರ್ 4ರಂದು ತೆರೆಗಾಣಲಿದೆ. ಹೀಗೆ ಬಿಡುಗಡೆ–ಯ ಹೊಸ್ತಿಲಿನಲ್ಲಿರುವಾಗಲೇ ಚಿತ್ರತಂಡ ಟ್ರೈಲರ್ ಅನ್ನು ಬಿಡುಗಡೆಗೊಳಿಸಿದೆ. ಈ ಕುರಿತಾಗಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಸಿನಿಮಾ ಕಥನದ ಬಗೆಗಿನ ಒಂದಷ್ಟು ಕುತೂಹಲಕರ ವಿಚಾರಗಳನ್ನು ಹಂಚಿಕೊಂಡಿದೆ.



ಈ ಪತ್ರಿಕಾಗೋಷ್ಠಿಯಲ್ಲಿ ನಿರ್ದೇಶಕ ವಿಮಲ್ ರಾಜ್ ಎನ್, ದೇವೇಂದ್ರ ರೆಡ್ಡಿ, ಸುಜನಿತ್ ಶೆಟ್ಟಿ ಹಾಗೂ ಅಶ್ವಿನಿ ಶೆಣೈ ಹಾಜರಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕರು ‘2020ರಲ್ಲಿ ಅ ಡೇಟ್ ಹೆಸರಿನಲ್ಲಿಯೇ ಇಂಗ್ಲಿಶ್ ಭಾಷೆಯಲ್ಲಿ ಒಂದು ಕಿರುಚಿತ್ರವನ್ನು ನಿರ್ದೇಶನ ಮಾಡಿದ್ದೆ. ಅದರ ಹಿಂದಿದ್ದದ್ದು ನಿರ್ಮಾಪಕರನ್ನು ಹುಡುಕುವ ಉದ್ದೇಶವಾಗಿತ್ತು. ಆದರೆ, ನಿರ್ಮಾಪಕರು ಸಿಗದಿದ್ದದ್ದರಿಂದಾಗಿ ಅದನ್ನು ಯೂಟ್ಯೂಬ್ ಮೂಲಕ ಬಿಡುಗಡೆಗೊಳಿಸಿದ್ದೆವು. ಆ ಕಿರುಚಿತ್ರಕ್ಕೆ ಪ್ರೇಕ್ಷಕರ ಕಡೆಯಿಂದ ಭಾರೀ ಮೆಚ್ಚುಗೆ ಸಿಕ್ಕಿತ್ತು. ಎಪ್ಪತ್ತೆರಡು ಲಕ್ಷ ವೀಕ್ಷಣೆ ಸಿಗುವ ಮೂಲಕ ನಿರ್ದೇಶಕನಾಗಿ ಆತ್ಮವಿಶ್ವಾಸ ಮೂಡಿಕೊಂಡಿತ್ತು. ಆ ನಂತರ ಸುಜನೀತ್ ಶೆಟ್ಟಿ ಮತ್ತು ಅಶ್ವಿನಿ ಶೆಣೈರನ್ನು ನಾಯಕ ನಾಯಕಿಯರನ್ನಾಗಿಟ್ಟುಕೊಂಡು ಈ ಸಿನಿಮಾ ಮಾಡಿದ್ದೇನೆ’ ಎಂದು ವಿವರಣೆ ನೀಡಿದರು.

ಇದು ಬೆಂಗಳೂರು ಹುಡುಗ ದೆಹಲಿ ಮೂಲದ ಹುಡುಗಿಯನ್ನು ಸಂಧಿಸುವ, ಅವರಿಬ್ಬರ ಸುತ್ತ ಒಂದು ದಿನದಲ್ಲಿ ಘಟಿಸುವ ಕಥೆ ಹೊಂದಿರುವ ಸಿನಿಮಾ ಎಂಬ ವಿಚರವನ್ನೂ ವಿಮಲ್ ರಾಜ್ ಎನ್ ತೆರೆದಿಟ್ಟರು. 2016ರಿಂದೀಚೆಗೆ ಕಿರುಚಿತ್ರಗಳನ್ನು ನಿರ್ದೇಶನ ಮಾಡುತ್ತಾ ಬಂದಿದ್ದ ವಿಮಲ್ ರಾಜ್ ಎನ್ ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿದ್ದಾರೆ.

ಹೋಪ್, ಲಾಫಿಂಗ್ ಬುದ್ಧ, ಬಾಸ್ ಥರದ ಚಿತ್ರಗಳಲ್ಲಿ ನಟಿಸಿದ್ದ ಸುಜನೀತ್ ಶೆಟ್ಟಿ ಅ ಡೇಟ್ ಮೂಲಕ ಪೂರ್ಣ ಪ್ರಮಾಣದ ನಾತಯಕನಾಗಿದ್ದಾರೆ. ನವ ಪ್ರತಿಭೆ ಅಶ್ವಿನಿ ಶೆಣೈ ಆಡಿಷನ್ ಮೂಲಕ ಆಯ್ಕೆಯಾಗಿ, ಈ ಚಿತ್ರದ ನಾಯಕಿಯಾಗೋ ಅವಕಾಶ ಪಡೆದು–ಕೊಂಡಿದ್ದಾರೆ. ಪಿವಿಆರ್ ಐನಾಕ್ಸ್ ಸಂಸ್ಥೆ ಅರ್ಪಿಸಿ, ವಿತರಣಾ ಜವಾಬ್ದಾರಿಯನ್ನೂ ಹೊತ್ತುಕೊಂಡಿದೆ. ವೀಕೆಂಡ್ ಶಾರ್ಟ್ಸ್ ಸ್ಟುಡಿಯೋ ಬ್ಯಾನರ್ನಡಿ ಸಮಾನ ಮನಸ್ಕರ ತಂಡ ಈ ಚಿತ್ರವನ್ನು ನಿರ್ಮಿಸಿದೆ. ಚಿತ್ರಕ್ಕೆ ಮೋಕ್ಷ ಬೀಟ್ಸ್ ಸಂಗೀತ, ವಡ್ಡೆ ದೇವೇಂದ್ರ ರೆಡ್ಡಿ ಛಾಯಾಗ್ರಹಣ, ವಿಮಲ್ ರಾಜ್ ಎನ್ ಸಂಕಲನ ಹಾಗೂ ಸುಜನಿತ್ ಶೆಟ್ಟಿ ಮತ್ತು ವಿಮಲ್ ರಾಜ್ ಎನ್ ಸಾಹಿತ್ಯವಿದೆ.

# ಬ್ರಹ್ಮಕಮಲ! ಈ ವಾರ ತೆರೆಗೆ

ಸಿದ್ದು ಪೂರ್ಣಚಂದ್ರ ನಿರ್ದೇಶನದಲ್ಲಿ ಮೂಡಿ ಬಂದಿರುವ ವಿಶಿಷ್ಟ ಕಥಾನಕದ ಚಿತ್ರ ‘ಬ್ರಹ್ಮಕಮಲ’.

ಇತ್ತೀಚೆಗಷ್ಟೇ ಬಿಡುಗ–ಡೆಗೊಂಡಿದ್ದ ಟ್ರೈಲರ್ ಮೂಲಕ ಈ ಚಿತ್ರ ಚರ್ಚೆಗೆ ಗ್ರಾಸವಾಗಿತ್ತು. ನಮ್ಮ ನಡುವಿನ ಕೌಟುಂಬಿಕ ವ್ಯವಸ್ಥೆಯಲ್ಲಿ ಉಸಿರುಗಟ್ಟಿದ ಹೆಣ್ಣೊಬ್ಬಳ ಸೂಕ್ಷ್ಮ ಕಥಾನಕದ ಸುಳಿವಿನೊಂದಿಗೆ ಬ್ರಹ್ಮಕಮಲ ಪ್ರೇಕ್ಷಕರನ್ನು ಸೆಳೆದುಕೊಂಡಿತ್ತು. ಈ ವಾರ ಚಿತ್ರ ತೆರೆಗಾಣಲಿದೆ.

ನಮ್ಮ ಸಮಾಜದಲ್ಲಿ ಹೆಣ್ಣಿಗೆ ಅತೀವವಾದ ಗೌರವಯುತ ಸ್ಥಾನಮಾನವಿದೆ. ಆದರೆ, ನಮ್ಮ ಕೌಟುಂಬಿಕ ವ್ಯವಸ್ಥೆಯಲ್ಲಿ ಅದೇ ಹೆಣ್ಣು ಜೀವಗಳ ನೋವಿನ ಕಥೆಗಳೂ ಹೂತು ಹೋಗಿವೆ.




ಅಂಥಾದ್ದೊಂದು ಮನ ಮಿಡಿಯುವ ಕಥೆಯನ್ನು ಸಿದ್ದು ಪೂರ್ಣಚಂದ್ರ ಬ್ರಹ್ಮ ಕಮಲದ ಮೂಲಕ ದೃಶ್ಯವಾಗಿಸಿದ್ದಾರೆ. ಅದು ಪ್ರೇಕ್ಷಕರ ಮುಂದೆ ಬರಲು ದಿನಗಣನೆ ಆರಂಭವಾಗಿದೆ.

ಕಥೆ, ಚಿತ್ರಕಥೆ, ಸಂಭಾಷಣೆಯೊಂದಿಗೆ ಸಿದ್ದು ಪೂರ್ಣಚಂದ್ರ ನಿರ್ದೇಶನ ಮಾಡಿರುವ ಈ ಸಿನಿಮಾ ಪೂರ್ಣ ಚಂದ್ರ ಫಿಲಂಸ್ ಬ್ಯಾನರಿನಡಿಯಲ್ಲಿ ನಿರ್ಮಾಣಗೊಂಡಿದೆ. ಅದ್ವಿತಿ ಶೆಟ್ಟಿ, ಋತು ಚೈತ್ರ, ಲೋಕೇಂದ್ರ ಸೂರ್ಯ, ಬಾಲ ರಾಜ್ವಾಡಿ, ಮಮತಾ ರಾಹುತ್, ಪ್ರಮೀಳಾ ಸುಬ್ರಮಣ್ಯ ಮುಂತಾದವರ ತಾರಾಗಣ ಈ ಚಿತ್ರಕ್ಕಿದೆ. ಲೋಕೇಂದ್ರ ಸೂರ್ಯ ಛಾಯಾಗ್ರಹಣ, ಅನಂತ್ ಆರ್ಯನ್ ಸಂಗೀತ ನಿರ್ದೇಶನ, ದೀಪು ಸಂಕಲನ, ನಾಗರತ್ನ ಕೆ.ಹೆಚ್ ನಿರ್ಮಾಣ ನಿರ್ವಹಣೆಯಲ್ಲಿ ಬ್ರಹ್ಮಕಮಲ ರೂಪುಗೊಂಡಿದೆ.

ಪುಟ್ಟರಾಜು ಮತ್ತು ಪ್ರಮೀಳಾ ಸುಬ್ರಮಣ್ಯ ಕಾರ್ಯಕಾರಿ ನಿರ್ಮಾಪಕರಾಗಿ ಜೊತೆಯಾಗಿದ್ದಾರೆ.

# AI–Virtual ಸಿನಿಮಾ ನಿರ್ಮಾಣಕ್ಕೆ ಸ್ಮೈಲ್ ಶ್ರೀನು ಸಜ್ಜು

ಕನ್ನಡ ಚಿತ್ರರಂಗದಲ್ಲಿ ರೀಲ್ ಕ್ಯಾಮೆರಾದಿಂದ ಡಿಜಿಟಲ್ ಕ್ಯಾಮೆರಾದವರೆಗೆ ಸಿನಿಮಾ ಮಾಡಿ ಗೆದ್ದಿರುವ ನಟ, ನಿರ್ದೇಶಕ ಹಾಗೂ ನಿರ್ಮಾಪಕ ಸ್ಮೈಲ್ ಶ್ರೀನು ಅವರು ಇದೀಗ ೦ಐ, ವರ್ಚುಯೆಲ್ ಪ್ರೊಡಕ್ಷನ್ ಹಾಗೂ ಅತ್ಯಾಧುನಿಕ ತಂತ್ರಜ್ಞಾನಗಳ ಮೂಲಕ ಮುಂದಿನ ಪೀಳಿಗೆಯ ಚಿತ್ರ ನಿರ್ಮಾಣದತ್ತ ಹೊಸ ಹೆಜ್ಜೆ ಇಡುತ್ತಿದ್ದಾರೆ.

ಚಿತ್ರ ನಿರ್ಮಾಣದಲ್ಲಿ ಸಾಮಾನ್ಯವಾಗಿ ಎದುರಾಗುವ ಕಲಾವಿದರು, ತಂತ್ರಜ್ಞರು, ಲೊಕೇಶನ್, ಸಮಯ ಹಾಗೂ ಹೆಚ್ಚಿನ ವೆಚ್ಚದಂತಹ ಸವಾಲುಗಳಿಗೆ ಭವಿಷ್ಯದಲ್ಲಿ ೦ಐ ಮತ್ತು ವರ್ಚುಯೆಲ್ ಪ್ರೊಡಕ್ಷನ್ ಹೊಸ ಪರಿಹಾರಗಳನ್ನು ನೀಡುವ ಸಾಧ್ಯತೆ ಇದೆ. ಕ್ಯಾಮೆರಾ ಸೆರೆಹಿಡಿಯಲಾಗದ ಕಲ್ಪನೆಗಳಿಗೂ ಪರದೆಯ ಮೇಲೆ ಜೀವ ನೀಡುವ ಸಾಧ್ಯತೆಯನ್ನು ಈ ಹೊಸ ತಂತ್ರಜ್ಞಾನಗಳು ತೆರೆದಿಡುತ್ತಿವೆ.

“ನಾನು ರೀಲ್ ಯುಗದಲ್ಲೂ ಸಿನಿಮಾ ಮಾಡಿದ್ದೇನೆ, ಡಿಜಿಟಲ್ ಯುಗದಲ್ಲೂ ಸಿನಿಮಾ ಮಾಡಿದ್ದೇನೆ. ಈಗ ಅದನ್ನೆಲ್ಲ ಮೀರಿದ ತಂತ್ರಜ್ಞಾನವನ್ನು ಬಳಸಿಕೊಂಡು ಹೊಸ ರೀತಿಯ ಸಿನಿಮಾ ಮಾಡಲು ಮುಂದಾಗಿದ್ದೇನೆ. ಕಾಲ ಬದಲಾಗುತ್ತಿರುವಂತೆ ತಂತ್ರಜ್ಞಾನದ ಜೊತೆಗೆ ನಾವೂ ಅಪ್‌ಡೇಟ್



ಆಗಬೇಕಿದೆ.

ಇದು ಕೇವಲ ಸಿನಿಮಾ ನಿರ್ಮಾಣದ ಹೊಸ ಪ್ರಯೋಗವಲ್ಲ; ಕಥೆ ಹೇಳುವ ವಿಧಾನದ ಹೊಸ ಅಧ್ಯಾಯ. ತಂತ್ರಜ್ಞಾನವನ್ನು ಕಥೆ–ಯ ಪರ್ಯಾಯವಾಗಿ ಅಲ್ಲ, ಕಥೆಯ ಶಕ್ತಿಯನ್ನು ಹಲವು ಪಟ್ಟು ಹೆಚ್ಚಿಸುವ ಸಾಧನವಾಗಿ ಬಳಸುವುದು ನಮ್ಮ ಉದ್ದೇಶ,” ಎಂದು ಸ್ಮೈಲ್ ಶ್ರೀನು ಹೇಳಿದ್ದಾರೆ.

ಇದುವರೆಗೆ ಸಿನಿಮಾಗಳಲ್ಲಿ ನಾಯಕನ ಪಾತ್ರಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗುತ್ತಿತ್ತು. ಆದರೆ ಮುಂದಿನ ದಿನಗಳಲ್ಲಿ ಸಮಾಜಕ್ಕೆ ಮಹತ್ತರ ಕೊಡುಗೆ ನೀಡಿರುವ ರಿಯಲ್ ಲೈಫ್ ಹೀರೋಗಳು ಹಾಗೂ ಅಸಾಮಾನ್ಯ ವ್ಯಕ್ತಿಗಳ ನೈಜ ಬದುಕಿನ ಕಥೆಗಳು ಅತ್ಯಾಧುನಿಕ ತಂತ್ರಜ್ಞಾನದ ಮೂಲಕ ಮತ್ತಷ್ಟು ಪರಿಣಾಮಕಾರಿಯಾಗಿ ತೆ–ರೆಯ ಮೇಲೆ ಮೂಡಿ ಬರಲಿವೆ ಎಂಬ ಆಶಯವನ್ನು ಸ್ಮೈಲ್ ಶ್ರೀನು ವ್ಯಕ್ತಪಡಿಸಿದ್ದಾರೆ.

ಹೊಸ ತಂತ್ರಜ್ಞಾನಗಳ ಪರಿಚಯದಿಂದ ಚಿತ್ರ ನಿರ್ಮಾಣದ ಸಮಯ ಮತ್ತು ವೆಚ್ಚವನ್ನು ಕಡಿಮೆ ಮಾಡುವುದರ ಜೊತೆಗೆ, ಸೀಮಿತ ಸಂಪನ್ಮೂಲಗಳಲ್ಲಿಯೂ ದೊಡ್ಡ ಮಟ್ಟದ ದೃಶ್ಯ ವೈಭವ ಹಾಗೂ ಮನರಂಜನೆಯನ್ನು ಸೃಷ್ಟಿಸಬಹುದು. ೦ಐ ಕಲಾವಿದರು ಮತ್ತು ತಂತ್ರಜ್ಞರ ಸೃಜನಶೀಲತೆಯನ್ನು ಬದಲಿಸುವ ಸಾಧನವಲ್ಲ; ಅವರ ಕಲ್ಪನೆ ಮತ್ತು ಸೃಜನಶೀಲತೆಯನ್ನು ಮತ್ತಷ್ಟು ವಿಸ್ತರಿಸುವ ಶಕ್ತಿಶಾಲಿ ಸಾಧನ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಅಂತಾರಾಷ್ಟ್ರೀಯ ಮಟ್ಟದ ಮಹತ್ವದ ಸಿನಿಮಾವೊಂದಕ್ಕೆ ಕೈಹಾಕಿರುವುದಾಗಿ ಸ್ಮೈಲ್ ಶ್ರೀನು ತಿಳಿಸಿದ್ದಾರೆ

### ‘ವಿಆರ್‌ಎಲ್’ ಸಂಸ್ಥೆಗೆ ಸುವರ್ಣ ‘ಸಂಭ್ರಮ’

# ಮೈಸೂರಿನಲ್ಲಿ ವಿಶೇಷ ಸಮಾರಂಭ – ಬೃಹತ್ ಗೋದಾಮು ಉದ್ಘಾಟನೆ




ಮೈಸೂರು, 20– ಕನಸು, ಪರಿಶ್ರಮ, ನಂಬಿಕೆ, ಸವಾಲುಗಳನ್ನು ಮೆಟ್ಟಿ ನಿಂತು ಐದು ದಶಕಗಳ ಯಶಸ್ವಿ ಸೇವೆಯನ್ನು ಪೂರೈಸಿದ ‘ವಿಆರ್‌ಎಲ್ ಲಾಜಿಸ್ಟಿಕ್ಸ್ ಲಿಮಿಟೆಡ್’ನ ಸುವರ್ಣ ಮಹೋತ್ಸವ ಸಮಾರಂಭ ಶನಿವಾರ ಮೈಸೂರಿನಲ್ಲಿ ಸಂಭ್ರಮದಿಂದ ಜರುಗಿತು.

ಸಂಸ್ಥೆಗೆ ಸುವರ್ಣ ಮಹೋತ್ಸವದ ಜತೆಗೆ ನಗರದ ಬನ್ನಿಮಂಟಪ ಬಡಾವಣೆಯ ಜೋಡಿ ತೆಂಗಿನಮರ ರಸ್ತೆ ಬಳಿ ನೂತನವಾಗಿ ನಿರ್ಮಾಣವಾಗಿರುವ ವಿಆರ್‌ಎಲ್ ಕಟ್ಟಡ, ಬೃಹತ್ ಗೋದಾಮು ಕಟ್ಟಡ ಲೋಕಾರ್ಪಣೆ ಸಹ ಇದೇ ವೇಳೆ ನೆರವೇರಿಸಲಾಯಿತು. ಸಾವಿರಾರು ಸಂಖ್ಯೆಯಲ್ಲಿ ಜನರು ಸಂಭ್ರಮದ ಕ್ಷಣಕ್ಕೆ ಸಾಕ್ಷಿಯಾದರು. ಮಾತ್ರವಲ್ಲದೆ, ವಿಆರ್‌ಎಲ್ ಸಮೂಹ ಸಂಸ್ಥೆಗಳ ಚೇರ್ಮನ್ ಡಾ.ವಿಜಯ ಸಂಕೇಶ್ವರ, ವ್ಯವಸ್ಥಾಪಕ ನಿರ್ದೇಶಕ ಡಾ. ಆನಂದ ಸಂಕೇಶ್ವರ ಹಾಗೂ ವಿಜಯಾನಂದ ಟ್ರಾವೆಲ್ಸ್ ಎಂಡಿ ಶಿವ ಸಂಕೇಶ್ವರ ಅವರನ್ನು ಅಭಿನಂದಿಸಿ, ಸಂಸ್ಥೆಯ ಮುಂದಿನ ಪಯಣವೂ ಇನ್ನಷ್ಟು ಯಶಸ್ಸಿನ ಹಾದಿಯಲ್ಲಿ ಸಾಗಲಿ ಎಂದು ಶುಭ ಹಾರೈಸಿದರು.

ವಿಭಿನ್ನ ಆಲೋಚನೆಯ ಫಲ: ವಿಆರ್‌ಎಲ್ ಸಂಸ್ಥೆಯ ಆರಂಭದ ದಿನಗಳನ್ನು ಸ್ಮರಿಸಿದ ಡಾ.ವಿಜಯ ಸಂಕೇಶ್ವರ ಅವರು, ನನ್ನ ತಂದೆ ಪ್ರಿಂಟಿಂಗ್ ಮತ್ತು ಪಬ್ಲಿಷಿಂಗ್ ಕ್ಷೇತ್ರದಲ್ಲಿ ತೊಡಗಿಸಿಕೊಂಡಿದ್ದರು. ಕುಟುಂಬದ ಎಲ್ಲರೂ ಒಂದೇ ಕ್ಷೇತ್ರದಲ್ಲಿ ಮುಂದುವರಿಯುವ ಬದಲು, ವಿಭಿನ್ನ ಕ್ಷೇತ್ರದಲ್ಲಿ ಹೆಜ್ಜೆ ಇಡಬೇಕು ಎಂಬ ಆಲೋಚನೆಯಿಂದ ವಿಆರ್‌ಎಲ್ ಸಂಸ್ಥೆಯನ್ನು ಆರಂಭಿಸಲಾಯಿತು. 10 ವರ್ಷಗಳ ಕಾಲ ನಿರಂತರ ನಷ್ಟ ಹಾಗೂ ಅತ್ಯಂತ ಕಠಿಣ ಪರಿಸ್ಥಿತಿಯನ್ನು ಎದುರಿಸಬೇಕಾಯಿತು. ಆದರೆ, ಆ ಸಂಕಷ್ಟದ ದಿನಗಳಲ್ಲಿಯೂ ಸೇವೆಯ ಗುಣಮಟ್ಟ ಹಾಗೂ ಆರ್ಥಿಕ ಶಿಸ್ತಿನಲ್ಲಿ ರಾಜಿ ಮಾಡಿಕೊಳ್ಳಲಿಲ್ಲ. ನಮ್ಮ ಕಾರ್ಯವೈಖರಿಯನ್ನು ಜನರು ಗುರುತಿಸಿ, ವಿಶ್ವಾಸವಿಟ್ಟು ಆಶೀರ್ವದಿಸಿದರು. ಅವರ ಬೆಂಬಲವೇ ನಮಗೆ ಬೆನ್ನುತಟ್ಟಿ ಮುನ್ನಡೆಯುವ ಶಕ್ತಿ ನೀಡಿತು ಎಂದು ಸ್ಮರಿಸಿದರು.

ದೇಶದಲ್ಲಿಯೇ ಅತಿಹೆಚ್ಚು ವಾಹನಗಳನ್ನು ಹೊಂದಿರುವ ಸಂಸ್ಥೆ ನಮ್ಮದಾಗಿದೆ. ಟ್ರಕ್ ಹಾಗೂ ಬಸ್ ಸೇರಿ 7000 ವಾಹನಗಳಿವೆ. ದೇಶದಲ್ಲಿ 1300 ಶಾಖೆಗಳು, ಶ್ರೀನಗರದಿಂದ ತಿರುವನಂತಪುರಂವರೆಗೆ ನಮ್ಮ ಸೇವೆ ವಿಸ್ತರಿಸಿದೆ. ಇದು ಸಾಧ್ಯವಾಗಿದ್ದು ನಮ್ಮ ಸಮರ್ಪಣಾ ಮನೋಭಾವದಿಂದ. ಕೆಲಸ ಮಾಡುವ ಸಿಬ್ಬಂದಿಯ ಸೇವೆಯಿಂದ ಎಂದು ಹೇಳಿದರು.

ಆರ್ಥಿಕ ಶಿಸ್ತು ಯಶಸ್ಸಿನ ಮೂಲ: ವಿಆರ್‌ಎಲ್ ಸಮೂಹ ಸಂಸ್ಥೆ ಬೆಳೆದು ಬಂದ ಕಠಿಣ ಹಾದಿಯನ್ನು ವಿವರಿಸಿದ ವ್ಯವಸ್ಥಾಪಕ ನಿರ್ದೇಶಕ ಡಾ. ಆನಂದ ಸಂಕೇಶ್ವರ, ಲಾಜಿಸ್ಟಿಕ್ಸ್ ಕಂಪನಿ ನಡೆಸುವುದು ಅತ್ಯಂತ ಸವಾಲಿನ ವಿಚಾರ. ಟೆಲಿಫೋನ್ ಕೂಡ ಸರಿಯಾಗಿ ಸಿಗದ ಆ ದಿನಗಳಲ್ಲಿ ಪ್ರತಿ ಹೆಜ್ಜೆಯೂ ಕಷ್ಟಕರವಾಗಿತ್ತು. ಮನೆ ಮನೆ ಪ್ರಚಾರ ಮಾಡಿದ ಉದಾಹರಣೆಗಳಿವೆ. ಇವತ್ತಿನ ಸ್ಮಾರ್ಟ್ ದಿನಗಳಲ್ಲಿ ತಂತ್ರಜ್ಞಾನ ಸಾಕಷ್ಟು ಬೆಳವಣಿಗೆ ಕಂಡಿದೆ. ಆದರೆ ನನ್ನ ತಂದೆ ಈ ಸಂಸ್ಥೆ ಪ್ರಾರಂಭಿಸಿದಾಗ ಇಂತಹ ಯಾವುದೇ ವ್ಯವಸ್ಥೆ ಇಲ್ಲದೆಯೂ ಅವರು ವಿಆರ್‌ಎಲ್ ಅನ್ನು ಯಶಸ್ವಿಯಾಗಿ ಕಟ್ಟಿದರು ಎಂದು ಡಾ. ವಿಜಯ ಸಂಕೇಶ್ವರ ಅವರ ಸಾಧನೆಯನ್ನು ಸ್ಮರಿಸಿದರು.

ಶಾಸಕರಾದ ಜಿ.ಟಿ.ದೇವೇಗೌಡ, ಎ.ಆರ್. ಕೃಷ್ಣಮೂರ್ತಿ, ಟಿ.ಎಸ್. ಶ್ರೀವತ್ಸ, ಕೆ. ರವಿಶಂಕರ್, ಮಾಜಿ ಸಂಸದ ಪ್ರತಾಪ್ ಸಿಂಹ, ಮಾಜಿ ಶಾಸಕರಾದ ಎಸ್.ಎ. ರಾಮದಾಸ್, ಎಂ.ಕೆ. ಸೋಮಶೇಖರ್, ನಿರಂಜನ್ ಕುಮಾರ್, ಎಂಎಲ್‌ಸಿಗಳಾದ ಗೋ.ಮಧುಸೂದನ್, ತೋಂಟದಾರ್ಯ ಇತರರು ಇದ್ದರು.

> ಐವತ್ತು ವರ್ಷ ಎಂಬುದು ಸಣ್ಣ ಮೈಲಿಗಲ್ಲೇನೂ ಅಲ್ಲ. ವಿಆರ್‌ಎಲ್ ಸಂಸ್ಥೆ 50 ವರ್ಷಗಳನ್ನು ಪೂರೈಸಿರುವುದು ಸಂತಸದ ವಿಚಾರ. ವಿಆರ್‌ಎಲ್‌ನ ಒಂದು ಟ್ರಕ್ ನೋಡಿದಾಗ ನಮಗೆ ವಿಶ್ವಾಸ ಮೂಡುತ್ತದೆ. ಅದಕ್ಕಾಗಿ ನಾವು ಸಂಸ್ಥೆಗೆ ಅಭಿನಂದನೆ ಸಲ್ಲಿಸುತ್ತೇವೆ. ಪ್ರಸ್ತುತ ಎಲ್ಲರೂ ನವೋದ್ಯಮ ಪ್ರಾರಂಭಿಸುತ್ತಿದ್ದಾರೆ. ನವೋದ್ಯಮ ಪ್ರಾರಂಭಿಸಲು ವಿಆರ್‌ಎಲ್ ಮಾದರಿಯಾಗಿದೆ. ಈ ಸಂಸ್ಥೆಯ ಆರ್ಥಿಕ ಶಿಸ್ತನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕು.
>
> **–ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸಂಸದ***

> ಹಣದ ಕೊರತೆ ನಡುವೆಯೂ ಡಾ. ವಿಜಯ ಸಂಕೇಶ್ವರ ಅವರು ಉದ್ಯಮ ಪ್ರಾರಂಭಿಸಿ ದೇಶದಲ್ಲಿ ನಂ.1 ಲಾಜಿಸ್ಟಿಕ್ಸ್ ಸಂಸ್ಥೆಯನ್ನು ಕಟ್ಟಿ ಬೆಳೆಸಿರುವುದು ಸಾಮಾನ್ಯವಾದ ಮಾತಲ್ಲ. ವೃತ್ತಿಪರತೆ ಹಾಗೂ ಆರ್ಥಿಕ ಶಿಸ್ತು ಮೈಗೂಡಿಸಿಕೊಂಡವರಿಗೆ ಮಾತ್ರ ಇಂತಹ ಸಾಧನೆ ತೋರಲು ಸಾಧ್ಯ. ಕನ್ನಡಿಗರಾದ ಡಾ. ವಿಜಯ ಸಂಕೇಶ್ವರ ಅವರು ಇಷ್ಟೊಂದು ದೊಡ್ಡ ಸಂಸ್ಥೆಯನ್ನು ಕಟ್ಟಿ ಬೆಳೆಸಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ಸಂಗತಿ.
>
> **–ಡಾ.ಯತೀಂದ್ರ ಸಿದ್ದರಾಮಯ್ಯ ಜಿಲ್ಲಾ ಉಸ್ತುವಾರಿ ಸಚಿವ**

## ಬಿಜೆಪಿಯವರು ತಾಕತ್ತಿದ್ದರೆ RSS ಶಾಖೆಯಲ್ಲಿ ಸಂಘದ ಗೀತೆ ಬಿಟ್ಟು ರಾಷ್ಟ್ರಗೀತೆ ಹಾಡಲಿ: ಬಿ.ಕೆ.ಹರಿಪ್ರಸಾದ್

ಬೆಂಗಳೂರು, 20– ಬಿಜೆಪಿಯವರು ತಾಕತ್ತಿದ್ದರೆ RSS ಶಾಖೆಯಲ್ಲಿ ಸಂಘದ ಗೀತೆ ಬಿಟ್ಟು ರಾಷ್ಟ್ರಗೀತೆ ಹಾಡಲಿ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಸವಾಲು ಹಾಕಿದ್ದಾರೆ. ಅಥಾಅ ನಿರ್ಣಯವನ್ನು ಸ್ವಾಗತ ಮಾಡುತ್ತೇನೆ. ಇವರು ನಮ್ಮನ್ನು ಗಲ್ಲಿಗಾದರೂ ಹಾಕಲಿ, ಜೈಲಿಗಾದರೂ ಹಾಕಲಿ. ನಾವು ಹಾಡುವುದು ವಂದೇ ಮಾತರಂ ಗೀತೆಯ ಎರಡು ಚರಣ ಮಾತ್ರ. ಈ ವಿಚಾರದಲ್ಲಿ ರಾಜಕೀಯ ಮಾಡುವವರೇ ದೇಶದ್ರೋಹಿಗಳು. CWC ಸಭೆಯಲ್ಲಿ ಸರಿಯಾದ ನಿರ್ಣಯ ತೆಗೆದುಕೊಂಡಿದ್ದಾ–ರೆ. ಇವರೆಲ್ಲ ಕಂಗನಾ ರಣಾವತ್ ಅಭಿಮಾನಿಗಳು. ಕಂಗನಾ ಹಾಡನ್ನೇ ಬೇಕಿದ್ದರೆ ಸಂಸತ್‌ಗೆ ತಂದು ರಾಷ್ಟ್ರಗೀತೆ ಮಾಡ್ತಾರೆ. ಬಿಜೆಪಿಯವರು ಪಾರ್ಲಿಮೆಂಟ್‌ಗೆ ಬರುವ ಧೈರ್ಯವೂ ಇಲ್ಲದ ನರಹೇಡಿಗಳು ಎಂದವರು ವಾಗ್ದಾಳಿ ನಡೆಸಿದ್ದಾರೆ.

## ಅನಾಮಧೇಯ ಶವ ಪತ್ತೆ : ವಾರಸುದಾರರಿಗೆ ಮನವಿ

ವಿಜಯನಗರ (ಹೊಸಪೇಟೆ) , 20– ಬಳ್ಳಾರಿ ಮತ್ತು ಹದ್ದಿನಗುಂಡು ರೈಲು ನಿಲ್ದಾಣದ ಮದ್ಯೆ ಸುಮಾರು 70 ವರ್ಷ ವಯಸ್ಸಿನ ಅನಾಮದೇಯ ವ್ಯಕ್ತಿ ಶವ ಪತ್ತೆಯಾಗಿದೆ.

ಮೃತ ವ್ಯಕ್ತಿಯು ಸುಮಾರು 5.6 ಅಡಿ ಎತ್ತರ, ಕಪ್ಪು ಮೈಬಣ್ಣ, ಸದೃಢ ಮೈಕಟ್ಟು ಹೊಂದಿದ್ದು, ಬೋಳು ತಲೆ ಅಲ್ಲಲ್ಲಿ ಬಿಳಿ ಕೂದಲು ಹಾಗೂ ಗಡ್ಡ, ಮೀಸೆ ಬಿಟ್ಟಿರುತ್ತಾನೆ. ಮೃತನ ಮೈಮೇಲೆ ಬಿಳಿ ಬಣ್ಣದ ತುಂಬು ತೋಳಿನ ಶರ್ಟ್, ಬಿಳ ಬಣ್ಣದ ದೋತಿ, ತುಂಬು ತೋಳಿನ ಬಿಳಿ ಬಣ್ಣದ ಬನಿಯನ್, ಕಂದು ಬಣ್ಣದ ಅಂಡರ್‌ವೇರ್ ಧರಿಸಿರುತ್ತಾರೆ.

ಈ ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ಕಂಡು ಬಂದಲ್ಲಿ ಬಳ್ಳಾರಿ ರೈಲ್ವೇ ಪೊಲೀಸ್ ಉಪನಿರೀಕ್ಷಕ 9480802131, ರಾಯಚೂರು ರೈಲ್ವೇ ವೃತ್ತ ಪೊಲೀಸ್ ವೃತ್ತ ನಿರೀಕ್ಷಕ 9480800471ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಬಾರದು ಎಂದೂ.., ಕೈ ಜಾರಿದ ಸಮಯ

ಅದೊಂದು ಮಧ್ಯಮ ಗಾತ್ರದ ಊರು. ಆ ಊರಿನಲ್ಲಿ ಓರ್ವ ಯುವಕ ತನ್ನ ತಂದೆ ಮತ್ತು ತಾಯಿಯೊಂದಿಗೆ ವಾಸವಾಗಿದ್ದ.. ಕೆಲ ತಿಂಗಳುಗಳ ಹಿಂದೆ ಪದವಿ ಶಿಕ್ಷಣವನ್ನು ಪೂರೈಸಿದ ಆತ ಮೊದಲು ಈಗ ತಾನೇ ಪದವಿ ಪೂರೈಸಿದ್ದೇನೆ ಕೆಲ ದಿನಗಳ ನಂತರ ಉದ್ಯೋಗ ಮಾಡುತ್ತೇನೆ ಎಂದು ಸುಮ್ಮನೆ ಕಾಲ ದೂಡಿದ. ಏನೋ ಇಷ್ಟು ದಿನಗಳ ಕಾಲ ಓದಿದ್ದಾನಲ್ಲ ಸ್ವಲ್ಪ ದಿನ ಆರಾಮಾಗಿ ಕಾಲ ಕಳೆಯಲಿ ಎಂದು ಆತನ ಪಾಲಕರು ಕೂಡ ಸುಮ್ಮನೆ ಇದ್ದರು.

ನಂತರವೂ ಕೂಡ ಆ ಯುವಕ ಯಾವುದೇ ಉದ್ಯೋಗವನ್ನು ಅರಸದೇ ಇರುವುದು ಪಾಲಕರ ಸಹನೆಯನ್ನು ಪರೀಕ್ಷಿಸಲು ಆರಂಭಿಸಿತು. ಪ್ರತಿದಿನ ಮುಂಜಾನೆ ಯಾವುದೋ ಹೊತ್ತಿಗೆ ಎದ್ದು ಆರಾಮಾಗಿ ತಿಂದುಂಡು ತನಗೆ ಬೇಕಾದಾಗ ಹೊರಗೆ ತಿರುಗಾಡಲು ಹೋಗುತ್ತಿದ್ದ. ಆತ ಬದುಕನ್ನು ಗಂಭೀರವಾಗಿ ಪರಿಗಣಿಸಲಿಲ್ಲ ಎಂಬುದು ಆತನ ಪಾಲಕರ ಮನಸ್ಸಿನ ಕಿರಿಕಿರಿ ಗೆ ಕಾರಣವಾಗಿತ್ತು. ಹೀಗೆಯೇ ದಿನಗಳು ವಾರಗಳಾಗಿ, ವಾರಗಳು ತಿಂಗಳುಗಳಾಗಿ, ತಿಂಗಳುಗಳು ಕಳೆದು ವರ್ಷವೇ ಆಗುವ ಹೊತ್ತಿಗೆ ಪತ್ನಿ ಇನ್ನಾದರೂ ಕೊಂಚ ಬುದ್ದಿ ಹೇಳಿ ಮಗನಿಗೆ.. ಅವನು ಕೂಡ ಯಾವುದಾದರೂ ಒಂದು ಉದ್ಯೋಗವನ್ನು ಮಾಡಿ ತನ್ನ ಕಾಲ ಮೇಲೆ ನಿಲ್ಲಲಿ ಎಂದು ವರಾತ ಆರಂಭಿಸಿದಳು.

ಪತ್ನಿಯ ಮಾತಲ್ಲಿರುವ ಸತ್ಯವನ್ನು ಕುಡು–ಕೊಂಡ ಆತ ಮರುದಿನ ಮುಂಜಾನೆ ತಾನು ತನ್ನ ಕಚೇರಿಗೆ ತೆರಳುವ ಮುನ್ನ ಮಗನನ್ನು ಕರೆದು ತನ್ನ ಮನೆಯ ಅಲಮಾರಿಯಲ್ಲಿ ಅದುವರೆಗೂ ಭದ್ರವಾಗಿ ಇಟ್ಟಿದ್ದ ಸುಂದರವಾದ ವಾತೊಂದನ್ನು ಕೊಟ್ಟನು. ತಮ್ಮ ಮನೆಯಲ್ಲಿ ಅಂತಹದೊಂದು ಸುಂದರವಾದ ವಿನ್ಯಾಸದ ವಾಚು ಇರುವುದನ್ನು ನೋಡಿ ಅತ್ಯಂತ ಸಂತಸದಿಂದ ಮಗ ‘ಅಪ್ಪ ಇಷ್ಟು ದಿನ ಇದನ್ನು ತೋರಿಸಲಿಲ್ಲ ಏಕೆ ? ಈ ವಾಚು ತುಂಬಾ ಚೆನ್ನಾಗಿದೆ ಇದನ್ನು ನನಗೆ ಕೊಡುವಿರಾ’ ಎಂದು ಆಸೆಯಿಂದ ಕೇಳಿದನು.

ಅದಕ್ಕೇನು ಮಗಾ.. ಅದು ನಿನ್ನ ಅಜ್ಜನ ವಾಚು, ನನ್ನ ನಂತರ ಅದು ನಿನಗೆ ಸಲ್ಲಬೇಕಾದ್ದು, ಆದರೆ ಇದನ್ನು ಕೊಡುವ ಮುನ್ನ ನನ್ನಪ್ಪ ನನಗೆ ಹಾಕಿದ ಶರತ್ತನ್ನು ನಾನು ನಿನಗೆ ಹೇಳುತ್ತಿದ್ದೇನೆ. ನೀನು ಆ ಶರತ್ತಿಗೆ ಬದ್ಧನಾಗಿ ನಡೆದುಕೊಂಡರೆ ಮಾತ್ರ ಈ ಸುಂದರವಾದ ವಾಚು ನಿನಗೆ ದಕ್ಕುತ್ತದೆ ಎಂದು ಹೇಳಿದನು. ‘ಓಹೋ ನೀವು ಹೇಳುವ ಯಾವ ಕೆಲಸವನ್ನು ಬೇಕಾದರೂ ಮಾಡುತ್ತೇನೆ’ ಎಂದು ಮಗ ಹೇಳಿದೆ. ಹಾಗಾದರೆ ಈ ದಿನ ವಾಚನ್ನು ಪೇಟಿ ಬೀದಿಯಲ್ಲಿರುವ ಅಂಗಡಿಗಳಲ್ಲಿ ಕೊಂಡೊಯ್ದು ಇದರ ಬೆಲೆ ಎಷ್ಟಿರಬಹುದು ಎಂಬುದನ್ನು ಕೇಳಿ ಕೊಂಡು ಬಾ’ ಎಂದು ಹೇಳಿದ.

ಅಷ್ಟೇನಾ! ಖಂಡಿತವಾಗಿಯೂ ನೀವು ಹೇಳಿದ ಕೆಲಸ ಮಾಡುತ್ತೇನೆ ಎಂದು ತಂದೆಗೆ ಹೇಳಿದ ಮಗ ಕೂಡಲೇ ಆ ವಾಚನ್ನು ತನ್ನ ಜೇಬಿನಲ್ಲಿ ಇಟ್ಟುಕೊಂಡು ಪೇಟೆ ಬೀದಿಯ ಕಡೆ ನಡೆದ. ಆ ಊರಿನ ಪೇಟೆಯ ಮಧ್ಯಭಾಗದಲ್ಲಿ ಇರುವ ವೃತ್ತದ ಬಳಿಯ ಮಿಠಾಯಿ ಅಂಗಡಿಗೆ ಹೋದ ಆತ ‘ಅಣ್ಣ.. ನೀವು ಈ ವಾಚನ್ನು ನೋಡಿ ಇದರ ಬೆಲೆ ಎಷ್ಟಿರಬಹುದು ಎಂದು ನೀವು ಹೇಳುತ್ತೀರಾ? ಎಂದು



ಸುಂದರವಾದ ಆ ವಾಚನ್ನು ನೋಡಿದ ಮಿಠಾಯಿ ಅಂಗಡಿಯ ಮಾಲೀಕ ‘ಅರೆ ! ಈ ವಾಚನ ವಿನ್ಯಾಸ ತುಂಬಾ ಚೆನ್ನಾಗಿದೆ ಇದಕ್ಕೆ ನಾನು 500 ರೂ ಕೊಡಬಲ್ಲೆ ಎಂದು ಹೇಳಿದ. ಆಯ್ಯೋ! ಇದನ್ನು ನಾನು ಮಾರುತ್ತಿಲ್ಲ.ಇದರ ಬೆಲೆ ಎಷ್ಟಿರಬಹುದು ಎಂಬುದನ್ನು ಬೇರೆಯವ ರಿಂದ ಪರೀಕ್ಷಿಸು ಎಂದು ನನ್ನ ತಂದೆ ಹೇಳಿದ್ದಾರೆ... ಅದಕ್ಕೆ ಇದರ ಬೆಲೆಯನ್ನು ಊಹಿಸಲು ನಿಮ್ಮನ್ನು ಕೇಳಿಕೊಂಡೆ ಎಂದು ಆತ ಹೇಳಿದ. ನಂತರ ಮುಂದುವರೆದು ಮತ್ತೊಂದು ಅಂಗಡಿಗೆ ಹೋದ ಆತ ಅಂಗಡಿಯ ಮಾಲೀಕರನ್ನು ಕು–ರಿತು ಸ್ವಾಮಿ ಈ ವಾಚನ ಬೆಲೆ ಎಷ್ಟಿರಬಹುದು ಎಂದು ತಾವು ಊಹಿಸಿ ಹೇಳಬಲ್ಲಿರಾ? ಎಂದು ಕೇಳಿದ. ಕಣ್ಣಿಳೆಯುವ ಆ ವಾಚನ ಅಂದವನ್ನು ನಿರುಕಿಸುತ್ತಾ ಅಂಗಡಿಯ ಮಾಲೀಕ ಇದು ನನ್ನ ತಂದೆ–ಯ ಕಾಲದ ವಾಚು. ಆಗ ಇಂತಹ ವಾಚನ್ನು ಹಾಕಿಕೊಳ್ಳುವುದು ಹೆಮ್ಮೆಯ ವಿಷಯವಾಗಿತ್ತು. ತುಂಬಾ ಹಳೆಯ ವಾಜ್ ಆಗಿರುವುದರಿಂದ ಇದಕ್ಕೆ 800 ಹಣವನ್ನು ಕೊಡಬಹುದು’ ಎಂದು ಹೇಳಿದ.

ಹೌದೇ! ಎಂದು ಅವರಿಗೆ ಧನ್ಯವಾದಗಳು ತಿಳಿಸಿ ಮತ್ತೊಂದು ಅಂಗಡಿಗೆ ಹೋದ ಆ ಯುವಕ ಅಂಗಡಿಯ ಮಾಲೀಕರ ಬಳಿ ಆ ವಾಚನ ಬೆಲೆಯ ಕುರಿತು ಪ್ರಶ್ನಿಸಿದ. ಅಂಗಡಿಯ ಮಾಲೀಕರು ಅತ್ಯಂತ ಸುಂದರ ವಿನ್ಯಾಸದ ಹಾಗೂ ಸುಸ್ಥಿತಿಯಲ್ಲಿರುವ ಇಂದಿಗೂ ಕೂಡ ಚಾಲನೆಯಲ್ಲಿರುವ ‘ಈ ವಾಚ್ ಗೆ ಸುಮಾರು ಒಂದು ಸಾವಿರ ರೂ ಹಣವನ್ನು ಕೊಡಬಹುದು. ಎಂದು ಹೇಳಿದರು.

‘ಇಲ್ಲ ಇಲ್ಲ ನಾನು ಇದನ್ನು ಮಾರುತ್ತಿಲ್ಲ ಇದರ ಬೆಲೆಯನ್ನು ತಿಳಿದುಕೊಳ್ಳಲು ಮಾತ್ರ ನಿಮ್ಮನ್ನು ಕೇಳಿದೆ ಎಂದು ಹೇಳಿದ ಯುವಕ ಮರಳಿ ಮನೆಗೆ ಬಂದ. ಒಂದು ಸಾಯಂಕಾಲ ತಂದೆ ಕಚೇ–ರಿಯಿಂದ ಬಂದ ಕೂಡಲೇ ಮಗ ತಂದೆಗೆ ಪೇಟೆ ಬೀದಿಯಲ್ಲಿ ತಾನು ವಾಚನ್ನು ತೋರಿಸಿದ ಹಾಗೂ ನಡೆದ ವಿಷಯವನ್ನು ಹೇಳಿದ. ಇದ–ಕ್ಕೆ ಸಂತಸ ವ್ಯಕ್ತಪಡಿಸಿದ ತಂದೆ ‘ನೋಡಿದೆ–ಯಾ ಮಗು ತುಂಬಾ ಹಳೆಯದಾದರೂ ಈ ವಾಚಿಗೆ ಬೆಲೆ ಇರಲು ಕಾರಣ ಇದು ಈಗಲೂ ನಡೆಯುತ್ತಿರುವುದು. ನಡೆಯದೆ ಹೋದಾಗಲೂ ಕೂಡ ಪ್ರತಿದಿನ ಸರಿ ಸುಮಾರು ಎರಡು ಬಾರಿ ಸಮಯವನ್ನು ತೋರಿಸುವ ಈ ವಾಚನ ಬದ್ಧತೆ ಅದ್ಭುತ. ನೀನು ನಾಳೆ ಮತ್ತೊಮ್ಮೆ ಪೇಟೆ–ಯ ಬೀದಿಗೆ ಹೋಗು. ಈ ದಿನ ನೀನು ಯಾರ ಬಳಿ ವಾಚನ್ನು ತೋರಿಸಿ ಅದರ ಬೆಲೆಯನ್ನು ಕೇಳಿದೆಯೋ ಅದೇ ವ್ಯಕ್ತಿಗಳ ಬಳಿ ಹೋಗಿ ಆ ವಾಚಿನಲ್ಲಿರುವ ಸಮಯದ ಬೆಲೆ ಎಷ್ಟೆಂದು ಕೇಳು’ ಎಂದು ಹೇಳಿದರು. ಈಗಾಗಲೇ ತುಸು ಉತ್ಸಾಹದಿಂದ ಓಡಾಡಿದ ಮಗನಿಗೆ ತಂದೆಯ ಮಾತು ಸವಾಲಿನಂತೆ ತೋರಿತು. ‘ಆಯ್ತು ಅಪ್ಪ ನಿಮಗೆ ಖಂಡಿತವಾಗಿಯೂ ಈ ಕೆಲಸವನ್ನು ಮಾಡಿಕೊಡುತ್ತೇನೆ’ ಎಂದು ಹೇಳಿದ.

ಮರುದಿನ ಮುಂಜಾನೆ ತಮ್ಮೆಲ್ಲ ಕೆಲಸ ಕಾರ್ಯಗಳನ್ನು ಬೇಗನೆ ಪೂರೈಸಿ ಸ್ನಾನ ಮಾಡಿ ತಿಂಡಿ ತಿಂದು ವಾಚನ್ನು ಜೇಬಿಗಿಳಿಸಿ ತಾನು ಮೊತ್ತ ಮೊದಲು ವಾಚನ್ನು ತೋರಿಸಿದ ಮಿಠಾಯಿ ಅಂಗಡಿಯ ವ್ಯಕ್ತಿಗೆ ಪುನಹ ವಾಚನ್ನು ತೋರಿಸಿ ವಾಚ್ ನ ಒಳಗಿರುವ ಸಮಯದ ಬೆಲೆಯನ್ನು ಕೇಳಲು ಆ ವ್ಯಕ್ತಿ ‘ಸಮಯಕ್ಕೆ ಯಾರೂ ಬೆಲೆ ಕಟ್ಟಲು ಸಾಧ್ಯವಿಲ್ಲ. ನೀನು ಅದೆಷ್ಟೇ ಕೋಟಿ ಹಣ ಕೊಟ್ಟರೂ ಕೂಡ ಅದು ನೀನು ಬದುಕಿನಲ್ಲಿ ಕಳೆದುಕೊಂಡ ಸಮಯವನ್ನು ಮರಳಿ ಪಡೆದುಕೊಳ್ಳಲು ಸಾಧ್ಯವಿಲ್ಲ’ ಎಂದು ಹೇಳಿದನು. ಆತನ ಮಾತನ್ನು ಅರ್ಥ ಮಾಡಿಕೊಂಡ ಬಾಲಕ ಹೌದು ಎಂಬಂತೆ ತಲೆದೂಗಿ ಮುಂದಿನ ಅಂಗಡಿಗೆ ಹೋದನು. ಮತ್ತೆ ಅದೇ ತನ್ನ ಗೊಂದಲವನ್ನು ವಿವರಿಸಿ ವಾಚನ ಸಮಯದ ಬೆಲೆಯನ್ನು ಕೇಳಿದಾಗ ಆ ಅಂಗಡಿಯ ಮಾಲೀಕ ‘ಸಮಯಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ ಇದುವರೆಗೂ ಯಾ–ರಿಗೂ ಸಮಯವನ್ನು ಖರೀದಿಸಲು ಸಾಧ್ಯವಾಗಿಲ್ಲ. ವೀರಾಧಿವೀರರೆಲ್ಲ ಕಾಲನ ಕಟ್ಟಳೆಗೆ ಓಗೊಟ್ಟರು. ಆ ಸಮಯವನ್ನು ಹಣದಿಂದ ಐಶ್ವರ್ಯದಿಂದ ಇಡೀ ಜಗತ್ತಿನ ಸಮೃದ್ಧಿಯಿಂದ ಅಳೆಯಲು ಸಾಧ್ಯವಿಲ್ಲ. ಅದೂ ಅಲ್ಲದೆ ನೀವು ಅದೆಷ್ಟೇ ಬೆಲೆ ಬಾಳುವ ವಾಚನ್ನು ಖರೀದಿಸಬಹುದು ಆದರೆ ಅದು ತೋ–ರಿಸುವ ಸಮಯವನ್ನು ಖರೀದಿಸಲು ಸಾಧ್ಯವಿಲ್ಲ ಅದು ನಿಮ್ಮ ಕೈಗೆ ದಕ್ಕುವುದೂ ಇಲ್ಲ’ ಎಂದು ಹೇಳಿದಾಗ ಬಾಲಕನಿಗೆ ಇದುವರೆಗೂ ತಾನು ವ್ಯರ್ಥವಾಗಿ ಕಳೆದ ಸಮಯದ ಕುರಿತು ಒಂದು ಪುಟ್ಟ ಯೋಚನೆ ತಲೆಯಲ್ಲಿ ಮೂಡಿತು. ಇದೀಗ ಕೊನೆಯದಾಗಿ ಕಾಲೆಳೆಯುತ್ತಾ ಆತ ಆ ರಸ್ತೆಯ ಮೂಲೆಯ ಕೊನೆಯಲ್ಲಿ ಒಂದು ಭಾಗದಲ್ಲಿ ಪುಟ್ಟ ಟೇಬಲ್ ಒಂದನ್ನು ಹಾಕಿಕೊಂಡು ಹೊಂಬಣ್ಣದ ಕೂದಲನ್ನು ಹಿಂದೆ ಸರಿಸುತ್ತಾ ತನ್ನ ಕನ್ನಡಕದ ಹಿಂದಿನ ಪುಟ್ಟ ಕಣ್ಣುಗಳನ್ನು ಮತ್ತಷ್ಟು ಕಿರಿದಾಗಿಸಿಕೊಂಡು ವಾಜೊಂದನ್ನು ರಿಪೇರಿ ಮಾಡುತ್ತಿದ್ದ ವ್ಯಕ್ತಿಯ ಬಳಿ ಬಂದನು. ಅಂಕಲ್ ಈ ವಾಚಿನಲ್ಲಿರುವ ಸಮಯದ ಬೆಲೆ ಹೇಳಲು ಸಾಧ್ಯವೇ ? ಎಂದು ಕೇಳಿದನು. ನಿಧಾನವಾಗಿ ತನ್ನ ಕನ್ನಡಕವನ್ನು ತೆಗೆದು ಬಾಲಕನನ್ನು ಗಮನಿಸಿದ ಆ ಮಧ್ಯ ವಯಸ್ಥ ವಾಚ್ ರಿಪೇರಿ ಯ ವ್ಯಕ್ತಿ ‘ಮಗು.. ಸಮಯಕ್ಕೆ ಯಾವುದೇ ಬೆಲೆ ತರಲು ಸಾಧ್ಯವಿಲ್ಲ. ಸಮಯವನ್ನು ಕಟ್ಟಿಹಾಕಲು ಕೂಡ ಸಾಧ್ಯವಿಲ್ಲ ಅದು ತಂತಾನೇ ಮುಂದೆ ಓಡುತ್ತಿರುತ್ತದೆ. ‘ಇಲ್ಲ ಸಂಪತ್ತನ್ನು ಕಳೆದುಕೊಂಡ ವ್ಯಕ್ತಿ ತನ್ನ ಬುದ್ಧಿಶಕ್ತಿಯನ್ನು ಉಪಯೋಗಿಸಿ ಸಂಪತ್ತಿನ ಸೃಷ್ಟಿಯನ್ನು ಮಾಡಬಹುದು. ಸಾಕಷ್ಟು ಹಣವನ್ನು ಖರ್ಚು ಮಾಡಿ ಬೆಳೆಸಿದ ಬೇವು ಹಾಗೂ ತೆಂಗಿನ ತೋಟಗಳನ್ನು ಆತ ಪುನರ್ನಿಸಬಹುದು. ಸುಟ್ಟುಹೋದ ಅಂಗಡಿಯನ್ನು ಕೂಡ ಮತ್ತೆ ನಿರ್ಮಿಸಬಹುದು ಆದರೆ ಬದುಕಿನಲ್ಲಿ ಒಂದು ಬಾರಿ ಕಳೆದುಕೊಂಡ ಸಮಯವನ್ನು ಮತ್ತೆ ಮರಳಿ ಪಡೆಯಲು ಸಾಧ್ಯವೇ ಆಗುವುದಿಲ್ಲ... ನಮ್ಮ ಬದುಕಿನ ಕೇವಲ ಕೆಲವೇ ಕೆಲವು ನಿಮಿಷಗಳನ್ನು ಕೂಡ ನಮಗೆ ಮರಳಿ ಪಡೆಯಲು ಸಾಧ್ಯವಿಲ್ಲ ಎಂದು ಹೇಳಿದ.

ಯುವಕನ ತಲೆ ನಾಚಿಕೆಯಿಂದ ಮತ್ತಷ್ಟು ತಗ್ಗಿತು. ಆತನಿಗೆ ಬೇರೆಲ್ಲೂ ಹೋಗಲು ಮನಸ್ಸಾಗಲಿಲ್ಲ ತನ್ನ ವಾಚನ್ನು ಜೇಬಿನಲ್ಲಿ ಇಟ್ಟುಕೊಂಡ ಆತ ಮರಳಿ ಮನೆಗೆ ಬಂದ. ತುಂಬಾ ಹೊತ್ತಿನವರೆಗೆ ಸುಮ್ಮನೆ ಕುಳಿತಿದ್ದ. ಎಂದಿನಂತೆ ಸಂಜೆ ತಂದೆ ಮನೆಗೆ ಬಂದಾಗ ಮಗನ ಮಾನವಾದ ಮುಖವನ್ನು ನೋಡಿ ಏನಾಯಿತು ?ಎಂದು ಕೇಳಿದರು. ಅಪ್ಪ ನನ್ನಿಂದ ದೊಡ್ಡ ಪ್ರಮಾದವಾಯಿತು ನನಗೆ ಸಮಯದ ಮಹತ್ವದ ಅರಿವೇ ಆಗಲಿಲ್ಲ ನನ್ನ ಬದುಕಿನ ಬಹಳಷ್ಟು ಸಮಯವನ್ನು ನಾನು ಸುಮ್ಮನೆ ಕುಳಿತು ಕಾಲ ಕಳೆದೆ. ಒಂದೇ ಒಂದು ಕ್ಷಣವನ್ನು ವ್ಯಯ ಮಾಡದೆ ನನ್ನ ಬದುಕನ್ನು ನಾನು ರೂಪಿಸಿಕೊಂಡಿದ್ದರೆ ಇಂದು ಆತ್ಮ ನಿರ್ಭರವಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತಿತ್ತು. ನನ್ನನ್ನು ಕ್ಷಮಿಸಿ ಎಂದು ತಂದೆಯನ್ನು ಕೇಳಿಕೊಂಡ. ಮಗನ ದನಿಯಲ್ಲಿದ್ದ ನೈಜ–ತೆಯನ್ನು ಗುರುತಿಸಿದ ತಂದೆ ಮಗು ಸಮಯ ಎಂಬುದು ನಮ್ಮೆಲ್ಲರಿಗೂ ಆ ದೇವರು ಕೊಟ್ಟಿರುವ ಅತ್ಯದ್ಭುತವಾದ ಕೊಡುಗೆ, ಉಚಿತವಾಗಿಯೇ ಕೊಟ್ಟಿರಬಹುದು ಆದರೆ ಅದು ಬಹು ಅಮೂಲ್ಯವಾದದು. ಬಡವ ಶ್ರೀಮಂತ ಮೇಲು–ಕೀಳು ಎಂಬ ಯಾವ ಭೇದವಿಲ್ಲದೆ ನಾವೆಲ್ಲರೂ ಪ್ರತಿದಿನವೂ ನಮ್ಮ ಬದುಕಿನಲ್ಲಿ 24 ಗಂಟೆಗಳನ್ನು ಆ ದೇವರಿಂದ ಪಡೆಯುತ್ತೇವೆ ಎಂಬುದು ನಮ್ಮ ಬಾಳಿನ ಅತ್ಯಂತ ಒಳ್ಳೆಯ ವಿಷಯ. ಒಬ್ಬರಿಗೆ ಹೆಚ್ಚು ಒಬ್ಬರಿಗೆ ಕಡಿಮೆ ಎಂಬ ತಾರತಮ್ಯವಿಲ್ಲದೇ ನಮಗೆಲ್ಲರಿಗೂ ಏಕ ಸಮನಾಗಿ ದೊರೆಯುವ ವಿಷಯ ಸಮಯ.

ಸಮಯ ಎಂಬುದು ನಮ್ಮಬಾಳಿನಲ್ಲಿ ಒಳ್ಳೆಯದೇ ಇರಲಿ, ಕೆಟ್ಟದ್ದೇ ಬರಲಿ ತನ್ನ ಚಲನೆಯನ್ನು ಎಂದಿಗೂ ನಿಲ್ಲಿಸುವುದಿಲ್ಲ. ಹಿಂದೆ ತಿರುಗಿ ನೋಡದ ಹಿಮ್ಮುಖ ಚಲನೆಯನ್ನು ಒಲ್ಲದ ಕೇವಲ ಮುಂದೆ ಸಾಗುವ ಏಕಮುಖ ಪ್ರಯಾಣ ಈ ಕಾಲದ್ದು ಎಂದು ಹೇಳಿದಾಗ ಮಗ ತಂದೆಯ ಮಾತಿಗೆ ತಲೆ ಆಡಿಸಿದ.

ಒಂದಿಷ್ಟು ಹೀಯಾಳಿಸದ ಅತ್ಯಂತ ಮೆಲು ಮಾತುಗಳಲ್ಲಿ ಬದುಕಿನ ಹಾಗೂ ಸಮಯದ ಮಹತ್ವವನ್ನು ತಿಳಿ ಹೇಳಿದ ತಂದೆಯ ಮಾತುಗಳು ಆತನ ಮನಸ್ಸಿನ ಮೇಲೆ ತೀವ್ರ ಪರಿಣಾಮವನ್ನು ಉಂಟು ಮಾಡಿದವು..ಒಣ ನೆಲಕ್ಕೆ ನೀರಿನ ಸಿಂಚನ ವಾದಂತೆ ಆತನ ಮನಸ್ಸಿನ ಬರಡುತನಕ್ಕೆ ಅಮೃತ ಸಿಂಚನವಾದಂತಾಯಿತು. ತಂದೆಯ ಮಾತುಗಳು ಆತನ ಹೃದಯವನ್ನು ತಟ್ಟಿದಂತಾಗಿ ಅರಿವು ಮೂಡಿತು. ಹೌದಪ್ಪ.. ನಾನು ಸಮಯದ ಮಹತ್ವವನ್ನು ಅರಿಯದೆ ಅದೆಷ್ಟು ದಿನಗಳನ್ನು, ತಿಂಗಳುಗಳನ್ನು ಸುಮ್ಮನೆ ಕಳೆದ ಇನ್ನು ಮುಂದೆ ನಾನು ನನ್ನ ಸಮಯವನ್ನು ಸರಿಯಾದ ದಿಕ್ಕಿನಲ್ಲಿ ಬಳಸಿ ಜೀವನದಲ್ಲಿ ಅತ್ಯುತ್ತಮವಾದ ಸಾಧನೆಯನ್ನು ಮಾಡಲು ಬಳಸುತ್ತೇನೆ ಎಂದು ಹೇಳಲು ತಂದೆ ಆತನ ಬೆನ್ನನ್ನು ಅತ್ಯಂತ ಅಪ್ಯಾಯಮಾನದಿಂದ ತಟ್ಟಿದರು.

ಹೌದಲ್ಲವೇ ಸ್ನೇಹಿತರೆ ? ನಾವೆಲ್ಲರೂ ಸಮಯದ ಕೈ ಗೊಂಬೆಗಳು ಎಂದು ಭಾವಿಸುತ್ತೇವೆ. ನಮ್ಮ ಬದುಕಿನಲ್ಲಿ ನಾವು ಸಮಯವನ್ನು ಹೇಗೆ ಬಳಸುತ್ತೇವೆ ಎಂಬುದರ ಮೇಲೆ ನಮ್ಮ ಯಶಸ್ಸು ನಿಲ್ಲುತ್ತದೆ. ಇರುವ ಸ್ವಲ್ಪವೇ ಸಮಯದಲ್ಲಿ ನಮ್ಮ ಬದುಕನ್ನು ರೂಪಿಸಿಕೊಳ್ಳುವ ಕಲೆಯನ್ನು ನಾವು ಖಂಡಿತವಾಗಿಯೂ ಕಲಿಯಬೇಕು ಹಾಗೆ ಮಾಡಿದಾಗ ಮಾತ್ರ ನಾವು ವಿಶೇಷ ವ್ಯಕ್ತಿಯಾಗಿ ರೂಪುಗೊಳ್ಳಲು ಸಾಧ್ಯವಾಗುತ್ತದೆ. ನಾವು ಸಮಯದ ಕೈ ಬೊಂಬೆಗಳು ನಿಜ ಆದರೆ ನಮ್ಮ ಸಮಯವನ್ನು ನಾವು ಸರಿಯಾಗಿ ಬಳಸಿಕೊಂಡರೆ ಸಮಯ ನಮ್ಮ ಕೈ ಗೊಂಬೆಯಾಗಿ ನಮ್ಮ ಬದುಕನ್ನು ಅದ್ಭುತವಾಗಿ ರೂಪಿಸುವಲ್ಲಿ ಸಹಾಯಕವಾಗುತ್ತದೆ ಅಲ್ಲೇ ಸ್ನೇಹಿತರೆ ?

**ವೀಣಾ ಹೇಮಂತ್ ಗೌಡ ಪಾಟೀಲ್**

# ಎರಡು ದಿನಗಳ ಪುನಶ್ಚೇತನ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ



ಬಳ್ಳಾರಿ,20– ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಕಾನೂನು ನೆರವು ತಲುಪಿಸುವ ನಿಟ್ಟಿನಲ್ಲಿ ಪ್ಯಾರಾ ಲೀಗಲ್ ಸ್ವಯಂಸೇವಕರು ನ್ಯಾಯ ವಂಚಿತರ ಧ್ವನಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಸಿದ್ದಲಿಂಗ ಪ್ರಭು ಅವರು ಕರೆ ನೀಡಿದರು.

ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬಳ್ಳಾರಿ ಹಾಗೂ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ನಗರದ ತಾಳೂರು ರಸ್ತೆಯ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ಮೊದಲನೇ ಮಹಡಿಯ ಸಭಾಂಗಣದಲ್ಲಿ ಬಳ್ಳಾರಿ ಜಿಲ್ಲೆಯ ಪ್ಯಾರಾ ಲೀಗಲ್ ಸ್ವಯಂ ಸೇವಕರಿಗೆ ಹಮ್ಮಿಕೊಂಡಿದ್ದ ಎರಡು ದಿನಗಳ ಪುನಶ್ಚೇತನ ತರಬೇತಿ ಕಾರ್ಯಕ್ರಮವನ್ನು ಗುರುವಾರ ಉದ್ಘಾಟಿಸಿ ಅವರು ಮಾತನಾಡಿದರು.

ಸಂವಿಧಾನದ ಆಶಯದಂತೆ ಸಮಾಜದ ಪ್ರತಿಯೊಬ್ಬ ನಾಗರಿಕನಿಗೂ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ನ್ಯಾಯ ಒದಗಿಸುವುದು ಕಾನೂನು ಸೇವಾ ಪ್ರಾಧಿಕಾರದ ಮೂಲ ಉದ್ದೇಶವಾಗಿದ್ದು, ಈ ನಿಟ್ಟಿನಲ್ಲಿ ಪ್ಯಾರಾ ಲೀಗಲ್ ಸ್ವಯಂಸೇವಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಕೇವಲ ವಿದ್ಯಾವಂತರು ಅಥವಾ ಹಣವಂತರಿಗೆ ಮಾತ್ರವಲ್ಲದೆ ಬಡವರು, ನಿರ್ಗತಿಕರು ಮತ್ತು ಅಸಹಾಯಕರ ಪರವಾಗಿ ನಿಂತು ಅವರಿಗೆ ಕಾನೂನು ನ್ಯಾಯ ಒದಗಿಸುವುದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಗುರಿಯಾಗಿದೆ. ನೆರವು ಕೋರಿ ಬರುವ ಸಂತ್ರಸ್ತರು ಹಾಗೂ ದುರ್ಬಲರು ಹಂಚಿಕೊಳ್ಳುವ ವೈಯಕ್ತಿಕ ವಿಚಾರಗಳನ್ನು ಅತ್ಯಂತ ಗೌಪ್ಯವಾಗಿಡುವುದು ಪ್ರತಿಯೊಬ್ಬ ಸ್ವಯಂಸೇವಕರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಮುಖ್ಯವಾಗಿ ಸಹಾಯಕ್ಕಾಗಿ ಬರುವ ಜನರಿಗೆ ಯಾವುದೇ ಕಾರಣ–ಕ್ಕೂ ಹುಸಿ ಅಥವಾ ಸುಳ್ಳು ಭರವಸೆಗಳನ್ನು ನೀಡದೆ, ಕಾನೂನಿನ ಚೌಕಟ್ಟಿನಲ್ಲಿ ಸೂಕ್ತ ಮಾರ್ಗದರ್ಶನ ನೀಡಿ ಪ್ರಾಧಿಕಾರಕ್ಕೆ ಕೊಂಡೊಯ್ಯುವ ಸೇತುವೆಯಾಗಿ ಕೆಲಸ ಮಾಡಬೇಕು. ಉತ್ತಮ ವ್ಯಕ್ತಿಯಾಗಲು ಸ್ವಚ್ಛ ಕೈಗಳು ಮತ್ತು ಸ್ಪಷ್ಟ ಮಾತು ಇರಬೇಕು ಎಂಬ ಮೌಲ್ಯಗಳನ್ನು ಸ್ವಯಂಸೇವಕರು ಕಡ್ಡಾಯವಾಗಿ ಪಾಲಿಸಬೇಕು ಎಂದರು.

ಕಾನೂನು ನಿಂತ ನೀರಲ್ಲ, ಅದು ನಿರಂತರ ಬದಲಾವಣೆಗೆ ಒಳಪಡುತ್ತದೆ. ಹಾಗಾಗಿ ಸ್ವಯಂಸೇವಕರು ಹೊಸ ಕಾಯ್ದೆಗಳು ಮತ್ತು ತಿದ್ದುಪಡಿಗಳ ಬಗ್ಗೆ ಸದಾ ಜಾಗೃತರಾಗಿರಬೇಕು. ಇಂತಹ ತರಬೇತಿಗಳನ್ನು ಸಮರ್ಪಕವಾಗಿ ಬಳಸಿಕೊಂಡು, ಅನುಮಾನಗಳನ್ನು ಪರಿಹರಿಸಿಕೊಂಡು ಸಮಾಜಮುಖಿ ಸೇವೆಗೆ ಸಜ್ಜಾಗುವಂತೆ ಸ್ವಯಂಸೇವಕರಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ತರಬೇತುದಾರರಾದ ಹೆಚ್.ವೆಂಕಟೇಶ್ ಅವರು ತರಬೇತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಸೇರಿದಂತೆ ಜಿಲ್ಲಾ ನ್ಯಾಯಾಲಯದ ವಕೀಲರು, ಅಧಿಕಾರಿ–ಸಿಬ್ಬಂದಿ ವರ್ಗ ಹಾಗೂ ಪ್ಯಾರಾ ಲೀಗಲ್ ಸ್ವಯಂ ಸೇವಕರು ಉಪಸ್ಥಿತರಿದ್ದರು.

# ರಾಜ್ಯ ಮಟ್ಟದ ಪರಿಷತ್ ಸಭೆ ಹಾಗೂ ನಶಾಮುಕ್ತ ಭಾರತ ಅಭಿಯಾನ




ಬಳ್ಳಾರಿ, 20– ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ, ಜಿಲ್ಲಾ ಶಾಖೆ, ಬಳ್ಳಾರಿ ವತಿಯಿಂದ ಬಳ್ಳಾರಿ ನಗರದ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಮಂಗಳವಾರ "ರಾಜ್ಯ ಮಟ್ಟದ ಪರಿಷತ್ ಸಭೆ" ನಡೆಯಿತು.

ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಸಿದ್ದಲಿಂಗ ಪ್ರಭು ಅವರು ಉದ್ಘಾಟಿಸಿ ಮಾತನಾಡಿ, ನಿವೃತ್ತ ನೌಕರರು ತಮ್ಮ ನಿವೃತ್ತಿ ಜೀವನವನ್ನು ಸುಖ–ಸಂತೋಷದಿಂದ ಬಾಳಲಿ ಎಂದು ಶುಭ ಹಾರೈಸಿದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ರಾಜ್ಯಾಧ್ಯಕ್ಷ ಡಾ.ಎಲ್. ಭೈರಪ್ಪ ಅವರು ಮಾತನಾಡಿ, 'ಸಂಧ್ಯಾ ಸುರಕ್ಷಾ' ಯೋಜನೆ ಜಾರಿ, 70 ವರ್ಷ ಪೂರೈಸಿದ ಪಿಂಚಣಿದಾರರಿಗೆ ಶೇ.10ರಷ್ಟು ಪಿಂಚಣಿ ಹೆಚ್ಚಳ ಹಾಗೂ ಎಲ್ಲಾ ಜಿಲ್ಲಾ ಮತ್ತು ತಾಲೂಕು ಕೇಂದ್ರಗಳಲ್ಲಿ ನಿವೃತ್ತ ನೌಕರರ ಸಂಘದ ಕಟ್ಟಡ ನಿರ್ಮಾಣಕ್ಕೆ ಶ್ರಮಿಸುವುದಾಗಿ ತಿಳಿಸಿದರು.

*ನಶಾಮುಕ್ತ ಭಾರತ ಅಭಿಯಾನ ಪ್ರತಿಜ್ಞಾವಿಧಿ:* ಕಾರ್ಯಕ್ರಮದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಆದೇಶದಂತೆ 'ನಶಾಮುಕ್ತ ಭಾರತ ಅಭಿಯಾನ'ದಡಿ ಮಾದಕ ದ್ರವ್ಯ ವಿರೋಧಿ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಶಾಲಾ–ಕಾಲೇಜುಗಳಲ್ಲಿ ಕ್ರೀಡಾ ಚಟುವಟಿಕೆ, ಸಸಿ ನೆಡುವ ಕಾರ್ಯಕ್ರಮ ಮತ್ತು ಜಿಲ್ಲೆಯಾದ್ಯಂತ ಪ್ರತಿಜ್ಞಾವಿಧಿ ಸ್ವೀಕರಿಸುವ ಕುರಿತು ನಿರ್ಣಯಿಸಲಾಯಿತು.

*ಪುಸ್ತಕ ಬಿಡುಗಡೆ:* ಮಾಜಿ ಖಜಾಂಚಿ ಚೌಡಯ್ಯ ಅವರು ರಚಿಸಿದ "ಕಿತ್ತೂರು ಕಿಡಿ" ಹಾಗೂ "ಬೆಳವಡಿ ಯಲ್ಲಯ್ಯ" ಕೃತಿಗಳನ್ನು ಈ ಸಂದರ್ಭದಲ್ಲಿ ಬಿಡುಗಡೆ ಮಾಡಲಾಯಿತು.

*ಸನ್ಮಾನ ಮತ್ತು ಸಾಂಸ್ಕೃತಿಕ ವೈಭವ:* 75 ವರ್ಷ ಪೂರೈಸಿದ ಬಳ್ಳಾರಿ ಜಿಲ್ಲೆಯ ನಿವೃತ್ತ ನೌಕರರನ್ನು ಹಾಗೂ ಕಾರ್ಯಕ್ರಮಕ್ಕೆ ಸಹಕರಿಸಿದ ದಾನಿಗಳನ್ನು ಸತ್ಕರಿಸಲಾಯಿತು. ಲಕ್ಷ್ಮಿ ಕಲಾ ಕ್ಷೇತ್ರದ ಮಕ್ಕಳಿಂದ ಸಾಂಸ್ಕೃತಿಕ ನೃತ್ಯ, ಜನಪದ ಗಾಯಕರಾದ ಎಮ್ಮಿಗನೂರು ಜಡೇಶ್, ನಾಗೇಂದ್ರ ಬೆಂಗಳೂರು ಮತ್ತು ದತ್ತ ಗುರುನಾಥ್ ರವರಿಂದ ಗೀತೆಗಳ ಗಾಯನ ಜರುಗಿತು.

ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಯನ್ನು ಜಿಲ್ಲಾಧ್ಯಕ್ಷ ಡಾ. ಎಂ.ಟಿ. ಮಲ್ಲೇಶ್ ಅವರು ನುಡಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ರಾಜೇಶ್ ಎನ್. ಹೊಸಮನೆ, ನಿವೃತ್ತ ನ್ಯಾಯಾಧೀಶ ಹೆಚ್. ರಾಮು, ಸಂಘದ ಪ್ರಧಾನ ಕಾರ್ಯದರ್ಶಿ ರಂಗೇಗೌಡ, ಖಜಾಂಚಿ ಎಸ್.ಎಂ. ಆನಂದಪ್ಪ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಕೇಂದ್ರ ಹಾಗೂ ಜಿಲ್ಲಾ ಸಂಘದ ಪದಾಧಿಕಾರಿಗಳು, 500ಕ್ಕೂ ಹೆಚ್ಚು ನಿವೃತ್ತ ನೌಕರರು ಭಾಗವಹಿಸಿದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ನಿವೃತ್ತ ಹಿರಿಯ ಮುಖ್ಯ ಗುರುಗಳಾದ ಮೆಹತಾಬ್ ಹಾಗೂ ಎಂ. ಶಿವಾಜಿರಾವ್ ಸ್ವಾಗತಿಸಿದರು.

# ಮಹಿಳೆಯ ಮೇಲಿನ ದೌರ್ಜನ್ಯದ ವಿರುದ್ಧ ಸಂಘಟಿತ ಹೋರಾಟ : ಸುಮಂಗಲಾ ಸಿಂಪಿ



ಗಂಗಾವತಿ, 20–ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗಾಗಿ ಸರ್ಕಾರದ ಹಲವು ಕಾನೂನುಗಳು ಇದ್ದರೂ ಸಹ ಸಮಾಜದಲ್ಲಿ ನಿರಂತರ ದೌರ್ಜನ್ಯ, ದಬ್ಬಾಳಿಕೆ, ಸೇರಿದಂತೆ ಅನೇಕ ರೀತಿಯ ಅನ್ಯಾಯ ನಡೆಯುತ್ತಿದೆ, ಮಹಿಳೆಯರ ಸಮಸ್ಯೆಗಳು, ಮತ್ತು ಅವುಗಳ ಪರಿಹಾರ, ರಕ್ಷಣೆಗೆ ಸಂಬಂಧಿಸಿದಂತೆ ಮಹಿಳೆಯರ ಧ್ವನಿಯಾಗಿ ಸಂಘಟಿತ ಹೋರಾಟ ರೂಪಿಸಲಾಗುವುದು ಎಂದು ಕರ್ನಾಟಕ ಸ್ವಾಭಿಮಾನಿ ಮಹಿಳಾ ವೇದಿಕೆ ರಾಜ್ಯ ಖಜಾಂಚಿ, ಸಾಮಾಜಿಕ ಕಾರ್ಯಕರ್ತೆ ಸುಮಂಗಲಾ ಸಿಂಪಿ ಹೇಳಿದರು.

ಮಹಿಳಾ ದೌರ್ಜನ್ಯ ವಿರುದ್ಧ ಧ್ವನಿ ಎತ್ತಲು ಹಾಗೂ ಮಹಿಳಾ ಸಬಲೀಕರಣಕ್ಕಾಗಿ ವೇದಿಕೆ ರಚಿಸಲಾಗಿದೆ ಎಂದು ಕರ್ನಾಟಕ ಸ್ವಾಭಿಮಾನಿ ಮಹಿಳಾ ವೇದಿಕೆ ರಾಜ್ಯಾಧ್ಯ–ಕ್ಷೆ ವಿಜಯಲಕ್ಷ್ಮಿ ಅಸೂಟಿ ಹೇಳಿದರು.

ನಗರದ ಖಾಸಗಿ ಹೋಟೆಲ್ ನಲ್ಲಿ ನಡೆದ ಕರ್ನಾಟಕ ಸ್ವಾಭಿಮಾನಿ ಮಹಿಳಾ ವೇದಿಕೆ ಹಾಗೂ ಕರ್ನಾಟಕ ಯುವಶಕ್ತಿ ಸಂಘಟನೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮಹಿಳೆಯರ ಹಾಗೂ ಮಕ್ಕಳ ಸಮಸ್ಯೆಗಳ ಕುರಿತಾಗಿ ಹಾಗೂ ಅವುಗಳ ಪರಿಹಾರ ಸೇರಿದಂತೆ ಸೂಕ್ತ ಕಾನೂನುಕ್ರಮಗಳಿಗಾಗಿ ಆಗ್ರಹಪಡಿಸಿ ಜಿಲ್ಲೆಯ ಸಚಿವರು, ಸಂಸದರು, ಶಾಸಕರು ಹಾಗೂ ಹಿರಿಯ ಅಧಿಕಾರಿಗಳನ್ನು ನಿಯೋಗದ ಮೂಲಕ ಭೇಟಿ ಮಾಡಿ ಮನವಿ ಸಲ್ಲಿಸಲಾಗುವುದು ಎಂದರು.

ಕರ್ನಾಟಕ ಸ್ವಾಭಿಮಾನಿ ಮಹಿಳಾ ವೇದಿಕೆಯು ಮಹಿಳೆಯ ದ್ವನಿಯಾಗಿ ಸಂಘಟಿತ ಹೋರಾಟಗಳ ಮೂಲಕ ಅನ್ಯಾಯದ ವಿರುದ್ಧ ಹೋರಾಟ, ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಿದೆ, ಜಿಲ್ಲೆಯಾದ್ಯಂತ ವೇದಿಕೆಯನ್ನು ಸಂಘಟಿಸಿ ತಾಲೂಕವಾರು ಸಮಿತಿ ರಚಿಸಲಾಗುವುದು, ಸರ್ಕಾರ ಮಹಿಳೆಯರ ಹಾಗೂ ಮಕ್ಕಳ ರಕ್ಷಣೆಗಾಗಿ ಇರುವ ಕಾನೂನು ಹಾಗೂ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು, ಮಹಿಳೆಯರ ಸಬಲೀಕರಣ, ಮತ್ತು ಸಮಾಜದಲ್ಲಿ ಆಗುತ್ತಿರುವ ಅನ್ಯಾಯದ ವಿರುದ್ಧ ಧ್ವನಿ ಎತ್ತಲು ಒಂದು ವೇದಿಕೆಯ ಅವಶ್ಯಕತೆ ಇತ್ತು ಎಂದು ತಿಳಿಸಿದರು.

ಮಹಿಳೆಯರು ಎಲ್ಲಾ ಕ್ಷೇತ್ರದಲ್ಲಿ ಸಾಧನೆ ಮಾಡಿದ್ದಾರೆ. ಆದರೆ, ವೇದಿಕೆ ಸಿಕ್ಕಿಲ್ಲ. ಆದ್ದರಿಂದ ಮಹಿಳೆಯರಿಗಾಗಿಯೇ ಕರ್ನಾಟಕ ಸ್ವಾಭಿಮಾನಿ ಮಹಿಳಾ ವೇದಿಕೆ ರಚಿಸಲಾಗಿದೆ. ಮಹಿಳೆಯರು ಸ್ವಾಭಿಮಾನದಿಂದ ಬದುಕುತ್ತಿದ್ದಾರೆ. ಮಹಿಳೆಯ ಮೇಲಿನ ದೌರ್ಜನ್ಯದ ವಿರುದ್ಧ ಧ್ವನಿ ಎತ್ತಲು ವೇದಿಕೆ ನಿರ್ಮಿಸಲಾಗಿದೆ ಎಂದು ಕರ್ನಾಟಕ ಸ್ವಾಭಿಮಾನಿ ಮಹಿಳಾ ವೇದಿಕೆ ಸಂಸ್ಥಾಪಕ ಅಧ್ಯಕ್ಷೆ ವಿಜಯಲಕ್ಷ್ಮಿ ಆಸೋಟಿ ಹೇಳಿದರು.

ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಸ್ವಾಭಿಮಾನಿ ಮಹಿಳಾ ವೇದಿಕೆ ಜಿಲ್ಲಾ ಅಧ್ಯ–ಕ್ಷೆ ಸಿ.ಹೆಚ್.ಪದ್ಮಾವತಿ ಮಾತನಾಡಿ ಪ್ರತಿಯೊಬ್ಬ ಮಹಿಳೆ ಸ್ವಾಭಿಮಾನಿಯಾಗಬೇಕು. ಸ್ವಾತಂತ್ರ್ಯ ಪೂರ್ವ ಹಾಗೂ ನಂತರ ಮಹಿಳೆಯರಿಂದಲೇ ಕ್ರಾಂತಿ ಆಗಿದೆ. ಕೊಪ್ಪಳ ಜಿಲ್ಲೆಗೆ ವೇದಿಕೆಯಿಂದ ಮಹಿಳಾ ಸಬಲೀಕರಣ ಆಗಬೇಕು. ಮಹಿಳಾ ದೌರ್ಜನ್ಯ ತಡೆಗಟ್ಟುವಟಲ್ಲಿ ಸಂಘಟನೆ ಮುಂದಾಗಲಿದೆ, ಇದಕ್ಕೆ ಎಲ್ಲರ ಸಹಕಾರ ಬೆಂಬಲ ಬೇಕು ಎಂದು ಹೇಳಿದರು.

ವೇದಿಕೆಯ ರಾಜ್ಯ ಖಜಾಂಚಿ ಸುಮಂಗಲಾ ಸಿಂಪಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ವೇದಿಕೆಯ ರೂಪರೇಶ, ಕಾರ್ಯಕ್ರಮಗಳ ಕುರಿತಾಗಿ ವಿವರಿಸಿದರು. ಸಭೆಯಲ್ಲಿ ರವಿಕುಮಾರ ನಾಯಕ, ಮಂಜುನಾಥ ನಾಯಕ, ಅಮೀನಾಬೇಗಂ, ನಿರ್ಮಲಾ ಎಸ್., ಸುಜಾತ, ಶೇಕ್ಷಾವಲಿ, ಪಾರ್ವತಿ ಪಾಟೀಲ್, ರಾಜೇಶ್ವರಿ, ಅಪರ್ಣ, ಕಮಲಾಕ್ಷಿ, ಭಾರತಿ ಆಲಗೂರ್, ಎ. ರತ್ನಮ್ಮ, ಲಕ್ಷ್ಮೀ ಶಿವಶಿಂಪಗೇರ, ಶಿವಕುಮಾರ್, ಸೇರಿದಂತೆ ಇತರರು ಇದ್ದರು

# ಸದ್ಭಾವನಾ ದಿನ: ಪ್ರತಿಜ್ಞಾ ವಿಧಿ ಸ್ವೀಕಾರ



ಕೊಪ್ಪಳ, 20– ಸದ್ಭಾವನಾ ದಿನದ ಅಂಗವಾಗಿ ಜಿಲ್ಲಾಡಳಿತ ಭವನದದಲ್ಲಿ ಗುರುವಾರ ಪ್ರತಿಜ್ಞಾ ವಿಧಿ ಸ್ವೀಕಾರ ಕಾರ್ಯಕ್ರಮ ನಡೆಯಿತು.

ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಪ್ರತಿಜ್ಞೆ ಬೋಧಿಸಿದರು.

ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳು ಹಾಗೂ ಜಿಲ್ಲಾಧಿಕಾರಿ ಕಛೇರಿಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದು,'ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧ ಭಾವವಿಲ್ಲದೇ ಭಾರತದ ಎಲ್ಲಾ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲಾ ಬೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಪ್ರತಿಜ್ಞೆ ಮಾಡುತ್ತೇನೆ" ಎಂಬ ಪ್ರತಿಜ್ಞೆಯನ್ನು ಸ್ವೀಕರಿಸಿದರು.

# ಡಿ.ದೇವರಾಜ ಅರಸು ಜನ್ಮ ದಿನಾಚರಣೆ: ಅದ್ದೂರಿ ಮೆರವಣಿಗೆ



ಕೊಪ್ಪಳ, 20– ಹಿಂದುಳಿದ ವರ್ಗಗಳ ಧೀಮಂತ ನಾಯಕ, ಸಾಮಾಜಿಕ ಪರಿವರ್ತನೆಯ ಹರಿಕಾರ ಹಾಗೂ ಕರ್ನಾಟಕ ರಾಜ್ಯದ ಮಾಜಿ ಮುಖ್ಯ ಮಂತ್ರಿಗಳಾದ ದಿವಂಗತ ಡಿ.ದೇವರಾಜ ಅರಸು ರವರ 111ನೇ ಜನ್ಮ ದಿನಾಚರಣೆ ಅಂಗವಾಗಿ ಗುರುವಾರ (ಆ. 20ರಂದು) ಜಿಲ್ಲಾ ಕೇಂದ್ರದಲ್ಲಿ ಡಿ.ದೇವರಾಜ ಅರಸು ರವರ ಭಾವಚಿತ್ರ ಮೆರವಣಿಗೆಯೂ ಅದ್ದೂರಿಯಾಗಿ ನಡೆಯಿತು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮದ ಸಂಯುಕ್ತಾಶ್ರಯದಲ್ಲಿ ನಗರದ ಗವಿಶ್ರೀಮಠದ ಆವರಣದಿಂದ ಸಾಹಿತ್ಯ ಭವನದ ವರೆಗೆ ಹಮ್ಮಿಕೊಳ್ಳಲಾಗಿದ್ದ ಮೆರವಣಿಗೆಗೆ ಶ್ರೀ ಅಭಿನವ ಗವಿಸಿದ್ದೇಶ್ವರ ಸ್ವಾಮಿಗಳು ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಪ್ರಸನ್ನ ಗಡಾದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ.ರಾಮ್ ಎಲ್. ಅರಸಿದ್ದಿ, ಕೊಪ್ಪಳ ತಹಶೀಲ್ದಾರ ಬಸವರಾಜ ತನ್ನಳ್ಳಿ, ಕೊಪ್ಪಳ ತಾ.ಪಂ. ಇಓ ದುಂಡಪ್ಪ ತುರಾದಿ, ಕೊಪ್ಪಳ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿ ನಾಗಮಣಿ ಹೊಸಮನಿ, ಕೊಪ್ಪಳ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ನಾಗರತ್ನ ಸೇರಿದಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಇತರೆ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಡಿ. ದೇವರಾಜ ಅರಸುರವರ ಭಾವಚಿತ್ರದ ಮೆರವಣಿಗೆಯು ಶ್ರೀ ಗವಿಸಿದ್ದೇಶ್ವರ ಮಠದಿಂದ ಪ್ರಾರಂಭಗೊಂಡು, ಗಡಿಯಾರ ಕಂಬ, ಜವಾಹರ ರಸ್ತೆ ಮೂಲಕ ಸಾಹಿತ್ಯ ಭವನದವರೆಗೆ ವಿಜೃಂಭಣೆಯಿಂದ ನಡೆಯಿತು. ಮಹಿಳಾ ಕಲಾ ತಂಡಗಳಿಂದ ಡೋಳು ಕುಣಿತ ಮತ್ತು ಯುವ ಕಲಾ ತಂಡಗಳ ಪ್ರದರ್ಶನ ಸಾರ್ವಜನಿಕರ ಗಮನ ಸೆಳೆಯಿತು. ಮೆರವಣಿಗೆಯಲ್ಲಿ ವಿವಿಧ ವಸತಿ ಶಾಲೆಗಳ ಮತ್ತು ವಸತಿ ನಿಲಯಗಳ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಕರ್ನಾಟಕ ಸರಕಾರ
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ.**
**ಮುಖ್ಯ ವೈದ್ಯಾಧಿಕಾರಿಗಳ ಕಾರ್ಯಾಲಯ ಸಾರ್ವಜನಿಕ ಆಸ್ಪತ್ರೆ**
**ಯಲಬುರ್ಗಾ–583236**
**ತಾ॥ ಯಲಬುರ್ಗಾ ಜಿ॥ ಕೊಪ್ಪಳ**

ಕ್ರಸಂ.ಸಾ.ಆ.ಯ/ಹೊ.ಗು&ನಾ.ಕ್ಲಿ/2026–27/177 ದಿನಾಂಕ:19/08/2026

**ಇ–ಟೆಂಡರ್ ಅಧಿಸೂಚನೆ**
(ಇ–ಪ್ರೊಕ್ಯೂರಮೆಂಟ್ ಮುಖಾಂತರ www.ktppp.kar.gov.in)

**ವಿಷಯ:** ಸಾರ್ವಜನಿಕ ಆಸ್ಪತ್ರೆ ಯಲಬುರ್ಗಾಕ್ಕೆ 2026–27ನೇ ಸಾಲಿಗೆ ಹೊರಗುತ್ತಿಗೆ ಆಧಾರದ ಮೇಲೆ ಗ್ರೂಪ್–ಡಿ ಹಾಗೂ ಸ್ವಚ್ಛತಾ ಕಾರ್ಯಕ್ಕಾಗಿ ಸೇವಾ ಗುತ್ತಿಗೆ ಆಧಾರದ ಮೇಲೆ ನಾನ್–ಕ್ಲಿನಿಕಲ್ ಸಿಬ್ಬಂದಿ ಸೇವೆಯನ್ನು ಪಡೆಯಲು ಟೆಂಡರ್ ಕರೆಯುವ ಕುರಿತು.

ಸಾರ್ವಜನಿಕ ಆಸ್ಪತ್ರೆ ಯಲಬುರ್ಗಾ 2026–27 ನೇ ಸಾಲಿಗೆ ಹೊರಗುತ್ತಿಗೆ ಆಧಾರದ ಮೇಲೆ 07 ಗ್ರೂಪ್–ಡಿ ನೌಕರರನ್ನು ಹಾಗೂ ಸೇವಾ ಗುತ್ತಿಗೆ ಆಧಾರದ ಮೇಲೆ 07 ನಾನ್–ಕ್ಲಿನಿಕಲ್ ಸಿಬ್ಬಂದಿ ಸೇವೆಯನ್ನು ಪಡೆಯಲು ದ್ವಿ–ಲಕೋಟೆಯಲ್ಲಿ ಇ–ಪ್ರೊಕ್ಯೂರಮೆಂಟ್ ಮುಖಾಂತರ ಟೆಂಡರ್ ಕರೆಯಲಾಗಿದೆ. ಟೆಂಡರ್ ವಿವರಗಳು ಈ ಕೆಳಕಂಡಂತೆ ಇರುತ್ತವೆ.

**ವಿವರ : (1)** ಟೆಂಡರ್ ಸಲ್ಲಿಸುವ ಪ್ರಾರಂಭ **ದಿನಾಂಕ: 20.08.2026. (2)** ಟೆಂಡರ್ ಬಗ್ಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಕೊನೆಯ ದಿನಾಂಕ **ದಿನಾಂಕ: 29.08.2026ರ ಅಪರಾಹ್ನ 01.00 ಗಂಟೆಯೊಳಗೆ. (3)** ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ **ದಿನಾಂಕ: 04.09.2026 ರ ಸಾಯಂಕಾಲ 05.00 ಗಂಟೆಯೊಳಗೆ (4)** ಟೆಂಡರ್ ತಾಂತ್ರಿಕ ಬಿಡ್ ತೆರೆಯುವ ದಿನಾಂಕ ಮತ್ತು ಸ್ಥಳ **ದಿನಾಂಕ: 05.09.2026ರ ಸಾಯಂಕಾಲ 05.30** ಕ್ಕೆ ಮುಖ್ಯ ವೈದ್ಯಾಧಿಕಾರಿಗಳ ಕಚೇರಿ, ಯಲಬುರ್ಗಾ **(5)** ಟೆಂಡರ್ ಆರ್ಥಿಕ ಬಿಡ್ ತೆರೆಯುವ ದಿನಾಂಕ ಸ್ಥಳ **ದಿನಾಂಕ: 07.09.2026ರ ಬೆಳಿಗ್ಗೆ 11.30 ಗಂಟೆಗೆ.** ಮುಖ್ಯ ವೈದ್ಯಾಧಿಕಾರಿಗಳ ಕಚೇರಿ, ಯಲಬುರ್ಗಾ. **(6)** ಒಟ್ಟು ಟೆಂಡರ್‌ನ ಮೌಲ್ಯ **ರೂ: 23,52,147/– (7)** ಇ.ಎಮ್.ಡಿ **ರೂ: 47,043/–**
**(8) www.ktppp.kar.gov.in : DHFWS/2026-27/SE2405**
**(9)** ಸಂಪರ್ಕಿಸಬೇಕಾದ ವ್ಯಕ್ತಿ : ವಿಷಯ ನಿರ್ವಾಹಕರ ಮೊ.ಸಂ: **7975626979**

ಹೆಚ್ಚಿನ ವಿವರಗಳನ್ನು ಕಚೇರಿಯಲ್ಲಿ ರಜಾ ದಿನಗಳನ್ನು ಹೊರತುಪಡಸಿ ಪಡೆಯಬಹುದು.

**ಸಹಿ/– ಮುಖ್ಯ ವೈದ್ಯಾಧಿಕಾರಿಗಳು**
**ಸಾರ್ವಜನಿಕ ಆಸ್ಪತ್ರೆ ಯಲಬುರ್ಗಾ**

ವಾ.ಸಾ.ಸಂ.ಇ/ಕೊಪ್ಪಳ/300/ದೇಶಪಾಂಡೆಪಬ್ಲಿಸಿಟಿ/2026–27

# ಸಾಮಾಜಿಕ ನ್ಯಾಯದ ಆಶಯ ಮೈಗೂಡಿಸಿಕೊಳ್ಳಿ: ಮುಂಡರಗಿ ನಾಗರಾಜ




ಬಳ್ಳಾರಿ, 20– ಸಂವಿಧಾನದ ಪೀಠಿಕೆಯಲ್ಲಿ ಪ್ರತಿಪಾದಿಸಿರುವ ಸಾಮಾಜಿಕ ನ್ಯಾಯದ ಆಶಯವನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು ಎಂದು ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಗುರುವಾರ ಏರ್ಪಡಿಸಿದ್ದ ಸಾಮಾಜಿಕ ನ್ಯಾಯದ ಹರಿಕಾರ, ಹಿಂದುಳಿದ ವರ್ಗಗಳ ನೇತಾರ ಹಾಗೂ ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರ 111ನೇ ಜನ್ಮದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ವಿನೋಬಾ ಭಾವೆಯವರ ಭೂದಾನ ಚಳವಳಿಯ ಪ್ರೇರಣೆಯೊಂದಿಗೆ ರಾಜ್ಯದಲ್ಲಿ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರು 'ಉಳುವವನೇ ಒಡೆಯ' ಎಂಬ ಐತಿಹಾಸಿಕ ಭೂಸುಧಾರಣಾ ಕಾಯ್ದೆಯನ್ನು ಜಾರಿಗೆ ತಂದರು. ಬಡವರು, ದಲಿತರು ಹಾಗೂ ಹಿಂದುಳಿದ ವರ್ಗಗಳಿಗೆ ಭೂಮಿಯ ಹಕ್ಕು ನೀಡಿ, ಬಡತನ ನಿರ್ಮೂಲನೆಗೆ ಮತ್ತು ಸಾಮಾಜಿಕ ಸಮಾನತೆಗೆ ಅಡಿಪಾಯ ಹಾಕಿದ ಮಹಾನ್ ನಾಯಕ ಅರಸು ಎಂದು ಸ್ಮರಿಸಿದರು.

ಯುವಜನರು ಮತ್ತು ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣಗಳಲ್ಲಿ ವ್ಯರ್ಥವಾಗಿ ಸಮಯ ಕಳೆಯುವುದನ್ನು ನಿಲ್ಲಿಸಬೇಕು. ಮೊಬೈಲ್ ವ್ಯಾಮೋಹದಿಂದ ಹೊರಬಂದು ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಡಾ. ಬಿ.ಆರ್. ಅಂಬೇಡ್ಕರ್ ಅವರಂತಹ ನಾಯಕರ ಅಧ್ಯಯನ ಶೀಲತೆಯನ್ನು ಮಾದರಿಯಾಗಿಟ್ಟುಕೊಂಡು, ಜ್ಞಾನವರ್ಧಕ ಕೃತಿಗಳನ್ನು ಓದುವತ್ತ ಗಮನಹರಿಸಬೇಕು ಎಂದು ಸಲಹೆ ನೀಡಿದರು.

ಜಾತಿ, ಧರ್ಮ, ಭಾಷೆ ಮತ್ತು ಪ್ರಾದೇಶಿಕ ಭೇದಭಾವಗಳನ್ನು ಮರೆತು ದೇಶದ ಏಕತೆ, ಸಮಗ್ರತೆ ಮತ್ತು ಶಾಂತಿಯನ್ನು ಕಾಪಾಡುವ ಸಂವಿಧಾನದ ಸಂದೇಶವನ್ನು ಎಲ್ಲರೂ ಪಾಲಿಸಬೇಕೆಂದು ಸದ್ಭಾವನಾ ಪ್ರತಿಜ್ಞೆಯ ಮೂಲಕ ಕರೆ ನೀಡಿದರು.

ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಅವರು ಮಾತನಾಡಿ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಸಾಮಾಜಿಕ ನ್ಯಾಯದ ಹರಿಕಾರ ಡಿ. ದೇವರಾಜ ಅರಸು ಅವರ ದೂರದೃಷ್ಟಿ ಹಾಗೂ ಕೊಡುಗೆಗಳು ಇಂದಿಗೂ ಲಕ್ಷಾಂತರ ಜನರ ಬದುಕಿಗೆ ದಾರಿದೀಪವಾಗಿವೆ ಎಂದು ಹೇಳಿದರು.

ದೇವರಾಜ ಅರಸು ಅವರು ಅಂದಿನ ಕಾಲದಲ್ಲೇ ಸಮಾಜದ ವಿರೋಧವನ್ನು ಎದುರಿಸಿ, ಹಿಂದುಳಿದ ವರ್ಗಗಳ ಪರವಾಗಿ ದಿಟ್ಟ ಕಾಯ್ದೆಗಳನ್ನು ಜಾರಿಗೆ ತಂದರು. ಅವರ ಪರಿಕಲ್ಪನೆಯ ವಸತಿ ನಿಲಯಗಳು ಮತ್ತು ರಾಜಕೀಯ ಮೀಸಲಾತಿಯ ಫಲವಾಗಿಯೇ ಇಂದು ತಳಸಮುದಾಯಗಳ ಲಕ್ಷಾಂತರ ಜನರು ಜನಪ್ರತಿನಿಧಿಗಳಾಗಿ, ಸಮಾಜದ ಮುಖ್ಯವಾಹಿನಿಯಲ್ಲಿ ಗುರುತಿಸಿಕೊಳ್ಳಲು ಸಾಧ್ಯವಾಗಿದೆ ಎಂದರು.

ಭಾರತಕ್ಕೆ ಆಧುನಿಕ ತಂತ್ರಜ್ಞಾನ ಮತ್ತು ಕಂಪ್ಯೂಟರ್ ಯುಗವನ್ನು ಪರಿಚಯಿಸಿದ ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ ಚಿಂತನೆಗಳನ್ನು ಸ್ಮರಿಸಿ, ಯುವ ಸಮುದಾಯ ಅವರಂತೆ ಉನ್ನತ ಗುರಿಗಳನ್ನು ಹೊಂದಿರಬೇಕು ಎಂದು ಕರೆ ನೀಡಿದರು.

ಮುಂದೆ ಗುರಿ, ಹಿಂದೆ ಗುರು ಇರಬೇಕು ಎಂಬ ಹಿರಿಯರ ಮಾತಿನಂತೆ, ಯುವಕರು ಜೀವನದಲ್ಲಿ ಸ್ಪಷ್ಟ ಗುರಿಯಿಟ್ಟುಕೊಂಡು ಮುನ್ನಡೆದರೆ ಯಶಸ್ಸು ಖಂಡಿತ ಸಾಧ್ಯ. ಹಿರಿಯರು ಹಾಕಿಕೊಟ್ಟ ಸಾಮಾಜಿಕ ನ್ಯಾಯದ ಹಾದಿಯಲ್ಲಿ ನಾವೆಲ್ಲರೂ ಸಾಗಬೇಕಿದೆ ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್. ಎನ್ ಅವರು ಮಾತನಾಡಿ, ಕರ್ನಾಟಕದಲ್ಲಿ ಸಾಮಾಜಿಕ ಅಸಮಾನತೆಯನ್ನು ಹೋಗಲಾಡಿಸಲು ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರು ಜಾರಿಗೆ ತಂದ 'ಉಳುವವನೇ ಹೊಲದೊಡೆಯ' (ಭೂಸುಧಾರಣಾ ಕಾಯ್ದೆ) ಕ್ರಾಂತಿಕಾರಿ ಹೆಜ್ಜೆಯನ್ನು ಅವರು ಸ್ಮರಿಸಿದರು. ಶೋಷಿತರಿಗೆ ಭೂಮಿಯ ಒಡೆತನ ನೀಡಿ ಸಾಮಾಜಿಕ ನ್ಯಾಯ ದೊರಕಿಸಿಕೊಟ್ಟ ಅರಸು ಅವರ ಆಡಳಿತ ಇಂದಿಗೂ ಮಾದರಿಯಾಗಿದೆ ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ನಮಗೆ ನೀಡಿರುವ ಸಂವಿಧಾನವೇ ನಮ್ಮ ಅತ್ಯುನ್ನತ ಶಕ್ತಿ. ಶ್ರಮಜೀವಿಗಳಾಗಿ ಶ್ರಮಪಟ್ಟರೆ ಸಂವಿಧಾನ ನೀಡಿರುವ ಉನ್ನತ ಹುದ್ದೆಗಳನ್ನು ಪ್ರತಿಯೊಬ್ಬರೂ ಅಲಂಕರಿಸಲು ಸಾಧ್ಯ. ವಿದ್ಯಾರ್ಥಿಗಳು ಕೇವಲ ಅದೃಷ್ಟವನ್ನು ನಂಬದೆ ಕಠಿಣ ಪರಿಶ್ರಮ, ನಿರಂತರ ಅಧ್ಯಯನ ನಡೆಸಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಸತ್ಯಂ ಶಿಕ್ಷಣ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಆಲಂಭಾಷ ಅವರು ದಿವಂಗತ ಡಿ.ದೇವರಾಜು ಅರಸು ಅವರ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿದ್ಯಾರ್ಥಿ ನಿಲಯಗಳಲ್ಲಿ ಅತಿ ಹೆಚ್ಚು ಅಂಕ ಪಡೆದ ಹಾಗೂ ವಿವಿಧ ಚಟುವಟಿಕೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಸನ್ಮಾನ, ಪ್ರಶಸ್ತಿ ವಿತರಣೆ ಮಾಡಲಾಯಿತು.

ಇದಕ್ಕೂ ಮುನ್ನ ಸಂವಿಧಾನ ಪ್ರಸ್ತಾವನೆಯನ್ನು ಬೋಧಿಸಲಾಯಿತು. ಇದೇ ವೇಳೆ ಭಾರತದ ಮಾಜಿ ಪ್ರಧಾನಿ ದಿವಂಗತ ರಾಜೀವ್ ಗಾಂಧಿ ಅವರ ಜನ್ಮದಿನದ ಅಂಗವಾಗಿ ಸದ್ಭಾವನಾ ದಿನಾಚರಣೆ ಅಂಗವಾಗಿ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಡಿ.ದೇವರಾಜ ಅರಸು ವೇದಿಕೆಯ ಜಿಲ್ಲಾಧ್ಯಕ್ಷ ಕಲ್ಲುಕಂಭ ಪಂಪಾಪತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ ಬಿ.ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಹಿಂದುಳಿದ ವರ್ಗಗಳ ವಿವಿಧ ಸಂಘ– ಸಂಸ್ಥೆಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ– ಸಿಬ್ಬಂದಿ ವರ್ಗ, ವಸತಿ ನಿಲಯಗಳ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

'KARUNADA BELAGU' KANNADA DAILY NEWSPAPER PRINTEDE BY SANTOSH PUBLISHER AND OWNED BY SANTOSH DESHPANDE, PRINTED AT KALLINATHA PRINTING, WARD NO.25 FIRDOS NAGAR, NEAR SARAKARI NAUKARARA BHAVANA KOPPAL
PRGI NO: KARKAN/2023/89022 PAGES-6, DATE 24/10/2023. PUBLISHED AT NO.3-4-358, WARD NO.24, INDRAKEEL NAGAR, KOPPAL-583231, KARNATAKA STATE, EDITOR:SANTOSH DESHPANDE, CELL-98800088367.